VOLUME: 16 | 18 JULY 2026 | ಶನಿವಾರ | RS: 2 | PAGE: 06 ISSUE: 156 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಬಾಲಿವುಡ್ ನಟಿ ಪ್ರಿಯಾಂಕಾ ಚೋಪ್ರಾ ಅವರಿಗೆ 44ನೇ ಹುಟ್ಟುಹಬ್ಬದ ಸಂಭ್ರಮ. ಇದೇ ವೇಳೆ ಅವರ ಮುಂದಿನ ಸಿನಿಮಾ 'ವಾರಣಾಸಿ' ಫಸ್ಟ್ ಲುಕ್‌ನ್ನು ನಿರ್ದೇಶಕ ಎಸ್‌ಎಸ್ ರಾಜಮೌಳಿ ಅನಾವರಣ ಮಾಡಿದ್ದಾರೆ. ಮಹೇಶ್ ಬಾಬು ಮತ್ತು ಪೃಥ್ವಿರಾಜ್ ಸುಕುಮಾರನ್ ಕೂಡ ನಟಿಸಿರುವ ಈ ಚಿತ್ರವು ಏಪ್ರಿಲ್ 7, 2027 ರಂದು ಬಿಡುಗಡೆ ಯಾಗಲಿದೆ.

BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ದೇವೇಗೌಡರ ಧರ್ಮಪತ್ನಿ ವಿಧಿವಶ

ಬೆಂಗಳೂರು: ಭಾರತದ ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಅವರ ರಾಜಕೀಯ ಜೀವನದ ಯಶಸ್ಸಿನ ಹಿಂದೆ ಸದಾ ಮೌನವಾಗಿ ನಿಂತಿದ್ದ ವ್ಯಕ್ತಿತ್ವ ಎಂದರೆ ಅವರ ಧರ್ಮಪತ್ನಿ ಚೆನ್ನಮ್ಮ. ರಾಜಕೀಯ ಪ್ರಚಾರದಿಂದ ದೂರ ಉಳಿದಿದ್ದರೂ, ಕುಟುಂಬದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿ, ದೇವೇಗೌಡರ ಸಾರ್ವಜನಿಕ ಬದುಕಿಗೆ ಭದ್ರ ಅಡಿಪಾಯ ಹಾಕಿದ ಮಹಿಳೆಯಾಗಿ ಅವರು ಗುರುತಿಸಿಕೊಂಡಿದ್ದರು. ಶನಿವಾರ ಅವರು ವಯೋಸಹಜ ಅನಾರೋಗ್ಯದಿಂದ ನಿಧನರಾಗಿದ್ದು, ಅವರ ಅಗಲಿಕೆಗೆ ರಾಜ್ಯದ ರಾಜಕೀಯ ಹಾಗೂ ಸಾಮಾಜಿಕ ವಲಯ ತೀವ್ರ ಸಂತಾಪ ವ್ಯಕ್ತಪಡಿಸಿದೆ.

ಚೆನ್ನಮ್ಮ ಅವರು ಗ್ರಾಮೀಣ ಹಿನ್ನೆಲೆಯಿಂದ ಬಂದ ಸರಳ ಸ್ವಭಾವದ ಮಹಿಳೆ. ಐಷಾರಾಮಿ ಬದುಕಿಗಿಂತ ಕುಟುಂಬದ ಮೌಲ್ಯಗಳು, ಶಿಸ್ತು ಹಾಗೂ ಸಂಪ್ರದಾಯಗಳಿಗೆ ಹೆಚ್ಚಿನ ಆದ್ಯತೆ ನೀಡಿದ ಅವರು, 1954ರ ಮೇ 25ರಂದು ಹಾಸನ ಜಿಲ್ಲೆಯ ಮುತ್ತಿಗೆ ಹಿರೇಹಳ್ಳಿಯಲ್ಲಿ ಎಚ್.ಡಿ. ದೇವೇಗೌಡ ಅವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ದೇವೇಗೌಡರು ರಾಜಕೀಯದಲ್ಲಿ ತೊಡಗಿಸಿಕೊಂಡಿದ್ದ ಸಮಯದಲ್ಲಿ ಕುಟುಂಬದ ಸಂಪೂರ್ಣ ಹೊಣೆಗಾರಿಕೆಯನ್ನು ತಮ್ಮ ಹೆಗಲ ಮೇಲೆ ಹೊತ್ತು, ಅವರಿಗೆ ಸಾರ್ವಜನಿಕ ಜೀವನದಲ್ಲಿ ನಿರಾಳವಾಗಿ ಕೆಲಸ ಮಾಡುವ ಅವಕಾಶ ಕಲ್ಪಿಸಿದರು.

> ರಾಜಕೀಯ ಕುಟುಂಬದ ಸದಸ್ಯೆಯಾಗಿದ್ದರೂ ಚೆನ್ನಮ್ಮ ಅವರು ಚುನಾವಣಾ ಪ್ರಚಾರ, ರಾಜಕೀಯ ಭಾಷಣ ಅಥವಾ ಪಕ್ಷದ ಚಟುವಟಿಕೆಗಳಲ್ಲಿ ಎಂದಿಗೂ ಮುಂಚೂಣಿಯಲ್ಲಿ ಕಾಣಿಸಿಕೊಳ್ಳಲಿಲ್ಲ. ಪ್ರಚಾರದ ಬೆಳಕಿನಿಂದ ದೂರವಿದ್ದು ಸರಳ ಜೀವನ ನಡೆಸುವುದು ಅವರ ವ್ಯಕ್ತಿತ್ವದ ಪ್ರಮುಖ ಲಕ್ಷಣವಾಗಿತ್ತು. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಸೇರಿದಂತೆ ಮಕ್ಕಳ ಶಿಕ್ಷಣ, ಸಂಸ್ಕಾರ ಹಾಗೂ ಕುಟುಂಬದ ಮೌಲ್ಯಗಳನ್ನು ಬೆಳೆಸುವಲ್ಲಿ ಅವರು ಪ್ರಮುಖ ಪಾತ್ರವಹಿಸಿದ್ದರು. ದೇವೇಗೌಡರ ನಿವಾಸಕ್ಕೆ ಆಗಮಿಸುವ ರಾಜಕೀಯ ನಾಯಕರು, ಕಾರ್ಯಕರ್ತರು ಹಾಗೂ ಅತಿಥಿಗಳನ್ನು ಆತ್ಮೀಯವಾಗಿ ಸ್ವಾಗತಿಸಿ ಆತಿಥ್ಯ ನೀಡುವ ಗುಣದಿಂದ ಚೆನ್ನಮ್ಮ ಅವರು ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದರು.

ರಾಜಕೀಯ ಕುಟುಂಬದ ಸದಸ್ಯೆಯಾಗಿದ್ದರೂ ಚೆನ್ನಮ್ಮ ಅವರು ಚುನಾವಣಾ ಪ್ರಚಾರ, ರಾಜಕೀಯ ಭಾಷಣ ಅಥವಾ ಪಕ್ಷದ ಚಟುವಟಿಕೆಗಳಲ್ಲಿ ಎಂದಿಗೂ ಮುಂಚೂಣಿಯಲ್ಲಿ ಕಾಣಿಸಿಕೊಳ್ಳಲಿಲ್ಲ. ಪ್ರಚಾರದ ಬೆಳಕಿನಿಂದ ದೂರವಿದ್ದು ಸರಳ ಜೀವನ ನಡೆಸುವುದು ಅವರ ವ್ಯಕ್ತಿತ್ವದ



ಪ್ರಮುಖ ಲಕ್ಷಣವಾಗಿತ್ತು. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಸೇರಿದಂತೆ ಮಕ್ಕಳ ಶಿಕ್ಷಣ, ಸಂಸ್ಕಾರ ಹಾಗೂ ಕುಟುಂಬದ ಮೌಲ್ಯಗಳನ್ನು ಬೆಳೆಸುವಲ್ಲಿ ಅವರು ಪ್ರಮುಖ ಪಾತ್ರವಹಿಸಿದ್ದರು.

ದೇವೇಗೌಡರ ನಿವಾಸಕ್ಕೆ ಆಗಮಿಸುವ ರಾಜಕೀಯ ನಾಯಕರು, ಕಾರ್ಯಕರ್ತರು ಹಾಗೂ ಅತಿಥಿಗಳನ್ನು ಆತ್ಮೀಯವಾಗಿ ಸ್ವಾಗತಿಸಿ ಆತಿಥ್ಯ ನೀಡುವ ಗುಣದಿಂದ ಚೆನ್ನಮ್ಮ ಅವರು ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದರು.

ಸರಳ ಸೀರೆ, ಕಡಿಮೆ ಆಭರಣ ಹಾಗೂ ಸಾಮಾನ್ಯ ಜೀವನಶೈಲಿಯ ಮೂಲಕ ಅವರು ಮಾದರಿಯಾಗಿದ್ದರು. ಅಧಿಕಾರದ ವೈಭವಕ್ಕಿಂತ ಮಾನವೀಯತೆ ಮತ್ತು ಆತ್ಮೀಯತೆಗೆ ಹೆಚ್ಚಿನ ಮೌಲ್ಯ ನೀಡುತ್ತಿದ್ದರು.

ರಾಜಕೀಯದಲ್ಲಿ ಅಧಿಕಾರದ ಏರಿಳಿತಗಳು, ಚುನಾವಣಾ ಸೋಲುಗಳು ಹಾಗೂ ಸಂಕಷ್ಟದ ಸಂದರ್ಭಗಳಲ್ಲೂ ದೇವೇಗೌಡರಿಗೆ ಧೈರ್ಯ ತುಂಬಿದ ಬೆಂಬಲದ ಶಕ್ತಿಯಾಗಿದ್ದವರು ಚೆನ್ನಮ್ಮ. ಕುಟುಂಬದಲ್ಲಿ ಆತ್ಮವಿಶ್ವಾಸ ಮತ್ತು ಒಗ್ಗಟ್ಟನ್ನು ಕಾಪಾಡುವಲ್ಲಿ ಅವರು ವಹಿಸಿದ್ದ ಪಾತ್ರ ಮಹತ್ವದ್ದಾಗಿದೆ. ದೇವೇಗೌಡರ ರಾಜಕೀಯ ಯಶಸ್ಸಿನ ಹಿಂದೆ ಚೆನ್ನಮ್ಮ ಅವರ ತ್ಯಾಗ, ಸಹನೆ ಮತ್ತು ಮೌನ ಬೆಂಬಲವೇ ದೊಡ್ಡ ಶಕ್ತಿಯಾಗಿತ್ತು ಎಂದು ರಾಜಕೀಯ ವಲಯದ ಅನೇಕರು ಅಭಿಪ್ರಾಯಪಡುತ್ತಾರೆ.

ಕುಟುಂಬವನ್ನು ಒಗ್ಗೂಡಿಸಿ, ಸಂಪ್ರದಾಯಗಳನ್ನು ಉಳಿಸಿಕೊಂಡು, ಪತಿಯ ಸಾರ್ವಜನಿಕ ಬದುಕಿಗೆ ದೃಢ ಬೆಂಬಲ ನೀಡಿದ ಚೆನ್ನಮ್ಮ ಅವರು ಅನೇಕ ಮಹಿಳೆಯರಿಗೆ ಆದರ್ಶವಾಗಿದ್ದಾರೆ.

ಸಾರ್ವಜನಿಕ ವೇದಿಕೆಯಲ್ಲಿ ಹೆಚ್ಚು ಕಾಣಿಸಿಕೊಳ್ಳದಿದ್ದರೂ, ತಮ್ಮ ಸರಳತೆ, ನಡವಳಿಕೆ ಮತ್ತು ಕುಟುಂಬದ ಮೇಲಿನ ಬದ್ಧತೆಯಿಂದ ಜನರ ಗೌರವವನ್ನು ಗಳಿಸಿದ್ದರು.

ಭಾರತದ ರಾಜಕೀಯ ಇತಿಹಾಸದಲ್ಲಿ ಎಚ್.ಡಿ. ದೇವೇಗೌಡ ಅವರ ಹೆಸರು ಶಾಶ್ವತವಾಗಿ ಉಳಿಯುವಂತೆಯೇ, ಅವರ ಬದುಕಿನ ಹಿಂದಿನ ಮೌನ ಶಕ್ತಿಯಾಗಿ ಚೆನ್ನಮ್ಮ ಅವರ ತ್ಯಾಗ, ಸೇವೆ ಮತ್ತು ಸರಳ ಜೀವನವೂ ಸದಾ ಸ್ಮರಣೀಯವಾಗಿರಲಿದೆ.

## ಆಪರೇಷನ್ ಸಿಂಧೂರದ ಬಳಿಕ ಗಡಿಯಲ್ಲಿ ಮತ್ತೆ ಗುಂಡಿನಕಾಳಗ

ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ರಾಜೌರಿ ವಲಯದ ನಿಯಂತ್ರಣ ರೇಖೆ (ಎಲ್‌ಒಸಿ) ಬಳಿ ಶುಕ್ರವಾರ ರಾತ್ರಿ ಉಗ್ರರು ಒಳನುಸುಳಲು ನಡೆಸಿದ ಯತ್ನವನ್ನು ಭಾರತೀಯ ಸೇನೆ ವಿಫಲಗೊಳಿಸಿದೆ. ಸುಮಾರು ಎರಡು ಗಂಟೆಗಳ ಕಾಲ ಉಗ್ರರು ಮತ್ತು ಭದ್ರತಾ ಪಡೆಗಳ ನಡುವೆ ತೀವ್ರ ಗುಂಡಿನ ಚಕಮಕಿ ನಡೆದಿದ್ದು, 'ಆಪರೇಷನ್ ಸಿಂಧೂರ್' ಬಳಿಕ ನಡೆದ ಮೊದಲ ಪ್ರಮುಖ ಘರ್ಷಣೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಾಹಿತಿಯ ಪ್ರಕಾರ, ಶುಕ್ರವಾರ ರಾತ್ರಿ ಉಗ್ರರು ಗಡಿ ದಾಟಲು ಪ್ರಯತ್ನಿಸಿದ ವೇಳೆ ಗಡಿಯಲ್ಲಿ ಕಾವಲು ಕಾಯುತ್ತಿದ್ದ ಭಾರತೀಯ ಸೇನಾ ಯೋಧರು ಅವರನ್ನು ಪತ್ತೆಹಚ್ಚಿ ತಕ್ಷಣ ಪ್ರತಿದಾಳಿ ನಡೆಸಿದರು. ಬಳಿಕ ಬೆಳಿಗ್ಗೆ ಸುಮಾರು 9.50ರ ವೇಳೆಗೆ ಪಾಕಿಸ್ತಾನದ ಕಡೆಯಿಂದ ಅಪ್ರಚೋದಿತ ಗುಂಡಿನ ದಾಳಿ ಆರಂಭವಾಗಿದ್ದು, ಅದಕ್ಕೆ ಭಾರತೀಯ ಸೇನೆ ಸಮರ್ಪಕವಾಗಿ ಪ್ರತಿಕ್ರಿಯೆ ನೀಡಿದೆ. ಈ ಘರ್ಷಣೆಯಲ್ಲಿ ಯಾವುದೇ ಸಾವು-ನೋವು ಸಂಭವಿಸಿಲ್ಲ ಎಂದು ಸೇನಾ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಪರಿಸ್ಥಿತಿ ಸಂಪೂರ್ಣ ನಿಯಂತ್ರಣದಲ್ಲಿದ್ದು, ಗಡಿ ಪ್ರದೇಶದಲ್ಲಿ ಭದ್ರತೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ. ಶನಿವಾರ ಬೆಳಿಗ್ಗೆಯಿಂದಲೇ ರಾಜೌರಿ ಗಡಿ ಪ್ರದೇಶದಲ್ಲಿ ಉಗ್ರರಿಗಾಗಿ ವ್ಯಾಪಕ ಶೋಧ ಕಾರ್ಯಾಚರಣೆ ಆರಂಭಿಸಲಾಗಿದೆ. ಉಗ್ರರು ಅಡಗಿರುವ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು ಹೆಚ್ಚುವರಿ ಪಡೆಗಳನ್ನು ನಿಯೋಜಿಸಲಾಗಿದ್ದು, ಡ್ರೋನ್‌ಗಳು ಮತ್ತು ಆಧುನಿಕ ನಿಗಾ ಸಾಧನಗಳ ಮೂಲಕ ಪ್ರದೇಶದ ಮೇಲೆ ಕಟ್ಟೆಚ್ಚರ ವಹಿಸಲಾಗಿದೆ.

ಭದ್ರತಾ ವಿಶ್ಲೇಷಕರ ಪ್ರಕಾರ, ಗಡಿ ಭಾಗದಲ್ಲಿ ಉದ್ವಿಗ್ನತೆ ಸೃಷ್ಟಿಸುವ ಮೂಲಕ ದೇಶದ ಗಮನವನ್ನು ಬೇರೆಡೆಗೆ ಸೆಳೆಯುವ ಉದ್ದೇಶದಿಂದ ಪಾಕಿಸ್ತಾನ ಕಡೆಯಿಂದ ಎಲ್‌ಒಸಿ ಉದ್ದಕ್ಕೂ ಗುಂಡಿನ ದಾಳಿ ನಡೆಸಲಾಗಿದೆ ಎಂದು ಹೇಳಲಾಗಿದೆ. ಗಮನಾರ್ಹವಾಗಿ, 2025ರ ಏಪ್ರಿಲ್ 22ರಂದು ಕಾಶ್ಮೀರದ ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ಉಗ್ರರು 26 ಪ್ರವಾಸಿಗರನ್ನು ಹತ್ಯೆಗೈದಿದ್ದರು.

## ಕೆಆರ್ ಸರ್ಕಲ್‌ನಲ್ಲಿ ಮತ್ತೆ ಬಿಎಂಟಿಸಿ ಬಸ್ ಅಪಘಾತ: ಆಟೋ ಚಾಲಕ ಸಾವು

ಬೆಂಗಳೂರು: ನಗರದ ಕೆಆರ್ ಸರ್ಕಲ್ ಬಳಿ ಬಿಎಂಟಿಸಿ ಬಸ್ ಅಪಘಾತಗಳ ಸರಣಿ ಮುಂದುವರಿದಿದ್ದು, ಕೆಲ ದಿನಗಳ ಹಿಂದಷ್ಟೇ ಎರಡು ಬಿಎಂಟಿಸಿ ಬಸ್‌ಗಳ ನಡುವೆ ಸಂಭವಿಸಿದ್ದ ಭೀಕರ ಅಪಘಾತದ ಬೆನ್ನಲ್ಲೇ ಶನಿವಾರ ಮತ್ತೊಂದು ದುರ್ಘಟನೆ ನಡೆದಿದೆ. ಈ ಬಾರಿ ವಿದ್ಯುತ್ ಚಾಲಿತ ಬಿಎಂಟಿಸಿ ಬಸ್ ಡಿಕ್ಕಿ ಹೊಡೆದ ಪರಿಣಾಮ 60 ವರ್ಷದ ಆಟೋ ಚಾಲಕ ಮೃತಪಟ್ಟಿದ್ದಾರೆ.

ಮೃತರನ್ನು ಕೆ.ಆರ್.ಪುರ ನಿವಾಸಿ ಕೃಷ್ಣಮೂರ್ತಿ ಎಂದು ಗುರುತಿಸಲಾಗಿದೆ. ಶನಿವಾರ ಮಧ್ಯಾಹ್ನ ಕೆಆರ್ ಸರ್ಕಲ್ ಬಳಿ ಈ ಅಪಘಾತ ಸಂಭವಿಸಿದ್ದು, ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಪೊಲೀಸರ ಮಾಹಿತಿ ಪ್ರಕಾರ, ಶೇಷಾದ್ರಿ ರಸ್ತೆಯಿಂದ ಕೆಆರ್ ವೃತ್ತದ ಕಡೆಗೆ ಬರುತ್ತಿದ್ದ ಎಂ-51 ಎಎ-6648 ನೋಂದಣಿ ಸಂಖ್ಯೆಯ ವಿದ್ಯುತ್ ಚಾಲಿತ ಬಿಎಂಟಿಸಿ ಬಸ್ ರಸ್ತೆ ಬದಿಯಲ್ಲಿ ನಿಲ್ಲಿಸಿದ್ದ ಆಟೋಗೆ ರಭಸವಾಗಿ ಡಿಕ್ಕಿ ಹೊಡೆದಿದೆ. ಬಳಿಕ ನಿಯಂತ್ರಣ ತಪ್ಪಿದ ಬಸ್ ಮುಂದಿದ್ದ ವಿದ್ಯುತ್ ಕಂಬಕ್ಕೂ ಗುದ್ದಿದೆ.



# ಅನಾಥ ವಾಹನಗಳ ತೆರವಿಗೆ ಚಾಲನೆ

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸಾರ್ವಜನಿಕ ರಸ್ತೆಗಳನ್ನು ಅತಿಕ್ರಮಿಸಿಕೊಂಡಿರುವ ಬಿಡಾಡಿ ವಾಹನಗಳ ತೆರವು ಕಾರ್ಯಕ್ಕೆ ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಗಾಂಧಿನಗರ ವಿಧಾನಸಭಾ ಕ್ಷೇತ್ರದ ಎಂ.ಡಿ. ಬ್ಲಾಕ್‌ನ ವರಾಹಿ ದೇವಸ್ಥಾನದ ಬಳಿ ಶನಿವಾರ ಸಾಂಕೇತಿಕ ಚಾಲನೆ ನೀಡಿದರು.

ನಗರದ ರಸ್ತೆಗಳಲ್ಲಿ ದೀರ್ಘಕಾಲದಿಂದ ನಿಲ್ಲಿಸಲಾಗಿರುವ ಹಾಗೂ ಸಾರ್ವಜನಿಕ ಸಂಚಾರಕ್ಕೆ ಅಡಚಣೆ ಉಂಟುಮಾಡುತ್ತಿರುವ ಬಿಡಾಡಿ ವಾಹನಗಳನ್ನು ಗುರುತಿಸಿ ತೆರವುಗೊಳಿಸುವ ಉದ್ದೇಶದಿಂದ ಈ ವಿಶೇಷ ಕಾರ್ಯಾಚರಣೆ ಆರಂಭಿಸಲಾಗಿದೆ.

ಅಸ್ತ್ರಂ ತಂತ್ರಾಂಶದ ಮೂಲಕ ಸಂಗ್ರಹಿಸಿರುವ ಮಾಹಿತಿಯಂತೆ, ಸಂಚಾರಿ ಪೊಲೀಸರು ಇದುವರೆಗೆ 2,751 ಬಿಡಾಡಿ ವಾಹನಗಳನ್ನು ಗುರುತಿಸಿದ್ದು, ಸಾರ್ವಜನಿಕರು ನೀಡಿರುವ ಮಾಹಿತಿಯ ಆಧಾರದ ಮೇಲೆ ಮತ್ತಷ್ಟು 1,498 ವಾಹನಗಳನ್ನು ಗುರುತಿಸಲಾಗಿದೆ. ಈ ಮೂಲಕ ಒಟ್ಟು 4,249 ಬಿಡಾಡಿ ವಾಹನಗಳ ಪಟ್ಟಿ ಸಿದ್ಧವಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಈಗಾಗಲೇ 1,034 ವಾಹನಗಳಿಗೆ ನೋಟಿಸ್ ಅಂಟಿಸಲಾಗಿದ್ದು, ಈ ಪೈಕಿ 72 ವಾಹನಗಳ ಮಾಲೀಕರು ದಂಡ ಪಾವತಿಸಿ ತಮ್ಮ ವಾಹನಗಳನ್ನು ಬಿಡಿಸಿಕೊಂಡಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕ ದಿನೇಶ್ ಗುಂಡೂರಾವ್, ಕೇಂದ್ರ ನಗರ ಪಾಲಿಕೆ ಆಯುಕ್ತ ಜಿ. ಜಗದೀಶ್, ಅಪರ ಆಯುಕ್ತ ವೆಂಕಟಾ ಚಲಪತಿ, ಜಂಟಿ ಆಯುಕ್ತ ಹೇಮಂತ್ ಶರಣ್, ಮುಖ್ಯ ಅಭಿಯಂತರ ವಿಜಯ್ ಕುಮಾರ್ ಹರಿದಾಸ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮುಂದುವರೆದ ಸಂಪುಟ ವಿಸ್ತರಣೆ ಸರ್ಕಸ್

ಬೆಂಗಳೂರು: ರಾಜ್ಯ ಸಚಿವ ಸಂಪುಟ ವಿಸ್ತರಣೆ ಪ್ರಕ್ರಿಯೆ ಚುರುಕುಗೊಂಡಿರುವ ಹಿನ್ನೆಲೆಯಲ್ಲಿ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಬೆಂಗಳೂರಿನ ಸದಾಶಿವನಗರದ ನಿವಾಸದಲ್ಲಿ ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿದರು.

ಇತ್ತೀಚೆಗೆ ದೆಹಲಿಯಲ್ಲಿ ಹೈಕಮಾಂಡ್ ನಾಯಕರೊಂದಿಗೆ ಸಂಪುಟ ವಿಸ್ತರಣೆ ಕುರಿತು ನಡೆದ ಸಭೆಯ ಮಧ್ಯೆಯೇ ಖರ್ಗೆ ತುರ್ತಾಗಿ ಬೆಂಗಳೂರಿಗೆ ಮರಳಿದ್ದರು.

ಈ ಹಿನ್ನೆಲೆಯಲ್ಲಿ ಸಚಿವ ಸ್ಥಾನಕ್ಕೆ ಸಂಬಂಧಿಸಿದ ಅಂತಿಮ ಪಟ್ಟಿಯ ಕುರಿತು ಸಮಾಲೋಚನೆ ನಡೆಸಲಾಗಿದೆ ಎನ್ನಲಾಗಿದೆ.

ಸಿಎಂ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ಧಪಡಿಸಿದ್ದ ಪಟ್ಟಿಯಲ್ಲಿ 11 ಹಿರಿಯ ಮಾಜಿ ಸಚಿವರ ಹೆಸರುಗಳಿದ್ದವು. ಆದರೆ, ಈ ಪಟ್ಟಿಗೆ ಹೈಕಮಾಂಡ್ ಆಕ್ಷೇಪ ವ್ಯಕ್ತಪಡಿಸಿದ್ದು, ಅದರಲ್ಲಿ ಶೇ.50ರಷ್ಟು ಹೆಸರುಗಳನ್ನು ಕೈಬಿಡುವಂತೆ ಸೂಚನೆ ನೀಡಿದೆ ಎನ್ನಲಾಗಿದೆ.

11 ಹಿರಿಯ ನಾಯಕರ ಪೈಕಿ ಯಾರಿಗೆ ಅವಕಾಶ



ನೀಡಬೇಕು ಹಾಗೂ ಯಾರ ಹೆಸರನ್ನು ಕೈಬಿಡಬೇಕು ಎಂಬುದರ ಬಗ್ಗೆ ಖರ್ಗೆ ಅವರೊಂದಿಗೆ ಸಿಎಂ ಚರ್ಚೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಉಳಿದ 32 ಆಕಾಂಕ್ಷಿಗಳ ಪೈಕಿ ಸಚಿವ ಸ್ಥಾನಕ್ಕೆ ಆದ್ಯತೆ ನೀಡಬೇಕಾದವರ ಕುರಿತು ಸಹ ಸಮಾಲೋಚನೆ ನಡೆದಿರುವ ಸಾಧ್ಯತೆ ಇದೆ.

ಹಿರಿಯ ನಾಯಕರ ಅಂತಿಮ ಆಯ್ಕೆ ಕುರಿತು ರಾಹುಲ್ ಗಾಂಧಿ ಅವರೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಮಲ್ಲಿಕಾರ್ಜುನ ಖರ್ಗೆ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಇದೇ ವೇಳೆ ಕಾಂಗ್ರೆಸ್ ಶಾಸಕ ಅಜಯ್ ಸಿಂಗ್ ಅವರು ಖರ್ಗೆ ಅವರನ್ನು ಭೇಟಿ ಮಾಡಿ ಸಚಿವ ಸ್ಥಾನಕ್ಕೆ ತಮ್ಮನ್ನು ಪರಿಗಣಿಸುವಂತೆ ಮನವಿ ಮಾಡಿದ್ದಾರೆ. ಶಾಸಕ ಎಂ. ಕೃಷ್ಣಪ್ಪ ಕೂಡ ಸಚಿವ ಸ್ಥಾನಕ್ಕಾಗಿ ಖರ್ಗೆ ಅವರ ಮುಂದೆ ಬೇಡಿಕೆ ಸಲ್ಲಿಸಿದ್ದಾರೆ.

## ಕೃಷಿಗೆ ನೀರು ಬಳಸಬೇಡಿ: ಸಿಎಂ ಡಿಕೆಶಿ ಸೂಚನೆ

ಬೆಂಗಳೂರು: ರಾಜ್ಯದಲ್ಲಿ ಮಳೆ ಕೊರತೆ ಹಿನ್ನೆಲೆಯಲ್ಲಿ ಜಲಾಶಯಗಳಲ್ಲಿನ ನೀರಿನ ಮಟ್ಟ ಆತಂಕಕಾರಿಯಾಗಿ ಕುಸಿದಿರುವುದರಿಂದ, ರೈತರು ಯಾವುದೇ ಕಾರಣಕ್ಕೂ ಕೃಷಿ ಚಟುವಟಿಕೆಗಳಿಗೆ ನೀರು ಬಳಸಬಾರದು. ಸರ್ಕಾರ ಬಿಡುಗಡೆ ಮಾಡಿರುವ ನೀರು ಕುಡಿಯುವ ಉದ್ದೇಶಕ್ಕಷ್ಟೇ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತೊಮ್ಮೆ ಸ್ಪಷ್ಟಪಡಿಸಿದರು.

> ಜಲಾಶಯಗಳ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ರೈತರು ಬಿತ್ತನೆ ಹಾಗೂ ನಾಟಿ ಕಾರ್ಯಗಳನ್ನು ಕೈಗೊಳ್ಳಬೇಕು. ಬೆಳೆ ಬೆಳೆಸಿ ಬಳಿಕ ನೀರು ಬಿಡುವಂತೆ ಸರ್ಕಾರದ ಮೇಲೆ ಒತ್ತಡ ಹೇರುವುದು ಸರಿಯಲ್ಲ. ಅಣೆಕಟ್ಟುಗಳು ಭರ್ತಿಯಾದರೆ ಕೃಷಿಗೂ ನೀರು ಒದಗಿಸಲಾಗುವುದು. ಸದ್ಯಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮುಖ್ಯಮಂತ್ರಿ ಮನವಿ ಮಾಡಿದರು.

ವಿಧಾನಸೌಧದಲ್ಲಿ ಮಾಧ್ಯಮಗ ಳೊಂದಿಗೆ ಮಾತನಾಡಿದ ಅವರು, ಮಂಡ್ಯ ಸೇರಿದಂತೆ ಯಾವುದೇ ಜಿಲ್ಲೆಯ ರೈತರು ಕೃಷಿಗೆ ನೀರು ಬಳಕೆ ಮಾಡಬಾರದು. ಕುಡಿಯುವ ನೀರಿನ ಅವಶ್ಯಕತೆಯನ್ನು ಗಮನದಲ್ಲಿಟ್ಟುಕೊಂಡು ಮಾತ್ರ ನೀರು ಹರಿಸಲಾಗಿದ್ದು, ಇದನ್ನು ಕೃಷಿಗೆ ಬಳಸಿದರೆ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಜಲಾಶಯಗಳ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ರೈತರು ಬಿತ್ತನೆ ಹಾಗೂ ನಾಟಿ ಕಾರ್ಯಗಳನ್ನು ಕೈಗೊಳ್ಳಬೇಕು. ಬೆಳೆ ಬೆಳೆಸಿ ಬಳಿಕ ನೀರು ಬಿಡುವಂತೆ ಸರ್ಕಾರದ ಮೇಲೆ ಒತ್ತಡ ಹೇರುವುದು ಸರಿಯಲ್ಲ. ಅಣೆಕಟ್ಟುಗಳು ಭರ್ತಿಯಾದರೆ ಕೃಷಿಗೂ ನೀರು ಒದಗಿಸಲಾಗುವುದು. ಸದ್ಯಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮುಖ್ಯಮಂತ್ರಿ ಮನವಿ ಮಾಡಿದರು.

ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಹಾಗೂ ಸಂಸತ್ ಅಧಿವೇಶ ನದಲ್ಲಿ ಈ ವಿಷಯ ಚರ್ಚೆಯಾಗುತ್ತಿರುವ ಕುರಿತು ಪ್ರತಿಕ್ರಿಯಿಸಿದ ಅವರು, ರಾಜ್ಯದ ಹಕ್ಕಿನ ಪರವಾಗಿ ಸರ್ಕಾರ ತನ್ನ ನಿಲುವನ್ನು ದೃಢವಾಗಿ ಮಂಡಿಸಲಿದೆ.

ದೆಹಲಿಗೆ ತೆರಳಿ ರಾಜ್ಯದ ಸಂಸದರೊಂದಿಗೂ ಈ ಕುರಿತು ಚರ್ಚೆ ನಡೆಸಲಾಗುವುದು. ಕಾವೇರಿ ನೀರಿನ ವಿಚಾರದಲ್ಲಿ ಕರ್ನಾಟಕದ ಹಕ್ಕನ್ನು ಕಾಪಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಮೇಕೆದಾಟು ಯೋಜನೆ ಕರ್ನಾಟಕಕ್ಕಷ್ಟೇ ಅಲ್ಲ, ತಮಿಳುನಾಡಿಗೂ ಅನುಕೂಲವಾಗುವ ಯೋಜನೆಯಾಗಿದೆ ಎಂದು ಅವರು ಹೇಳಿದರು.

## ಅಭಿಜೀತ್ ದೀಪ್ಕೆಗೆ ಮಸಿ ಬಳಿದ ಮಹಿಳೆ

ನವದೆಹಲಿ: ಪರಿಸರ ಹೋರಾಟಗಾರ ಸೋನಂ ವಾಂಗ್ಚುಕ್ ಅವರನ್ನು ಆರೋಗ್ಯ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಿಸಿದ ಬೆನ್ನಲ್ಲೇ, ಜಂತರ್ ಮಂತರ್‌ನಲ್ಲಿ ಉಪವಾಸ ಸತ್ಯಾಗ್ರಹ ಮುಂದುವರಿಸುತ್ತಿದ್ದ ಕಾಕ್ರೋಚ್ ಜನತಾ ಪಾರ್ಟಿಯ ಸಂಸ್ಥಾಪಕ ಅಭಿಜೀತ್ ದೀಪ್ಕೆ ಅವರ ಮೇಲೆ ಮಹಿಳೆಯೊಬ್ಬರು ನೀಲಿ ಶಾಯಿ ಎರಚಿದ ಘಟನೆ ಶನಿವಾರ ನಡೆದಿದೆ.

ಸೋನಂ ವಾಂಗ್ಚುಕ್ ಅವರ ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆಯಲ್ಲಿ ಅವರನ್ನು ದೆಹಲಿಯ ಸಫ್ದರ್‌ಜಂಗ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈ ಬೆಳವಣಿಗೆಯ ನಂತರ ಜಂತರ್ ಮಂತರ್‌ನಲ್ಲಿ ನಡೆಯುತ್ತಿದ್ದ ಪ್ರತಿಭಟನಾ ಸ್ಥಳದಲ್ಲಿ ಸಭೆಯನ್ನುದ್ದೇಶಿಸಿ ಅಭಿಜೀತ್ ದೀಪ್ಕೆ ಮಾತನಾಡುತ್ತಿದ್ದ ವೇಳೆ ಮಹಿಳೆಯೊಬ್ಬರು ಏಕಾಏಕಿ ಅವರತ್ತ ನೀಲಿ ಶಾಯಿ ಎರಚಿದ್ದಾರೆ.

ಘಟನೆಯಿಂದ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಗಿದ್ದು, ಪ್ರತಿಭಟನಾಕಾರರು ಹಾಗೂ ಬೆಂಬಲಿಗರು ಮಹಿಳೆಯನ್ನು ತಡೆದ ಬಳಿಕ ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿದೆ. ಘಟನೆಯ ಬಳಿಕ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ ಅಭಿಜೀತ್ ದೀಪ್ಕೆ, ತಮ್ಮ ಮೇಲೆ ಶಾಯಿ ಎರಚಿದ ದೃಶ್ಯದ ವಿಡಿಯೊವನ್ನು ಹಂಚಿಕೊಂಡು, "ನೀಲಿ ನನ್ನ ಬಣ್ಣ... ಜೈ ಭೀಮ್" ಎಂದು ಬರೆದುಕೊಂಡಿದ್ದಾರೆ. ಮಹಿಳೆಯ ಗುರುತು ಹಾಗೂ ಆಕೆಯ ಉದ್ದೇಶ ಏನು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ.

2 ಭಾರತ ಸಾರಥಿ 18/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಕರ್ನಾಟಕ ಕಬಡ್ಡಿ ಪ್ರೀಮಿಯರ್ ಲೀಗ್‌ಗೆ ಚಾಲನೆ

ಬೆಂಗಳೂರು

ಕರ್ನಾಟಕ ಕಬಡ್ಡಿ ಪ್ರೀಮಿಯರ್ ಲೀಗ್ (ಕೆಕೆಪಿಎಲ್) ಟೂರ್ನಿಯಲ್ಲಿ ಭಾಗವಹಿಸಲಿರುವ ಬೆಂಗಳೂರು ಬೈಸನ್ಸ್ ತಂಡದ ಹೆಸರು ಹಾಗೂ ಲಾಂಛನವನ್ನು ಶನಿವಾರ ಸಂಜೆ ನಾಗರಭಾವಿಯ ಕಿಂಗ್ಸ್ ಕ್ಲಬ್‌ನಲ್ಲಿ ನಡೆದ ಭವ್ಯ ಉದ್ಘಾಟನಾ ಸಮಾರಂಭದಲ್ಲಿ ಅಧಿಕೃತವಾಗಿ ಅನಾವರಣಗೊಳಿಸಲಾಯಿತು.



ಕರ್ನಾಟಕದಲ್ಲಿ ಮೊದಲ ಬಾರಿಗೆ ನಡೆಯುತ್ತಿರುವ ಈ ಕಬಡ್ಡಿ ಲೀಗ್ ರಾಜ್ಯದ ಕ್ರೀಡಾ ಕ್ಷೇತ್ರದಲ್ಲಿ ಹೊಸ ಅಧ್ಯಾಯಕ್ಕೆ ನಾಂದಿ ಹಾಡಲಿದೆ. ಗ್ರಾಮೀಣ ಭಾಗಗಳಲ್ಲಿರುವ ಪ್ರತಿಭಾವಂತ ಕಬಡ್ಡಿ ಆಟಗಾರರಿಗೆ ವೇದಿಕೆ ಕಲ್ಪಿಸುವುದರ ಜೊತೆಗೆ, ತಾಲೂಕು ಹಾಗೂ ಜಿಲ್ಲಾಮಟ್ಟದ ಕ್ರೀಡಾಪಟುಗಳು ರಾಷ್ಟ್ರೀಯ ಮಟ್ಟದಲ್ಲಿ ಬೆಳೆಯಲು ಈ ಲೀಗ್ ಸಹಕಾರಿಯಾಗಲಿದೆ ಎಂದು ಆಯೋಜಕರು ತಿಳಿಸಿದರು. ಎವಿಎ ಸೊಲ್ಯೂಷನ್ಸ್ ವ್ಯವಸ್ಥಾಪಕ ನಿರ್ದೇಶಕ ಆನಂದ್ ಗೌಡ ಡಿಎಸ್ ಅವರ ಒಡೆತನದ ಬೆಂಗಳೂರು ಬೈಸನ್ಸ್ ಫ್ರಾಂಚೈಸಿ, ಕ್ರೀಡೆ, ರಾಜಕೀಯ ಹಾಗೂ ಉದ್ಯಮ ಕ್ಷೇತ್ರದ ಗಣ್ಯರ ಸಮ್ಮುಖದಲ್ಲಿ ತನ್ನ ಅಧಿಕೃತ ಗುರುತನ್ನು ಪರಿಚಯಿಸಿತು. ಬೆಂಗಳೂರು ನಗರದ ಕ್ರೀಡಾ ಸಂಸ್ಕೃತಿ ಹಾಗೂ ಕಬಡ್ಡಿ ಮೇಲಿನ ಅಭಿಮಾನವನ್ನು ಪ್ರತಿಬಿಂಬಿಸುವ ಉದ್ದೇಶದಿಂದ ತಂಡದ ಹೆಸರು ಮತ್ತು ಲಾಂಛನವನ್ನು ರೂಪಿಸಲಾಗಿದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಅರ್ಜುನ ಪ್ರಶಸ್ತಿ ವಿಜೇತ ಭಾರತೀಯ ಕಬಡ್ಡಿ ತಂಡದ ಕೋಚ್ ಬಿ.ಸಿ. ರಮೇಶ್, ಧ್ಯಾನ್ ಚಂದ್ ಪ್ರಶಸ್ತಿ ಪುರಸ್ಕೃತ ಹಾಗೂ ಅಂತಾರಾಷ್ಟ್ರೀಯ ಕಬಡ್ಡಿ ಆಟಗಾರ ಬಿ.ಸಿ. ಸುರೇಶ್, ಮಾಜಿ ವಿಧಾನ ಪರಿಷತ್ ಸದಸ್ಯ ಎ. ದೇವೇಗೌಡ, ಬಿಬಿಎಂಪಿ ಮಾಜಿ ಸದಸ್ಯ ಹನುಮಂತ ಗೌಡ, ಇಸ್ರೋ ನಿವೃತ್ತ ಅಧಿಕಾರಿ ರಾಮಕೃಷ್ಣಯ್ಯ ಸಿ., ಉದ್ಯಮಿ ಹಾಗೂ ಸಾಮಾಜಿಕ ಕಾರ್ಯಕರ್ತ ವಿಜಯಕುಮಾರ್, ಕ್ರಾಕಾ ಮತ್ತು ಬುರ್ಘಾಕಾ ಸಂಸ್ಥೆಗಳ ಪದಾಧಿಕಾರಿಗಳು, ಎವಿಎಸ್ ಸೊಲ್ಯೂಷನ್ಸ್ ಜಂಟಿ ನಿರ್ದೇಶಕಿ ಐಶ್ವರ್ಯ ಆನಂದ್ ಹಾಗೂ 5 ಎನ್ ಸ್ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್ ನಿರ್ದೇಶಕರು ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

## ಬೆಂಗಳೂರು ಉತ್ತರ ನಗರ ಪಾಲಿಕೆ ಫೋನ್–ಇನ್‌ಗೆ 62 ಅಹವಾಲುಗಳು; ತ್ವರಿತ ಪರಿಹಾರಕ್ಕೆ ಆಯುಕ್ತರ ಸೂಚನೆ



ಬೆಂಗಳೂರು

ಬೆಂಗಳೂರು ಉತ್ತರ ನಗರ ಪಾಲಿಕೆ (ಬಿಎನ್‌ಸಿಸಿ) ವ್ಯಾಪ್ತಿಯ ನಾಗರಿಕರ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಶೀಘ್ರ ಪರಿಹಾರ ಕಲ್ಪಿಸುವ ಉದ್ದೇಶದಿಂದ ಶುಕ್ರವಾರ ಆಯೋಜಿಸಲಾದ ಫೋನ್–ಇನ್ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಒಟ್ಟು 62 ಅಹವಾಲುಗಳು ದಾಖಲಾಗಿವೆ.

ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ 49 ಕರೆಗಳನ್ನು ಸ್ವೀಕರಿಸಲಾಗಿದ್ದು, ಅವುಗಳ ಮೂಲಕ ಒಟ್ಟು 62 ಅಹವಾಲುಗಳು ದಾಖಲಾದವು. ದಾಖಲಾದ ಪ್ರತಿಯೊಂದು ಅಹವಾಲನ್ನೂ ಆದ್ಯತೆಯ ಮೇರೆಗೆ ಪರಿಶೀಲಿಸಿ ತ್ವರಿತವಾಗಿ ಇತ್ಯರ್ಥಪಡಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಆಯುಕ್ತರು ಸೂಚನೆ ನೀಡಿದರು.

ಇಂದಿನ ಕಾರ್ಯಕ್ರಮದಲ್ಲಿ ರಸ್ತೆ ನಿರ್ವಹಣೆಗೆ ಸಂಬಂಧಿಸಿದ ಅತಿ ಹೆಚ್ಚು 32 ಅಹವಾಲುಗಳು ದಾಖಲಾಗಿವೆ. ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ 8, ಇ–ಖಾತಾ ಹಾಗೂ ಖಾತಾ ಸೇವೆಗಳ ಕುರಿತು 5, ಅರಣ್ಯ ಇಲಾಖೆಗೆ ಸಂಬಂಧಿಸಿದ 4, ಆರೋಗ್ಯ ಇಲಾಖೆಗೆ 3, ವಿದ್ಯುತ್, ಉದ್ಯಾನವನ ಮತ್ತು ಆಟದ ಮೈದಾನಗಳು, ಟ್ರಾಫಿಕ್ ಎಂಜಿನಿಯರ್ ಸೆಲ್ ಹಾಗೂ ಪಶುವೈದ್ಯಕೀಯ ಇಲಾಖೆಗೆ ತಲಾ 2 ಹಾಗೂ ಜಾಹೀರಾತು ಮತ್ತು ಚುನಾವಣಾ ಶಾಖೆಗೆ ತಲಾ 1 ಅಹವಾಲು ದಾಖಲಾಗಿದೆ.

2025ರ ಸೆಪ್ಟೆಂಬರ್ 26ರಿಂದ ಆರಂಭಗೊಂಡಿರುವ ಈ ಫೋನ್–ಇನ್ ಕಾರ್ಯಕ್ರಮದ ಮೂಲಕ ಜುಲೈ 17, 2026ರವರೆಗೆ ಒಟ್ಟು 1,999 ಕರೆಗಳನ್ನು ಸ್ವೀಕರಿಸಲಾಗಿದ್ದು, 2,578 ಅಹವಾಲುಗಳು ದಾಖಲಾಗಿವೆ. ಇದರಲ್ಲಿ 2,204 ಅಹವಾಲುಗಳನ್ನು ಈಗಾಗಲೇ ಇತ್ಯರ್ಥಪಡಿಸಲಾಗಿದೆ. ದೀರ್ಘಾವಧಿ ಪರಿಹಾರಕ್ಕೆ ಸಂಬಂಧಿಸಿದ 8 ಅಹವಾಲುಗಳು, ಪ್ರಗತಿಯಲ್ಲಿರುವ 3, ಪಾಲಿಕೆಯ ವ್ಯಾಪ್ತಿಗೆ ಸಂಬಂಧಿಸದ 161, ಮರುತೆರೆಯಲಾದ 9 ಹಾಗೂ 193 ಅಹವಾಲುಗಳು ಇನ್ನೂ ಬಾಕಿ ಉಳಿದಿವೆ. ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ 49 ಕರೆಗಳನ್ನು ಸ್ವೀಕರಿಸಲಾಗಿದ್ದು, ಅವುಗಳ ಮೂಲಕ ಒಟ್ಟು 62 ಅಹವಾಲುಗಳು ದಾಖಲಾದವು.

ಪ್ರತಿ ಶುಕ್ರವಾರ ಆಯೋಜಿಸಲಾಗುವ ಫೋನ್–ಇನ್ ಕಾರ್ಯಕ್ರಮದ ಮೂಲಕ ನಾಗರಿಕರ ಸಮಸ್ಯೆಗಳನ್ನು ನೇರವಾಗಿ ಆಲಿಸಿ ತ್ವರಿತ ಸ್ಪಂದನೆ ನೀಡಲಾಗುತ್ತಿದ್ದು, ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ ಎಂದು ಪಾಲಿಕೆ ತಿಳಿಸಿದೆ.

ಕಾರ್ಯಕ್ರಮದಲ್ಲಿ ಅಪರ ಆಯುಕ್ತರು (ಕಂದಾಯ ಪ್ರಭಾರ) ಹಾಗೂ ಜಂಟಿ ಆಯುಕ್ತರಾದ ಪಲ್ಲವಿ, ಜಂಟಿ ಆಯುಕ್ತ ಮೊಹಮ್ಮದ್ ನಯೀಮ್ ಮೊಮಿನ್, ಉಪ ಆಯುಕ್ತ ಸೋಮಶೇಖರ್, ಮುಖ್ಯ ಅಭಿಯಂತರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ‘ಅಗ್ನಿ ಸುರಕ್ಷತೆ ಇಲ್ಲದ ಕಟ್ಟಡಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ’

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಪೇಟೆ ಪ್ರದೇಶ ಸೇರಿದಂತೆ ಸೂಕ್ಷ್ಮ ಪ್ರದೇಶಗಳಲ್ಲಿ ಅಗ್ನಿ ಸುರಕ್ಷತಾ ವ್ಯವಸ್ಥೆ ಇಲ್ಲದ ಕಟ್ಟಡಗಳ ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಜಿಬಿಎ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಸಮನ್ವಯ ಸಭೆಯಲ್ಲಿ ಮಾತನಾಡಿದ ಅವರು, ನಗರದಲ್ಲಿನ ಪೇಟೆ ಪ್ರದೇಶ ಹಾಗೂ ಅಗ್ನಿ ಅವಘಡದ ಅಪಾಯ ಹೆಚ್ಚಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಕಡ್ಡಾಯವಾಗಿ ಅಗ್ನಿ ಸುರಕ್ಷತಾ ತಪಾಸಣೆ ನಡೆಸಬೇಕು. ಸುರಕ್ಷತಾ ನಿಯಮಗಳನ್ನು ಪಾಲಿಸದ ಕಟ್ಟಡಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ನಿರ್ದೇಶನ ನೀಡಿದರು.

ಹೊಸದಾಗಿ ನಿರ್ಮಿಸಲಾಗುತ್ತಿರುವ ವೈಟ್ ಟಾಪಿಂಗ್ ರಸ್ತೆಗಳಲ್ಲಿ ಅಗ್ನಿ ಅವಘಡದ ಸಂದರ್ಭದಲ್ಲಿ ನೀರಿನ ಲಭ್ಯತೆ ಖಚಿತಪಡಿಸಲು ಅಗ್ನಿಶಾಮಕ ಹೈಡ್ರೆಂಟ್‌ಗಳನ್ನು ಅಳವಡಿಸಬೇಕು. ಅಳವಡಿಸಲಾದ ಹೈಡ್ರೆಂಟ್‌ಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಡೆಸಿ, ಪ್ರತಿ ತಿಂಗಳು ಪರಿಶೀಲನೆ ನಡೆಸಬೇಕು. ಯಾವುದೇ ದೋಷ ಕಂಡುಬಂದಲ್ಲಿ ಕೂಡಲೇ ದುರಸ್ತಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.



ಜಲಮಂಡಳಿ ಕೈಗೆತ್ತಿಕೊಳ್ಳುವ ಪ್ರತಿಯೊಂದು ಕಾಮಗಾರಿ ನಡೆಯುವ ಸ್ಥಳದಲ್ಲಿ ಕಡ್ಡಾಯವಾಗಿ ಮಾಹಿತಿ ಒಳಗೊಂಡ ನಾಮಫಲಕ ಅಳವಡಿಸಬೇಕು ಎಂದು ಮಹೇಶ್ವರ್ ರಾವ್ ಸೂಚಿಸಿದರು. ರಸ್ತೆ ಕತ್ತರಿಸಲು ಅನುಮತಿ ಪಡೆದ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ, ಗುಣಮಟ್ಟ ಕಾಪಾಡಿಕೊಂಡು ರಸ್ತೆ ಪುನಶ್ಚೇತನ ಕಾರ್ಯವನ್ನು ಸಮರ್ಪಕವಾಗಿ ನಡೆಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಜುಲೈ 10ರಿಂದ ಬೀದಿಗಳಲ್ಲಿ ನಿಲ್ಲಿಸಿರುವ ಬಿಡಾಡಿ ವಾಹನಗಳಿಗೆ ಸ್ಟಿಕ್ಕರ್ ಮಾದರಿಯ ನೋಟಿಸ್ ಅಂಟಿಸಲಾಗುತ್ತಿದೆ. ಏಳು ದಿನಗಳ ನೋಟಿಸ್ ಅವಧಿ ಮುಗಿದ ಬಳಿಕವೂ ವಾಹನಗಳನ್ನು ತೆರವುಗೊಳಿಸದಿದ್ದರೆ ಅಂತಹ ವಾಹನಗಳನ್ನು ತಕ್ಷಣ ಟೋಯಿಂಗ್ ಮಾಡುವಂತೆ ಸಂಚಾರಿ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಪ್ರಮುಖ ಆರ್ಟೀರಿಯಲ್ ಹಾಗೂ ಸಬ್–ಆರ್ಟೀರಿಯಲ್ ರಸ್ತೆಗಳಲ್ಲಿ ಎಸ್.ಐ.ಪಿ. ಅನುದಾನದಡಿ ನಡೆಯುತ್ತಿರುವ ಸಿವಿಲ್ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ ಡಾಂಬರೀಕರಣ ಕೈಗೊಳ್ಳಬೇಕು. ಕಾಮಗಾರಿ ವೇಳೆ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಸಂಚಾರಿ ಪೊಲೀಸರೊಂದಿಗೆ ಸಮನ್ವಯ ಸಾಧಿಸಿ ಗುಣಮಟ್ಟದ ಕಾಮಗಾರಿ ನಡೆಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಆಗಸ್ಟ್ ತಿಂಗಳ ಪೂರ್ತಿ ನಡೆಯಲಿರುವ "ತ್ಯಾಜ್ಯದಿಂದ ಸ್ವಾತಂತ್ರ್ಯ" ಅಭಿಯಾನವನ್ನು ಯಶಸ್ವಿಗೊಳಿಸಲು ನಗರ ಪಾಲಿಕೆಗಳು, ಕೆ–ರೈಡ್, ರೈಲ್ವೆ ಹಾಗೂ ಮೆಟ್ರೋ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕಟ್ಟಡ ತ್ಯಾಜ್ಯ, ಮಣ್ಣಿನ ರಾಶಿ, ಗಿಡಗಂಟಿಗಳು ಸೇರಿದಂತೆ ವಿವಿಧ ತ್ಯಾಜ್ಯ ಸಂಗ್ರಹವಾಗಿರುವ ಸ್ಥಳಗಳನ್ನು ಗುರುತಿಸುವಂತೆ ಸೂಚಿಸಿದರು. ಜೊತೆಗೆ ಬಳಕೆಯಲ್ಲಿಲ್ಲದ ಕ್ವಾರಿಗಳ ಮಾಹಿತಿ, ನೋಂದಾಯಿತ ವಾಹನಗಳ ವಿವರ, ಅಗತ್ಯ ಸಿಬ್ಬಂದಿ ಸೇರಿದಂತೆ ಎಲ್ಲಾ ರೀತಿಯ ಪೂರ್ವಸಿದ್ಧತೆಗಳನ್ನು ಪೂರ್ಣಗೊಳಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ಇಂಡಸ್ ಇಂಟರ್‌ನ್ಯಾಷನಲ್ ಸ್ಕೂಲ್ ಹೈದರಾಬಾದ್ ಸಾಧನೆ

ಬೆಂಗಳೂರು: ಇಂಡಸ್ ಇಂಟರ್‌ನ್ಯಾಷನಲ್ ಸ್ಕೂಲ್ ಹೈದರಾಬಾದ್ ಮೇ 2026ರ ಇಂಟರ್‌ನ್ಯಾಷನಲ್ ಬಕ್ಕಾಲುರೇಟ್ ಡಿಪ್ಲೊಮಾ ಪ್ರೋಗ್ರಾಂ (ಐಬಿಡಿಪಿ) ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದೆ. ಶಾಲೆಯ ವಿದ್ಯಾರ್ಥಿಗಳಾದ ರುಹಾನ್ ಗುಡೇಲಿ ಹಾಗೂ ಸುಜಯ ರೆಡ್ಡಿ ಸುರುಕುಂಟಿ ಅವರು 45ಕ್ಕೆ 45 ಅಂಕಗಳನ್ನು ಗಳಿಸುವ ಮೂಲಕ ವಿಶ್ವಮಟ್ಟದ ಐಬಿ ಸಾಧಕರ ಸಾಲಿಗೆ ಸೇರಿದ್ದಾರೆ.

ಪ್ರತಿ ವರ್ಷ ಜಾಗತಿಕ ಮಟ್ಟದಲ್ಲಿ ಐಬಿ ಪರೀಕ್ಷೆ ಬರೆಯುವ ಸಾವಿರಾರು ವಿದ್ಯಾರ್ಥಿಗಳ ಪೈಕಿ ಅತ್ಯಂತ ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳು ಮಾತ್ರ ಪರಿಪೂರ್ಣ 45 ಅಂಕಗಳ ಸಾಧನೆ ಮಾಡುತ್ತಾರೆ. ಒಂದೇ ಶಾಲೆಯ ಒಂದೇ ಬ್ಯಾಚ್‌ನ ಇಬ್ಬರು ವಿದ್ಯಾರ್ಥಿಗಳು ಒಂದೇ ವರ್ಷದಲ್ಲಿ ಈ ಅಪರೂಪದ ಸಾಧನೆ ಮಾಡಿರುವುದು ಇಂಡಸ್ ಇಂಟರ್‌ನ್ಯಾಷನಲ್ ಸ್ಕೂಲ್‌ನ ಶೈಕ್ಷಣಿಕ ಗುಣಮಟ್ಟ ಹಾಗೂ ನಿರಂತರ ಉತ್ಕೃಷ್ಟತೆಗೆ ಸಾಕ್ಷಿಯಾಗಿದೆ.



ರುಹಾನ್ ಗುಡೇಲಿ ಅವರು ಗಣಿತವನ್ನು ಪ್ರಮುಖ ವಿಷಯವಾಗಿ ಆಯ್ಕೆ ಮಾಡಿಕೊಂಡಿದ್ದು, ಸಿಂಗಾಪುರದ ರಾಷ್ಟ್ರೀಯ ವಿಶ್ವವಿದ್ಯಾಲಯದಲ್ಲಿ ಪ್ರವೇಶ ಪಡೆದಿದ್ದಾರೆ.



ಸುಜಯ ರೆಡ್ಡಿ ಸುರುಕುಂಟಿ ಅವರು ನ್ಯೂಯಾರ್ಕ್ ವಿಶ್ವವಿದ್ಯಾಲಯದ ಸ್ಟರ್ನ್ ಸ್ಕೂಲ್ ಆಫ್ ಬಿಸಿನೆಸ್‌ನಲ್ಲಿ ಹಣಕಾಸು ವಿಭಾಗದ ವ್ಯಾಸಂಗಕ್ಕೆ ಆಯ್ಕೆಯಾಗಿದ್ದಾರೆ.

# ‘ಸಿಎಸ್‌ಆರ್ ರಾಷ್ಟ್ರ ನಿರ್ಮಾಣದ ಶಕ್ತಿಯಾಗಬೇಕು’

ಚಿಕ್ಕಬಳ್ಳಾಪುರ

ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ಕೇವಲ ಕಾನೂನುಬದ್ಧ ಕರ್ತವ್ಯವಾಗಿರದೆ, ರಾಷ್ಟ್ರ ನಿರ್ಮಾಣದ ಪರಿಣಾಮಕಾರಿ ಸಾಧನವಾಗಬೇಕು ಎಂದು 'ಒಂದು ಜಗತ್ತು ಒಂದು ಕುಟುಂಬ ಸೇವಾ ಅಭಿಯಾನ'ದ ಸಂಸ್ಥಾಪಕ ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.




ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ ಆಯೋಜಿಸಿದ್ದ ಎರಡು ದಿನಗಳ ಸಿಎಸ್‌ಆರ್ ಸಮಾವೇಶ–2026ರ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಭಾರತದ ನಾಗರಿಕತೆ ಪ್ರೀತಿ, ಸೇವೆ ಮತ್ತು ಮಾನವೀಯ ಮೌಲ್ಯಗಳ ಮೇಲೆ ನೆಲೆಗೊಂಡಿದ್ದು, ಆಧ್ಯಾತ್ಮಿಕ ಅಡಿಪಾಯದೊಂದಿಗೆ ಪಾರದರ್ಶಕತೆ ಹಾಗೂ ಉತ್ತಮ ಆಡಳಿತವನ್ನು ಸಿಎಸ್‌ಆರ್ ಕಾರ್ಯಗಳಲ್ಲಿ ಅಳವಡಿಸಿದಾಗ ಮಾತ್ರ ಸಮಾಜದಲ್ಲಿ ಶಾಶ್ವತ ಬದಲಾವಣೆ ಸಾಧ್ಯವಾಗುತ್ತದೆ ಎಂದು ಹೇಳಿದರು.

ಸರ್ಕಾರ, ಕೈಗಾರಿಕೆಗಳು, ಕಾರ್ಪೊರೇಟ್ ಸಂಸ್ಥೆಗಳು ಹಾಗೂ ಸಮಾಜ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಸಿಎಸ್‌ಆರ್ ಮೂಲಕ ರಾಷ್ಟ್ರ ನಿರ್ಮಾಣದ ಗುರಿ ಸಾಧಿಸಲು ಸಾಧ್ಯವಾಗುತ್ತದೆ. ಹೆಚ್ಚಿನ ಕಾರ್ಪೊರೇಟ್ ಸಂಸ್ಥೆಗಳು ಸಮಾಜಮುಖಿ ಸೇವಾ ಕಾರ್ಯಗಳಲ್ಲಿ ಕೈಜೋಡಿಸುವ ಮೂಲಕ ದೇಶದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಅವರು ಕರೆ ನೀಡಿದರು.

ಭಗವಾನ್ ಶ್ರೀ ಸತ್ಯಸಾಯಿ ಬಾಬಾ ಅವರ ಆಶೀರ್ವಾದದಿಂದ 'ಒಂದು ಜಗತ್ತು ಒಂದು ಕುಟುಂಬ' ಮಿಷನ್ ನಿರೀಕ್ಷೆಗೂ ಮೀರಿ ಬೆಳೆಯುತ್ತಿದ್ದು, ಅನಿವಾಸಿ ಭಾರತೀಯರು ಹಾಗೂ 150ಕ್ಕೂ ಹೆಚ್ಚು ಕಂಪನಿಗಳಿಂದ ಸಂಸ್ಥೆಗೆ ಶೇ.70ರಷ್ಟು ಆರ್ಥಿಕ ನೆರವು ದೊರೆಯುತ್ತಿದೆ ಎಂದು ತಿಳಿಸಿದರು.

2047ರೊಳಗೆ ವಿಕಸಿತ ಭಾರತ ನಿರ್ಮಾಣದ ಗುರಿಯನ್ನು ಅದಕ್ಕೂ ಮುನ್ನವೇ ಸಾಧಿಸಬೇಕು. ದೇಶದ ಕಟ್ಟಕಡೆಯ ವ್ಯಕ್ತಿಗೂ ಶಿಕ್ಷಣ, ಆರೋಗ್ಯ ಮತ್ತು ಆಹಾರ ತಲುಪಿಸುವುದು ನಮ್ಮ ಸಂಕಲ್ಪವಾಗಿದೆ. ಸೂಕ್ತ ಸಹಭಾಗಿತ್ವದ ಕೊರತೆಯಿಂದ ಹಲವು ಕಂಪನಿಗಳ ಸಿಎಸ್‌ಆರ್ ನಿಧಿ ಬಳಕೆಯಾಗದೆ ಉಳಿಯುತ್ತಿರುವುದು ವಿಷಾದನೀಯ ಎಂದು ಹೇಳಿದರು.

ಭಗವದ್ಗೀತೆಯಲ್ಲಿನ ಯಜ್ಞ, ದಾನ ಮತ್ತು ತಪಸ್ಸು ತತ್ವಗಳನ್ನು ಕಾರ್ಪೊರೇಟ್ ಆಡಳಿತಕ್ಕೆ ಹೋಲಿಸಿದ ಅವರು, ಯಜ್ಞವು ಉತ್ಪಾದಕತೆ, ದಾನವು ಸಮಾಜಸೇವೆ ಮತ್ತು ತಪಸ್ಸು ಉತ್ತಮ ಆಡಳಿತದ ಪ್ರತೀಕವಾಗಿದೆ. ಈ ಮೌಲ್ಯಗಳನ್ನು ಅಳವಡಿಸಿಕೊಂಡಾಗ ವ್ಯವಹಾರ ಮತ್ತು ಸೇವೆ ಎರಡೂ ಯಶಸ್ವಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

"ಮಕ್ಕಳ ಮೇಲಿನ ವೆಚ್ಚ ಖರ್ಚಲ್ಲ, ಅದು ರಾಷ್ಟ್ರದ ಭವಿಷ್ಯದ ಮೇಲಿನ ಅತ್ಯಮೂಲ್ಯ ಹೂಡಿಕೆ" ಎಂದು ಅವರು ಹೇಳಿದರು.

ಪ್ರಧಾನಮಂತ್ರಿಯವರ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಮಂಡಳಿಯ ಮಾಜಿ ಸಲಹೆಗಾರ ಎಸ್. ರಾಮದೊರೈ ಮಾತನಾಡಿ, ಸದ್ಗುರುಗಳ ದೂರದೃಷ್ಟಿ ಸ್ಫೂರ್ತಿದಾಯಕವಾಗಿದ್ದು, ಆರೋಗ್ಯ, ಶಿಕ್ಷಣ ಮತ್ತು ಪೌಷ್ಟಿಕಾಹಾರ ಸೇವೆಗಳ ಮೂಲಕ ದೇಶದ ಸುಸ್ಥಿರ ಅಭಿವೃದ್ಧಿಗೆ ಸಂಸ್ಥೆ ನೀಡುತ್ತಿರುವ ಕೊಡುಗೆ ಶ್ಲಾಘನೀಯ ಎಂದು ಹೇಳಿದರು.

ಸೆಬಿಯ ಮಾಜಿ ಅಧ್ಯಕ್ಷ ಎಂ. ದಾಮೋದರನ್, ಸಂಪರ್ಕ್ ಫೌಂಡೇಶನ್ ಸಂಸ್ಥಾಪಕ ವಿನೀತ್ ನಾಯರ್, ಬಾಂಬೆ ಷೇರುಪೇಟೆಯ ಮಾಜಿ ಅಧ್ಯಕ್ಷ ಡಾ. ಎಸ್. ರವಿ ಹಾಗೂ ದಿ ಹಿಂದೂ ಬಿಸಿನೆಸ್ ಲೈನ್ ಸಂಪಾದಕ ರಘುವೀರ್ ಶ್ರೀನಿವಾಸನ್ ಅವರು ಒನ್ ವರ್ಲ್ಡ್ ಒನ್ ಫ್ಯಾಮಿಲಿ ಅಭಿಯಾನದ ಶಿಕ್ಷಣ, ಆರೋಗ್ಯ ಮತ್ತು ಪೌಷ್ಟಿಕಾಹಾರ ಸೇವೆಗಳನ್ನು ಪ್ರಶಂಸಿಸಿ, ಇಂತಹ ಸೇವಾ ಸಂಸ್ಥೆಗಳಿಗೆ ಹೆಚ್ಚಿನ ಸಿಎಸ್‌ಆರ್ ಬೆಂಬಲ ದೊರೆಯಬೇಕು ಎಂದು ಅಭಿಪ್ರಾಯಪಟ್ಟರು.

# ನೀಟ್ ಯುಜಿ 2026ರಲ್ಲಿ ಆಕಾಶ್ ವಿದ್ಯಾರ್ಥಿಗಳ ಸಾಧನೆ

ಬೆಂಗಳೂರು

ವೈದ್ಯಕೀಯ ಪ್ರವೇಶ ಪರೀಕ್ಷೆ ನೀಟ್ ಯುಜಿ 2026ರಲ್ಲಿ ಆಕಾಶ್ ಎಜುಕೇಷನಲ್ ಸರ್ವೀಸಸ್ ಲಿಮಿಟೆಡ್ (ಎಇಎಸ್‌ಎಲ್) ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡುವ ಮೂಲಕ ಸಂಸ್ಥೆಯ ಶೈಕ್ಷಣಿಕ ಪರಂಪರೆಯನ್ನು ಮುಂದುವರಿಸಿದ್ದಾರೆ. ಬೆಂಗಳೂರಿನ ಆಕಾಶ್ ತರಗತಿ ಕಾರ್ಯಕ್ರಮದ ವಿದ್ಯಾರ್ಥಿ ಜೋಹಾನ್ ಜಾಬ್ ಅವರು 720 ಅಂಕಗಳಿಗೆ 695 ಅಂಕಗಳನ್ನು ಗಳಿಸಿ ಆಲ್ ಇಂಡಿಯಾ ರ್‍ಯಾಂಕ್ 69 ಪಡೆಯುವ ಮೂಲಕ ಬೆಂಗಳೂರು ನಗರದ ಟಾಪರ್ ಆಗಿ ಹೊರಹೊಮ್ಮಿದ್ದಾರೆ.




ಜೋಹಾನ್ ಜಾಬ್ ಅವರ ಸಾಧನೆಯು ಅವರ ನಿರಂತರ ಪರಿಶ್ರಮ, ಶಿಸ್ತುಬದ್ಧ ಸಿದ್ಧತೆ ಹಾಗೂ ದೃಢಸಂಕಲ್ಪದ ಪ್ರತಿಫಲವಾಗಿದೆ. ಆಕಾಶ್ ಸಂಸ್ಥೆಯ ಶೈಕ್ಷಣಿಕ ಮಾರ್ಗದರ್ಶನ, ಯೋಜಿತ ತರಬೇತಿ ವ್ಯವಸ್ಥೆ ಮತ್ತು ವಿದ್ಯಾರ್ಥಿ ಕೇಂದ್ರಿತ ಕಲಿಕಾ ವಾತಾವರಣವು ಈ ಸಾಧನೆಗೆ ನೆರವಾಗಿದೆ ಎಂದು ಸಂಸ್ಥೆ ತಿಳಿಸಿದೆ.

ಕರ್ನಾಟಕದಲ್ಲಿ ಆಕಾಶ್ ವಿದ್ಯಾರ್ಥಿಗಳು ನೀಟ್ ಯುಜಿ 2026ರಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ. ಜೋಹಾನ್ ಜಾಬ್ ಹೊರತುಪಡಿಸಿ ಕೆವಿನ್ ಅವರು 680 ಅಂಕಗಳೊಂದಿಗೆ ಆಲ್ ಇಂಡಿಯಾ ರ್‍ಯಾಂಕ್ 299 ಪಡೆದಿದ್ದಾರೆ. ಸಿದ್ಧಾಂತ್ ವಿನಯ್ ವಿ 668 ಅಂಕಗಳೊಂದಿಗೆ 579ನೇ ರ್‍ಯಾಂಕ್, ಅಭಿರಾಮ್ ಎ.ಪಿ. 667 ಅಂಕಗಳೊಂದಿಗೆ 623ನೇ ರ್‍ಯಾಂಕ್, ಸಮಯ್ ಅಗ್ರಹಾರಂ ಪಿ. 664 ಅಂಕಗಳೊಂದಿಗೆ 749ನೇ ರ್‍ಯಾಂಕ್ ಹಾಗೂ ಅಂಕಿತಾ ಯಾದವ್ 662 ಅಂಕಗಳೊಂದಿಗೆ 811ನೇ ರ್‍ಯಾಂಕ್ ಗಳಿಸಿದ್ದಾರೆ.

ಇದೇ ವೇಳೆ ರಾಘವ್ ಎ.ಜಿ. 661 ಅಂಕಗಳೊಂದಿಗೆ 839ನೇ ರ್‍ಯಾಂಕ್ ಪಡೆದಿದ್ದು, ಪ್ರಭುದ್ ಎಂ., ಆನ್ವಿ ಮನೀಷ್, ರಾಘವೇಂದ್ರ ಜೋಶಿ, ಜೀವನ್ ಕಿರಣ್ ಎಸ್., ಜ್ಞಾನತ್ರಿಕಾ ರೆಡ್ಡಿ ಡಿ., ಆದಿತ್ಯ ಬಸು, ಶುಭ್ರಂಶು, ತುಷಾರ್ ಅನೂಪ್ ಹಾಗೂ ಭವೇಶ್ ವಡಿವೇಲನ್ ಸೇರಿದಂತೆ ಹಲವು ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಗಳಿಸಿದ್ದಾರೆ.

ರಾಷ್ಟ್ರಮಟ್ಟದಲ್ಲಿಯೂ ಆಕಾಶ್ ವಿದ್ಯಾರ್ಥಿಗಳು ನೀಟ್ ಯುಜಿ 2026ರಲ್ಲಿ ಹೊಸ ದಾಖಲೆ ನಿರ್ಮಿಸಿದ್ದಾರೆ. ಸಂಸ್ಥೆಯ ದೂರ ಶಿಕ್ಷಣ ಕಾರ್ಯಕ್ರಮದ ವಿದ್ಯಾರ್ಥಿ ಆರ್ಯನ್ ಗುಪ್ತಾ ಅವರು 720 ಅಂಕಗಳಿಗೆ 715 ಅಂಕಗಳನ್ನು ಗಳಿಸಿ ಆಲ್ ಇಂಡಿಯಾ ರ್‍ಯಾಂಕ್ 1 ಪಡೆದಿದ್ದಾರೆ. ತರಗತಿ ಕಾರ್ಯಕ್ರಮದ ವಿದ್ಯಾರ್ಥಿಗಳಾದ ಉಪಲಕ್ಷ್ಯ ಗೋಯಲ್ ಅವರು 711 ಅಂಕಗಳೊಂದಿಗೆ ಎಐಆರ್ 3, ಆರ್ಯನ್ ದುಬೆ ಅವರು 710 ಅಂಕಗಳೊಂದಿಗೆ ಎಐಆರ್ 7 ಹಾಗೂ ಗೀತಾಂಶ ಸರಿನ್ ಅವರು 705 ಅಂಕಗಳೊಂದಿಗೆ ಎಐಆರ್ 8 ಪಡೆದಿದ್ದಾರೆ.

# ಪೀರಾಮಲ್ ಫೈನಾನ್ಸ್‌ಗೆ ರೂ.461 ಕೋಟಿ ನಿವ್ವಳ ಲಾಭ; ಶೇ.67ರಷ್ಟು ಏರಿಕೆ

ಬೆಂಗಳೂರು

ಪೀರಾಮಲ್ ಫೈನಾನ್ಸ್ ಲಿಮಿಟೆಡ್ 2027ರ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಉತ್ತಮ ಹಣಕಾಸು ಸಾಧನೆ ದಾಖಲಿಸಿದ್ದು, ಏಕೀಕೃತ ನಿವ್ವಳ ಲಾಭವು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ.67ರಷ್ಟು ಏರಿಕೆ ಕಂಡು ರೂ.461 ಕೋಟಿಗೆ ತಲುಪಿದೆ. ಕಳೆದ ಹಣಕಾಸು ವರ್ಷದ ಇದೇ ತ್ರೈಮಾಸಿಕದಲ್ಲಿ ಕಂಪನಿಯ ನಿವ್ವಳ ಲಾಭ ರೂ.276 ಕೋಟಿಯಾಗಿತ್ತು.

ಕಂಪನಿಯ ಪ್ರಕಾರ, ನಿರ್ವಹಣೆಯಲ್ಲಿರುವ ಆಸ್ತಿಗಳ ಬಲವಾದ ಬೆಳವಣಿಗೆ, ಕೃತಕ ಬುದ್ಧಿಮತ್ತೆ ಆಧಾರಿತ ಕಾರ್ಯಾಚರಣೆಗಳ ಅಳವಡಿಕೆ, ಚಿಲ್ಲರೆ ಸಾಲ ವಿತರಣೆಯಲ್ಲಿನ ಹೆಚ್ಚಳ ಹಾಗೂ ಸ್ಥಿರ ಆಸ್ತಿ ಗುಣಮಟ್ಟದಿಂದ ಈ ಸಾಧನೆ ಸಾಧ್ಯವಾಗಿದೆ.


ಮೊದಲ ತ್ರೈಮಾಸಿಕದಲ್ಲಿ ಚಿಲ್ಲರೆ ಸಾಲ ವಿತರಣೆಯು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ.44ರಷ್ಟು ಏರಿಕೆ ಕಂಡು ರೂ.12,527 ಕೋಟಿಗೆ ತಲುಪಿದೆ. ಒಟ್ಟು ನಿರ್ವಹಣೆಯಲ್ಲಿರುವ ಆಸ್ತಿಗಳು ಶೇ.25ರಷ್ಟು ಹೆಚ್ಚಳಗೊಂಡು ರೂ.1.07 ಲಕ್ಷ ಕೋಟಿಗೆ ತಲುಪಿದ್ದರೆ, ಚಿಲ್ಲರೆ ನಿರ್ವಹಣೆಯಲ್ಲಿರುವ ಆಸ್ತಿಗಳು ಶೇ.32ರಷ್ಟು ಏರಿಕೆಯಾಗಿ ರೂ.91,249 ಕೋಟಿಯನ್ನು ದಾಖಲಿಸಿವೆ.

ಇದೇ ವೇಳೆ, ಷೇರುದಾರರ ಅನುಮೋದನೆಗೆ ಒಳಪಟ್ಟು ರೂ.4,000 ಕೋಟಿ ವರೆಗೆ ಬಂಡವಾಳ ಸಂಗ್ರಹಿಸಲು ಕಂಪನಿಯ ನಿರ್ದೇಶಕರ ಮಂಡಳಿ ಅನುಮೋದನೆ ನೀಡಿದೆ.

## ಫೀನಿಕ್ಸ್ ಮಾರ್ಕೆಟ್‌ಸಿಟಿಯಲ್ಲಿ ಅಜೋರ್ಟ್‌ನ ಹೊಸ ಮಳಿಗೆ; ಬೆಂಗಳೂರಿನಲ್ಲಿ 8ನೇ ಶಾಖೆ ಆರಂಭ

ಬೆಂಗಳೂರು

ರಿಲಯನ್ಸ್ ರಿಟೇಲ್‌ನ ಪ್ರೀಮಿಯಂ ಫ್ಯಾಷನ್ ಮತ್ತು ಜೀವನಶೈಲಿ ಬ್ರ್ಯಾಂಡ್ ಅಜೋರ್ಟ್, ಬೆಂಗಳೂರಿನ ವೈಟ್‌ಫೀಲ್ಡ್‌ನ ಫೀನಿಕ್ಸ್ ಮಾರ್ಕೆಟ್‌ಸಿಟಿಯಲ್ಲಿ ತನ್ನ ಹೊಸ ಮಳಿಗೆಯನ್ನು ಆರಂಭಿಸಿದೆ. ಇದರೊಂದಿಗೆ ಬೆಂಗಳೂರಿನಲ್ಲಿ ಅಜೋರ್ಟ್‌ನ ಮಳಿಗೆಗಳ ಸಂಖ್ಯೆ 8ಕ್ಕೆ ಹಾಗೂ ದೇಶಾದ್ಯಂತ 43ಕ್ಕೆ ಏರಿಕೆಯಾಗಿದೆ.



ಬೆಂಗಳೂರಿನ ಸ್ಪರ್ಧಾತ್ಮಕ ಚಿಲ್ಲರೆ ಮಾರುಕಟ್ಟೆಯಲ್ಲಿ ತನ್ನ ಅಸ್ತಿತ್ವವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಆರಂಭಿಸಲಾದ ಈ ಮಳಿಗೆಯು, ಫ್ಯಾಷನ್ ಮತ್ತು ತಂತ್ರಜ್ಞಾನದ ಸಂಯೋಜನೆಯೊಂದಿಗೆ ವಿಶಿಷ್ಟ ಶಾಪಿಂಗ್ ಅನುಭವವನ್ನು ಗ್ರಾಹಕರಿಗೆ ಒದಗಿಸಲಿದೆ.

ಸುಲಭತೆ ಮತ್ತು ಹೊಸ ಅನುಭವಕ್ಕೆ ಆದ್ಯತೆ ನೀಡಿ ವಿನ್ಯಾಸಗೊಳಿಸಲಾದ ಈ ಮಳಿಗೆಯಲ್ಲಿ ಗ್ರಾಹಕರು ನಿರಾಳವಾಗಿ ವಿವಿಧ ಉತ್ಪನ್ನಗಳನ್ನು ವೀಕ್ಷಿಸಲು, ಆಯ್ಕೆಮಾಡಲು, ಪ್ರಯತ್ನಿಸಲು ಹಾಗೂ ಖರೀದಿಸಲು ಅನುಕೂಲವಾಗುವ ತಡೆರಹಿತ ಶಾಪಿಂಗ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ಹೊಸ ಮಳಿಗೆಯನ್ನು ನಟಿ ಶಾರಣ್ಯ ಶೆಟ್ಟಿ ರಿಬ್ಬನ್ ಕತ್ತರಿಸುವ ಮೂಲಕ ಉದ್ಘಾಟಿಸಿದರು. ಅವರ ಉಪಸ್ಥಿತಿಯಿಂದ ಉದ್ಘಾಟನಾ ಸಮಾರಂಭಕ್ಕೆ ವಿಶೇಷ ಮೆರುಗು ದೊರಕಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಭಾಗವಹಿಸಿದ್ದರು.


ಮಳಿಗೆಯಲ್ಲಿ ಮಹಿಳೆಯರು, ಪುರುಷರು ಹಾಗೂ ಮಕ್ಕಳ ಉಡುಪುಗಳ ಜೊತೆಗೆ ವಿವಿಧ ಫ್ಯಾಷನ್ ಪರಿಕರಗಳು ಮತ್ತು ಆಭರಣಗಳ ವಿಶಾಲ ಸಂಗ್ರಹವನ್ನು ಗ್ರಾಹಕರಿಗೆ ಒದಗಿಸಲಾಗಿದೆ.

ಅಂತರರಾಷ್ಟ್ರೀಯ ಫ್ಯಾಷನ್ ಪ್ರವೃತ್ತಿಗಳು ಮತ್ತು ಭಾರತೀಯರ ದೈನಂದಿನ ಜೀವನಶೈಲಿಗೆ ಹೊಂದುವ ವಿನ್ಯಾಸಗಳನ್ನು ಒಳಗೊಂಡ ಸಂಗ್ರಹವು ಗ್ರಾಹಕರು ತಮ್ಮ ವೈಯಕ್ತಿಕ ಶೈಲಿಯನ್ನು ಅಭಿವ್ಯಕ್ತಪಡಿಸಲು ನೆರವಾಗುವಂತೆ ರೂಪಿಸಲಾಗಿದೆ.

## ನೀಟ್ ಯುಜಿ 2026ರಲ್ಲಿ ಫಿಸಿಕ್ಸ್ ವಾಲಾ ವಿದ್ಯಾರ್ಥಿಗಳ ಸಾಧನೆ

ಬೆಂಗಳೂರು

ಶೈಕ್ಷಣಿಕ ತಂತ್ರಜ್ಞಾನ ಸಂಸ್ಥೆ ಫಿಸಿಕ್ಸ್ ವಾಲಾ (ಪಿ.ಡಬ್ಲ್ಯೂ) ನೀಟ್ ಯುಜಿ 2026ರ ಫಲಿತಾಂಶದಲ್ಲಿ ತನ್ನ ವಿದ್ಯಾರ್ಥಿಗಳ ಅತ್ಯುತ್ತಮ ಸಾಧನೆಯನ್ನು ಸಂಭ್ರಮಿಸಿದೆ. ಸಂಸ್ಥೆಯ ಹಲವು ವಿದ್ಯಾರ್ಥಿಗಳು ಆಲ್ ಇಂಡಿಯಾ ರ್‍ಯಾಂಕ್‌ನಲ್ಲಿ ಉನ್ನತ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ.



ಫಿಸಿಕ್ಸ್ ವಾಲಾ ವಿದ್ಯಾರ್ಥಿಗಳಾದ ರವಿಕಾಂತ್ ದಿವಾಕರ್ ಅವರು ಆಲ್ ಇಂಡಿಯಾ ರ್‍ಯಾಂಕ್ 55, ಶಿವಾಂಶ್ ಆನಂದ್ ಅವರು 152ನೇ ರ್‍ಯಾಂಕ್, ದಿವ್ಯಾಂಶ್ ಜೈಸ್ವಾಲ್ ಅವರು 173ನೇ ರ್‍ಯಾಂಕ್ ಹಾಗೂ ಸಾಕ್ಷಿ ಕುಮಾರಿ ಅವರು 192ನೇ ರ್‍ಯಾಂಕ್ ಗಳಿಸುವ ಮೂಲಕ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಯು ಆನ್‌ಲೈನ್ ಹಾಗೂ ಆಫ್‌ಲೈನ್ ಕಲಿಕಾ ವ್ಯವಸ್ಥೆಗಳು, ತಂತ್ರಜ್ಞಾನ ಆಧಾರಿತ ವಿದ್ಯಾಪೀಠ ಕೇಂದ್ರಗಳು ಹಾಗೂ ವಿದ್ಯಾರ್ಥಿಗಳ ವೈಯಕ್ತಿಕ ಕಲಿಕಾ ಶೈಲಿಗೆ ಅನುಗುಣವಾಗಿ ರೂಪಿಸಿರುವ ಪಿ.ಡಬ್ಲ್ಯೂ ತರಬೇತಿ ಮಾದರಿಯ ಪರಿಣಾಮವನ್ನು ತೋರಿಸುತ್ತದೆ ಎಂದು ಸಂಸ್ಥೆ ತಿಳಿಸಿದೆ.

ಬೆಂಗಳೂರಿನಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಿ ನಗರದ ವಿದ್ಯಾರ್ಥಿಗಳ ಸಾಧನೆಯನ್ನು ಸಂಭ್ರಮಿಸಲಾಯಿತು. ಬೆಂಗಳೂರಿನ ಫಿಸಿಕ್ಸ್ ವಾಲಾ ವಿದ್ಯಾರ್ಥಿಗಳಾದ ಶಶಾಂಕ್ ಪಿ. ಅವರು ಆಲ್ ಇಂಡಿಯಾ ರ್‍ಯಾಂಕ್ 2197, ಶ್ರೀನಿಧಿ ರಾಯ್ಕರ್ ಅವರು 4433ನೇ ರ್‍ಯಾಂಕ್ ಹಾಗೂ ಧ್ರುವ ಎಸ್. ಅವರು 2422ನೇ ರ್‍ಯಾಂಕ್ ಪಡೆದು ಗಮನ ಸೆಳೆದಿದ್ದಾರೆ. ತಮ್ಮ ಸಾಧನೆ ಕುರಿತು ಮಾತನಾಡಿದ ರವಿಕಾಂತ್ ದಿವಾಕರ್, ಪಿ.ಡಬ್ಲ್ಯೂನ ತರಗತಿಗಳು ತಮ್ಮ ಗೊಂದಲಗಳನ್ನು ನಿವಾರಿಸಲು ಹಾಗೂ ವಿಷಯಗಳ ಮೂಲಭೂತ ಪರಿಕಲ್ಪನೆಗಳನ್ನು ಅರ್ಥಮಾಡಿಕೊಳ್ಳಲು ಸಹಕಾರಿಯಾಯಿತು ಎಂದು ಹೇಳಿದರು.

# ನೇರ ಸಂದರ್ಶನ

ಕೋಲಾರ

ಕೋಲಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯ ಅಧೀನದಲ್ಲಿನ ಜಿಲ್ಲಾ ಆಸ್ಪತ್ರೆ/ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ/ ತಾಯಿ ಮತ್ತು ಮಕ್ಕಳ ಆಸ್ಪತ್ರೆ/ ಸಮುದಾಯ ಆರೋಗ್ಯ ಕೇಂದ್ರ/ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರು / ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳು/ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ರೋಸ್ಟರ್ ಕಂ ಮೆರಿಟ್ ನಿಯಮಗಳನ್ನು ಅನುಸರಿಸಿ ನೇಮಿಸಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ನೋಂದಾಯಿತ ತಜ್ಞ ವೈದ್ಯರು/ಹಿರಿಯ ವೈದ್ಯಾಧಿಕಾರಿಗಳು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು/ ತುರ್ತು ಚಿಕಿತ್ಸಾ ವೈದ್ಯರು ಪ್ರತಿ ಸೋಮವಾರ ಬೆಳಗ್ಗೆ 11:00 ಗಂಟೆಯೊಳಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಅರ್ಹ ನೋಂದಾಯಿತ ಅಭ್ಯರ್ಥಿಗಳನ್ನು ಗುತ್ತಿಗೆ ಆಧಾರಿತ ನೇಮಕಾತಿಗೆ ನೇರ ಸಂದರ್ಶನಕ್ಕೆ ಹಾಜರಾಗಲು ತಮ್ಮ ಬಯೋಡೇಟಾ ಮತ್ತು ಮೂಲ ಅಂಕಪಟ್ಟಿ ದಾಖಲಾತಿಗಳು ಮತ್ತು ಇತರೆ ಎಲ್ಲಾ ಶೈಕ್ಷಣಿಕ ದಾಖಲೆಗಳ ಜೆರಾಕ್ಸ್ ಪ್ರತಿಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಬಹುದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ

# ಮತದಾರರ ಪಟ್ಟಿ ಪರಿಷ್ಕರಣೆ: ವಾರಾಂತ್ಯದಲ್ಲಿ 150 ವಿಶೇಷ ಶಿಬಿರಗಳು

ರಾಮನಗರ

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಗಣತಿ ನಮೂನೆಗಳ ವಿತರಣೆ, ಸಂಗ್ರಹಣೆ ಹಾಗೂ ಡಿಜಿಟಲೀಕರಣ ಕಾರ್ಯ ಪ್ರಗತಿಯಲ್ಲಿದ್ದು, ಮತದಾರರ ಅನುಕೂಲಕ್ಕಾಗಿ ವಾರಾಂತ್ಯಗಳಲ್ಲಿ ವಿಶೇಷ ಜನ ಸಂಪರ್ಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಯಶವಂತ್ ವಿ.ಗುರುಕರ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸುಮಾರು 150 ವಿಶೇಷ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದ್ದು, ಮತದಾರರು ತಮ್ಮ ವ್ಯಾಪ್ತಿಯ ಬೂತ್ ಮಟ್ಟದ ಅಧಿಕಾರಿಗಳನ್ನು (ಬಿಎಲ್‌ಒ) ಸುಲಭವಾಗಿ ಸಂಪರ್ಕಿಸಿ ಗಣತಿ ನಮೂನೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ್ದಾರೆ.

ಇದುವರೆಗೆ ಗಣತಿ (ಎನ್ಯೂಮರೇಷನ್) ನಮೂನೆಗಳನ್ನು ಭರ್ತಿ ಮಾಡಿ ಬಿಎಲ್‌ಒಗಳಿಗೆ ಸಲ್ಲಿಸದ ಮತದಾರರು ತಮ್ಮ ವ್ಯಾಪ್ತಿಯಲ್ಲಿ ನಡೆಯುವ ವಿಶೇಷ ಜನ ಸಂಪರ್ಕ ಶಿಬಿರಗಳಿಗೆ ಭೇಟಿ ನೀಡಿ ನಮೂನೆಗಳನ್ನು ಭರ್ತಿ ಮಾಡಿ ಸಲ್ಲಿಸುವ ಮೂಲಕ ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ನಿಯೋಜಿಸಲಾದ ಎಲ್ಲಾ ನೋಡಲ್ ಅಧಿಕಾರಿಗಳು, ಬೂತ್ ಮಟ್ಟದ ಅಧಿಕಾರಿಗಳು ಹಾಗೂ ಶಿಕ್ಷಕರು ವಿಶೇಷ ಜನ ಸಂಪರ್ಕ ಕಾರ್ಯಕ್ರಮಗಳು ನಡೆಯುವ ಸ್ಥಳಗಳಿಗೆ ಕಡ್ಡಾಯವಾಗಿ ಭೇಟಿ ನೀಡಿ ಕಾರ್ಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸುವಂತೆ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ನಿರ್ದೇಶನ ನೀಡಿದ್ದಾರೆ.

# ಮಾಲೀಕನಿಗೆ ಪರಿಹಾರ ಮಂಜೂರಾತಿ ಆದೇಶ ಪತ್ರ

ತುಮಕೂರು

ಜಿಲ್ಲೆಯ ಕೊರಟಗೆರೆ ತಾಲ್ಲೂಕು ವಡೇರಹಳ್ಳಿಯಲ್ಲಿ ಜುಲೈ 15ರಂದು ವಿಷಪೂರಿತ ಕೀಟನಾಶಕ ಸೇವಿಸಿ 59 ಕುರಿಗಳು ಮೃತಪಟ್ಟ ಹಿನ್ನೆಲೆಯಲ್ಲಿ ಉಪ ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ಸಂತ್ರಸ್ತ ಮಾಲೀಕರಾದ ಸರೋಜಮ್ಮ ಕೋಂ ಹನುಮಂತೇಗೌಡ ಅವರಿಗೆ ಪರಿಹಾರ ಹಣ ಮಂಜೂರಾತಿ ಆದೇಶ ಪತ್ರವನ್ನು ನೀಡಿದರು.

ಜಿಲ್ಲಾ ಪಂಚಾಯತಿಯಲ್ಲಿಂದು ಮಾಲೀಕರಿಗೆ 4,42,500 ರೂ.ಗಳ ಪರಿಹಾರ ಮಂಜೂರಾತಿ ಆದೇಶ ಪತ್ರವನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಹೇಶ್, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ|| ಹೆಚ್.ಎಂ. ಶಿವಪ್ರಸಾದ್, ಕೊರಟಗೆರೆ ತಹಶೀಲ್ದಾರ್ ಮಂಜುನಾಥ್ ಹಾಜರಿದ್ದರು.

# ಆರೋಗ್ಯ ತಪಾಸಣಾ ಶಿಬಿರ

ತುಮಕೂರು

ಕರ್ನಾಟಕ ರಾಜ್ಯ ಮೀಸಲು ಪೊಲೀಸ್ 12ನೇ ಪಡೆ ಹಾಗೂ ಶ್ರೀದೇವಿ ಆಸ್ಪತ್ರೆ ಸಹಯೋಗದಲ್ಲಿ ಜುಲೈ 18ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲೆಯ ಕೊರಟಗೆರೆ ತಾಲ್ಲೂಕು ತುಂಬುಗಾನಹಳ್ಳಿ 12ನೇ ಪಡೆ ಕೆಎಸ್‌ಆರ್‌ಪಿ ಸಭಾಂಗಣದಲ್ಲಿ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ.

ಪಾವಗಡದ ಶ್ರೀ ರಾಮಕೃಷ್ಣ ಸೇವಾಶ್ರಮದ ಶ್ರೀ ಸ್ವಾಮಿ ಜಪಾನಂದಜೀ ಮಹಾರಾಜ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಈ ಶಿಬಿರದಲ್ಲಿ ಪೊಲೀಸ್ ಅಧಿಕಾರಿ/ಸಿಬ್ಬಂದಿ ಮತ್ತು ಸುತ್ತಮುತ್ತಲಿನ ಗ್ರಾಮದ ರೈತಾಪಿ ಜನರಿಗೆ ಉಚಿತ ಆರೋಗ್ಯ ತಪಾಸಣೆ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ಬಂಟ್ವಾಳ ಯುವತಿ ಹತ್ಯೆ ಪ್ರಕರಣ; ಪ್ರಮುಖ ಆರೋಪಿ ಚೇತನ್ ವಶಕ್ಕೆ, ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನ

ಬಂಟ್ವಾಳ (ದಕ್ಷಿಣ ಕನ್ನಡ)

ಕರಾವಳಿಯನ್ನು ಬೆಚ್ಚಿಬೀಳಿಸಿದ್ದ ಬಿಸಿ ರೋಡ್ ಕೆಎಸ್‌ಆರ್‌ಟಿಸಿ ಹೊಸ ಬಸ್ ನಿಲ್ದಾಣದಲ್ಲಿ ನಡೆದ ಯುವತಿ ಹತ್ಯೆ ಪ್ರಕರಣದ ಪ್ರಮುಖ ಆರೋಪಿ ಚೇತನ್‌ನನ್ನು ಬಂಟ್ವಾಳ ಪೊಲೀಸರು ಪತ್ತೆಹಚ್ಚಿ ವಶಕ್ಕೆ ಪಡೆದಿದ್ದಾರೆ.

ಬಂಧನದ ಭೀತಿಯಿಂದ ಆರೋಪಿ ಇಲಿ ಪಾಷಾಣ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದು, ಸದ್ಯ ಪೊಲೀಸ್ ಕಾವಲಿನಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಪೊಲೀಸರು ತಿಳಿಸಿದ್ದಾರೆ.

ಜುಲೈ 16ರಂದು ಸಂಜೆ ಬಿಸಿ ರೋಡ್ ಬಸ್ ನಿಲ್ದಾಣದಲ್ಲಿ ಬಸ್‌ಗಾಗಿ ಕಾಯುತ್ತಿದ್ದ 21 ವರ್ಷದ ಲಾವಣ್ಯ ಮೇಲೆ ಚೇತನ್ ಕತ್ತಿಯಿಂದ ಹಲ್ಲೆ ನಡೆಸಿದ್ದ. ಗಂಭೀರವಾಗಿ ಗಾಯಗೊಂಡಿದ್ದ ಲಾವಣ್ಯ ಸ್ಥಳದಲ್ಲೇ ಮೃತಪಟ್ಟಿದ್ದರು. ಘಟನೆ ಬಳಿಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದಲ್ಲಿ ವಿಶೇಷ ತನಿಖಾ ತಂಡಗಳನ್ನು ರಚಿಸಿ ಆರೋಪಿಯ ಶೋಧ ಕಾರ್ಯ ಕೈಗೊಳ್ಳಲಾಗಿತ್ತು.

# ವಂಚನೆ ಆರೋಪ; ತನಿಖೆಗೆ ಸಾರ್ವಜನಿಕರ ಆಗ್ರಹ

ಬಂಗಾರಪೇಟೆ



ಮನೆ ಆಧಾರಿತ ಉದ್ಯೋಗ ನೀಡುವುದಾಗಿ ಭರವಸೆ ನೀಡಿ ಬಡವರು, ಮಹಿಳೆಯರು ಹಾಗೂ ನಿರುದ್ಯೋಗಿ ಯುವಕರಿಂದ ಲಕ್ಷಾಂತರ ರೂಪಾಯಿ ಡೆಪಾಸಿಟ್ ಸಂಗ್ರಹಿಸಿ, ಬಳಿಕ ಕೆಲಸ ಹಾಗೂ ಹಣ ಎರಡನ್ನೂ ನೀಡದೇ ಇರುವ ಆರೋಪ ಬಂಗಾರಪೇಟೆ ತಾಲ್ಲೂಕಿನ ದೆಬ್ಬನಹಳ್ಳಿ ಗ್ರಾಮದ ಸಮೀಪ ಕಾರ್ಯನಿರ್ವಹಿಸುತ್ತಿರುವ ಶ್ರೀ ಕಾಳಿಕಾದೇವಿ ಎಂಟರ್‌ಪ್ರೈಸಸ್ ವಿರುದ್ಧ ಕೇಳಿಬಂದಿದೆ.

ಸಂತ್ರಸ್ತರ ಆರೋಪದ ಪ್ರಕಾರ, "ಮನೆಯಲ್ಲೇ ಕೆಲಸ ಮಾಡಿ ತಿಂಗಳಿಗೆ ರೂ.10 ಸಾವಿರದಿಂದ ರೂ.30 ಸಾವಿರದವರೆಗೆ ಹೆಚ್ಚುವರಿ ಆದಾಯ ಗಳಿಸಿ" ಎಂಬ ಆಕರ್ಷಕ ಜಾಹೀರಾತುಗಳ ಮೂಲಕ ಸಂಸ್ಥೆ ಜನರನ್ನು ಸೆಳೆದಿತ್ತು.

ಕರ್ಪೂರ, ಊದುಬತ್ತಿ, ಎಲೆ ತಟ್ಟೆ ಸೇರಿದಂತೆ ವಿವಿಧ ವಸ್ತುಗಳನ್ನು ಮನೆಯಲ್ಲಿ ತಯಾರಿಸಿದರೆ ಕಂಪನಿಯೇ ಬಂದು ಪಡೆದು ಹಣ ಪಾವತಿಸುವುದಾಗಿ ಭರವಸೆ ನೀಡಲಾಗಿತ್ತು ಎಂದು ಅವರು ತಿಳಿಸಿದ್ದಾರೆ.

ಆರಂಭದಲ್ಲಿ ನೋಂದಣಿಗಾಗಿ ರೂ.500 ಪಡೆದು ಬಾಂಡ್ ಪೇಪರ್‌ನಲ್ಲಿ ಸೀಲ್ ಮತ್ತು ಸಹಿಯೊಂದಿಗೆ ದಾಖಲೆಗಳನ್ನು ನೀಡಲಾಗಿತ್ತು ಎನ್ನಲಾಗಿದೆ.

ನಂತರ ವಿವಿಧ ಯೋಜನೆಗಳ ಹೆಸರಿನಲ್ಲಿ ಕೆಲವರಿಂದ ರೂ.10 ಸಾವಿರ, ರೂ.39 ಸಾವಿರ, ರೂ.50 ಸಾವಿರ ಹಾಗೂ ಕೆಲವರಿಂದ ರೂ.1 ಲಕ್ಷಕ್ಕೂ ಅಧಿಕ ಮೊತ್ತವನ್ನು ಡೆಪಾಸಿಟ್ ರೂಪದಲ್ಲಿ ಸಂಗ್ರಹಿಸಲಾಗಿದೆ ಎಂದು ಸಂತ್ರಸ್ತರು ಆರೋಪಿಸಿದ್ದಾರೆ. ಈ ಹಣವನ್ನು ಹೆಚ್ಚಿನವರು ಆನ್‌ಲೈನ್ ಮೂಲಕ ಪಾವತಿಸಿರುವುದಾಗಿ ತಿಳಿಸಿದ್ದಾರೆ.

ಸ್ಥಳೀಯರ ಮಾಹಿತಿ ಪ್ರಕಾರ, ಸಂಸ್ಥೆಯಲ್ಲಿ ಸಾವಿರಕ್ಕೂ ಹೆಚ್ಚು ಮಂದಿ ನೋಂದಣಿ ಮಾಡಿಕೊಂಡಿದ್ದು, ಇದರಿಂದ ಒಟ್ಟಾರೆ ಲಕ್ಷಾಂತರ ರೂಪಾಯಿ ಡೆಪಾಸಿಟ್ ಸಂಗ್ರಹವಾಗಿರಬಹುದೆಂಬ ಅನುಮಾನ ವ್ಯಕ್ತವಾಗಿದೆ. ಆದರೆ ಈ ಕುರಿತು ಯಾವುದೇ ಅಧಿಕೃತ ಮಾಹಿತಿ ಇನ್ನೂ ಲಭ್ಯವಾಗಿಲ್ಲ.

ಕಳೆದ ಎರಡು ತಿಂಗಳಿಂದ ಮನೆಯಲ್ಲಿ ತಯಾರಿಸಿರುವ ಉತ್ಪನ್ನಗಳನ್ನು ಸಂಸ್ಥೆ ಬಂದು ಪಡೆದುಕೊಂಡಿಲ್ಲ ಎಂದು ಹಲವರು ದೂರಿದ್ದಾರೆ. ಇದರಿಂದ ತಯಾರಿಸಿದ ವಸ್ತುಗಳು ಮನೆಗಳಲ್ಲೇ ಉಳಿದುಕೊಂಡಿದ್ದು, ಅವುಗಳಿಗೆ ಹಣವೂ ದೊರೆತಿಲ್ಲ. ಜೊತೆಗೆ ಡೆಪಾಸಿಟ್ ರೂಪದಲ್ಲಿ ಪಾವತಿಸಿರುವ ಹಣವನ್ನೂ ವಾಪಸ್ ನೀಡಿಲ್ಲ ಎಂದು ಸಂತ್ರಸ್ತರು ಆರೋಪಿಸಿದ್ದಾರೆ.

ಅನೇಕ ಕುಟುಂಬಗಳು ಸಾಲ ಮಾಡಿ, ಚಿನ್ನ ಅಡಮಾನ ಇಟ್ಟು ಅಥವಾ ತಮ್ಮ ಉಳಿತಾಯದ ಹಣವನ್ನು ಹೂಡಿಕೆ ಮಾಡಿದ್ದೇವೆ.

ಈಗ ಹಣವೂ ಸಿಗದೆ, ಉದ್ಯೋಗವೂ ಇಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದೇವೆ ಎಂದು ಸಂತ್ರಸ್ತರು ತಮ್ಮ ಅಳಲು ತೋಡಿಕೊಂಡಿದ್ದಾರೆ. ಕಂಪನಿಯಿಂದ ಯಾವುದೇ ಸ್ಪಷ್ಟ ಪ್ರತಿಕ್ರಿಯೆ ಸಿಗುತ್ತಿಲ್ಲ ಎಂದು ಅವರು ಹೇಳಿದ್ದಾರೆ.

ಇದೇ ಮಾದರಿಯ ಯೋಜನೆಯಡಿ ಕೋಲಾರ ಜಿಲ್ಲೆಯ ಇತರ ಭಾಗಗಳಲ್ಲಿಯೂ ಜನರಿಂದ ಹಣ ಸಂಗ್ರಹಿಸಿ ಸಮಸ್ಯೆ ಉಂಟಾಗಿರುವ ಆರೋಪಗಳು ಕೇಳಿಬಂದಿವೆ.

ಹೀಗಾಗಿ ಈ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ, ಡೆಪಾಸಿಟ್ ರೂಪದಲ್ಲಿ ಸಂಗ್ರಹಿಸಿರುವ ಹಣದ ಲೆಕ್ಕಪತ್ರವನ್ನು ಪರಿಶೀಲಿಸಿ, ಸಂತ್ರಸ್ತರಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಹಿಪ್ಪುನೇರಳೆ ಎಲೆಸುರುಳಿ, ಥ್ರಿಪ್ಸ್-ಮೈಟ್ಸ್ ಹಾವಳಿ ನಿಯಂತ್ರಿಸಲು ಸಲಹೆ

ರಾಮನಗರ

ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯಲ್ಲಿ ಮಳೆ ಕೊರತೆ ಹಾಗೂ ಬಿರುಗಾಳಿಯಂತಹ ವಾತಾವರಣದಿಂದ ಹಿಪ್ಪುನೇರಳೆ ಬೆಳೆಯಲ್ಲಿ ಎಲೆಸುರುಳಿ ಕೀಟ, ಥ್ರಿಪ್ಸ್ ಹಾಗೂ ಮೈಟ್ಸ್ (ನುಸಿ) ಹಾವಳಿ ಹೆಚ್ಚಾಗಿದ್ದು, ರೇಷ್ಮೆ ಬೆಳೆಗಾರರು ಸಕಾಲದಲ್ಲಿ ಸಮಗ್ರ ನಿಯಂತ್ರಣ ಕ್ರಮಗಳನ್ನು ಅನುಸರಿಸಿ ಬೆಳೆ ರಕ್ಷಿಸಿಕೊಳ್ಳಬೇಕು ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ರೇಷ್ಮೆ ಉಪನಿರ್ದೇಶಕ ಎಂ.ಸಿ. ಚಂದ್ರಪ್ಪ ಸಲಹೆ ನೀಡಿದ್ದಾರೆ.

ಪ್ರಕಟಣೆ ಹೊರಡಿಸಿರುವ ಅವರು, ಫೆಬ್ರವರಿಯಿಂದ ಜುಲೈವರೆಗೆ ಥ್ರಿಪ್ಸ್ ಮತ್ತು ಮೈಟ್ಸ್, ಜುಲೈಯಿಂದ ಡಿಸೆಂಬರ್‌ವರೆಗೆ ಎಲೆಸುರುಳಿ ಕೀಟಗಳ ಹಾವಳಿಯಿಂದ ಹಿಪ್ಪುನೇರಳೆ ಎಲೆಗಳ ಇಳುವರಿ ಹಾಗೂ ಗುಣಮಟ್ಟದಲ್ಲಿ ಶೇ.40ರಿಂದ 50ರಷ್ಟು ನಷ್ಟವಾಗುತ್ತಿದೆ ಎಂದು ತಿಳಿಸಿದ್ದಾರೆ.

ಕಳೆನಾಶಕ ಮತ್ತು ಕೀಟನಾಶಕಗಳ ಅತಿಯಾದ ಬಳಕೆ, ಕಡಿಮೆ ಅಂತರದಲ್ಲಿ ಸಸಿ ನೆಡುವುದು ಹಾಗೂ ಹೆಚ್ಚಿನ ಪ್ರಮಾಣದಲ್ಲಿ ಯೂರಿಯಾ ಬಳಕೆಯಿಂದ ಕೀಟಗಳ ಹಾವಳಿ ಹೆಚ್ಚಾಗುತ್ತಿದೆ. 25ರಿಂದ 28 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶದಲ್ಲಿ ಈ ಕೀಟಗಳು ಕೇವಲ 9ರಿಂದ 12 ದಿನಗಳಲ್ಲಿ ಜೀವನಚಕ್ರ ಪೂರ್ಣಗೊಳಿಸುವುದರಿಂದ ತ್ವರಿತವಾಗಿ ತೋಟವನ್ನು ಹಾನಿಗೊಳಿಸುತ್ತವೆ ಎಂದು ಅವರು ವಿವರಿಸಿದ್ದಾರೆ.

ಹಾವಳಿ ನಿಯಂತ್ರಣಕ್ಕಾಗಿ ತೋಟವನ್ನು ಕಳೆಮುಕ್ತವಾಗಿಡುವುದು, ಶಿಫಾರಸು ಮಾಡಿದ ಪ್ರಮಾಣದಲ್ಲಿ ಸಾವಯವ ಮತ್ತು ರಾಸಾಯನಿಕ ಗೊಬ್ಬರ ಬಳಸುವುದು ಹಾಗೂ ಅಗತ್ಯ ಅಂತರ ಕಾಯ್ದುಕೊಳ್ಳುವುದು ಮುಖ್ಯ ಎಂದು ಸಲಹೆ ನೀಡಿದ್ದಾರೆ.

ಜೈವಿಕ ನಿಯಂತ್ರಣಕ್ಕಾಗಿ ಒಂದು ಎಕರೆ ತೋಟಕ್ಕೆ 1,000 ಪರಭಕ್ಷಕ ಕೀಟಗಳಾದ ಬ್ಲಾಪ್ಟೋಸ್ಟೆಥಸ್ ಪಲ್ಲೆಸೆನ್ಸ್ ಬಿಡುಗಡೆ ಮಾಡುವಂತೆ ಸೂಚಿಸಲಾಗಿದೆ.

ರಾಸಾಯನಿಕ ನಿಯಂತ್ರಣಕ್ಕಾಗಿ ಕಡ್ಡಿ ಕಟಾವಿನ 15ರಿಂದ 20 ದಿನಗಳೊಳಗೆ ಬೇವಿನ ಎಣ್ಣೆ ಮಿಶ್ರಣವನ್ನು ಮೊದಲ ಬಾರಿ ಸಿಂಪಡಿಸಬೇಕು. ನಂತರ 8ರಿಂದ 10 ದಿನಗಳ ಅಂತರದಲ್ಲಿ ಮತ್ತೊಮ್ಮೆ ಬೇವಿನ ಎಣ್ಣೆ ಹಾಗೂ ಮೂರನೇ ಹಂತದಲ್ಲಿ ವೆಟಬಲ್ ಸಲ್ಫರ್ ಸಿಂಪಡಣೆ ಮಾಡುವಂತೆ ಇಲಾಖೆ ಶಿಫಾರಸು ಮಾಡಿದೆ. ಕೊನೆಯ ಸಿಂಪಡಣೆಯ ಐದು ದಿನಗಳ ನಂತರ ಎಲೆಗಳನ್ನು ರೇಷ್ಮೆ ಹುಳುಗಳಿಗೆ ಬಳಸಬಹುದಾಗಿದೆ.

ಜುಲೈದಿಂದ ಡಿಸೆಂಬರ್‌ವರೆಗೆ ಹೆಚ್ಚಾಗುವ ಎಲೆಸುರುಳಿ ಕೀಟ ಹಾವಳಿಗೆ ತುತ್ತಾದ ಎಲೆ ಹಾಗೂ ಕುಡಿಭಾಗಗಳನ್ನು ಕಿತ್ತು ಸಾಬೂನು ದ್ರಾವಣದಲ್ಲಿ ನಾಶಪಡಿಸಬೇಕು. ಜೊತೆಗೆ ಟ್ರೈಕೋಗ್ರಾಮ್ ಕೈಲೋನಿಸ್ ಪರೋಪಜೀವಿಗಳನ್ನು ತೋಟಗಳಲ್ಲಿ ಬಿಡುಗಡೆ ಮಾಡುವ ಮೂಲಕ ಜೈವಿಕ ನಿಯಂತ್ರಣ ಕೈಗೊಳ್ಳಬಹುದಾಗಿದೆ. ಪರೋಪಜೀವಿಗಳನ್ನು ಬಿಡುಗಡೆ ಮಾಡಿದ ನಂತರ ಯಾವುದೇ ಕೀಟನಾಶಕ ಬಳಸಬಾರದು ಎಂದು ಇಲಾಖೆ ಎಚ್ಚರಿಸಿದೆ.

ಹಾವಳಿ ತೀವ್ರವಾಗಿರುವ ತೋಟಗಳಲ್ಲಿ ಶಿಫಾರಸು ಮಾಡಿದ ಪ್ರಮಾಣದಲ್ಲಿ ಇಂಟರ್‌ಫ್ರಿಡ್ ಅಥವಾ ರೋಗಾರ್ ಕೀಟನಾಶಕವನ್ನು ಸಿಂಪಡಿಸಬಹುದು. ಈ ಔಷಧಿಗಳ ಸಿಂಪಡಣೆಯ ನಂತರ 20 ದಿನ ಕಳೆದ ಬಳಿಕ ಮಾತ್ರ ಎಲೆಗಳನ್ನು ರೇಷ್ಮೆ ಹುಳುಗಳಿಗೆ ಬಳಸಬೇಕು ಎಂದು ಸೂಚಿಸಲಾಗಿದೆ.

ಈ ಔಷಧಿಗಳು ಆಯಾ ತಾಲ್ಲೂಕಿನ ರೇಷ್ಮೆ ರೈತ ಉತ್ಪಾದಕರ ಕಂಪನಿಗಳಲ್ಲಿ ಲಭ್ಯವಿದ್ದು, ಹೆಚ್ಚಿನ ಮಾಹಿತಿಗಾಗಿ ರೇಷ್ಮೆ ಉಪನಿರ್ದೇಶಕರ ಕಚೇರಿ ಅಥವಾ ಸಮೀಪದ ತಾಂತ್ರಿಕ ಸೇವಾ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಇದಲ್ಲದೆ, ಬೆಳೆ ಸಮೀಕ್ಷೆ ವೇಳೆ ರೈತರು ತಮ್ಮ ಪಹಣಿಯಲ್ಲಿ (ಆರ್‌ಟಿಸಿ) ರೇಷ್ಮೆ ಬೆಳೆ ಎಂದು ಕಡ್ಡಾಯವಾಗಿ ನಮೂದಿಸಿರಬೇಕು ಎಂದು ರೇಷ್ಮೆ ಇಲಾಖೆ ವಿಶೇಷ ಸೂಚನೆ ನೀಡಿದೆ.

# ವಿ.ಕೋಟೆಯಲ್ಲಿ ನಾಡಪ್ರಭು ಕೆಂಪೇಗೌಡರ ಭವ್ಯ ಪ್ರತಿಮೆ ಅನಾವರಣ

ಕೆಜಿಎಫ್



ಕರ್ನಾಟಕದ ಗಡಿ ಹಂಚಿಕೊಂಡಿರುವ ಆಂಧ್ರ ಪ್ರದೇಶದ ವಿ.ಕೋಟೆಯಲ್ಲಿ ಕನ್ನಡ ನಾಡಿನ ಹೆಮ್ಮೆಯ ಪ್ರತೀಕ, ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಭವ್ಯ ಪ್ರತಿಮೆಯನ್ನು ಅನಾವರಣಗೊಳಿಸಲಾಯಿತು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಐತಿಹಾಸಿಕ ಕಾರ್ಯಕ್ರಮದಲ್ಲಿ ಅಪಾರ ಸಂಖ್ಯೆಯ ಜನರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿ, ನಾಡಪ್ರಭು ಕೆಂಪೇಗೌಡರ ಕೊಡುಗೆಗಳು ಯಾವುದೇ ಒಂದು ಪ್ರದೇಶ ಅಥವಾ ಸಮುದಾಯಕ್ಕೆ ಸೀಮಿತವಾಗಿಲ್ಲ. ಅವರ ದೂರದೃಷ್ಟಿ, ಆಡಳಿತ ಕೌಶಲ್ಯ ಹಾಗೂ ಧರ್ಮಪರ ಚಿಂತನೆ ಇಡೀ ದೇಶಕ್ಕೆ ಮಾದರಿಯಾಗಿದೆ ಎಂದು ಹೇಳಿದರು.

ನಾಡಪ್ರಭು ಕೆಂಪೇಗೌಡರ ಪರಂಪರೆಯನ್ನು ಮುಂದುವರಿಸಿಕೊಂಡು ಬಂದ ಕುಟುಂಬದ ಕುಡಿಯಾಗಿ, ಕರ್ನಾಟಕವನ್ನು ಎರಡು ಬಾರಿ ಮುಖ್ಯಮಂತ್ರಿಯಾಗಿ ಮುನ್ನಡೆಸಿದ ಹಾಗೂ ಪ್ರಸ್ತುತ ಕೇಂದ್ರ ಸಚಿವರಾಗಿ ಸೇವೆ ಸಲ್ಲಿಸುತ್ತಿರುವ ಎಚ್.ಡಿ. ಕುಮಾರಸ್ವಾಮಿ ಅವರು ಈ ಮಹತ್ವದ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರತಿಮೆ ಅನಾವರಣ ಮಾಡಿರುವುದು ವಿಶೇಷವಾಗಿದೆ ಎಂದು ಶ್ರೀಗಳು ಹೇಳಿದರು.

ಕಾರ್ಯಕ್ರಮದಲ್ಲಿ ನೆರೆದಿದ್ದ ಜನರನ್ನು ಉದ್ದೇಶಿಸಿ ಮಾತನಾಡಿದ ಶ್ರೀಗಳು, "ನಿಮಗೆಲ್ಲ ಕನ್ನಡ ಬರುತ್ತದೆಯೇ?" ಎಂದು ಪ್ರಶ್ನಿಸಿದರು. ಇದಕ್ಕೆ ಜನರು ಕೈ ಎತ್ತಿ ಸಕಾರಾತ್ಮಕವಾಗಿ ಸ್ಪಂದಿಸಿದಾಗ ಸಂತಸ ವ್ಯಕ್ತಪಡಿಸಿದ ಅವರು, ಗಡಿ ಭಾಗದಲ್ಲಿ ಕನ್ನಡ ಭಾಷೆಯ ಮೇಲಿನ ಅಭಿಮಾನ ಹಾಗೂ ಭಾಷಾ ಸಾಮರಸ್ಯಕ್ಕೆ ಇದು ಉತ್ತಮ ಉದಾಹರಣೆಯಾಗಿದೆ ಎಂದು ಶ್ಲಾಘಿಸಿದರು.

ಕುಮಾರಸ್ವಾಮಿ ಅವರು ಕಾರ್ಯಕ್ರಮದಲ್ಲಿ ಪೂರ್ಣಾವಧಿ ಪಾಲ್ಗೊಳ್ಳುವ ಉದ್ದೇಶ ಹೊಂದಿದ್ದರು. ಆದರೆ ದೆಹಲಿಯಲ್ಲಿ ತುರ್ತು ಕಾರ್ಯಕಲಾಪಗಳಿದ್ದ ಕಾರಣ ಮಧ್ಯದಲ್ಲೇ ತೆರಳಬೇಕಾಯಿತು. ಅವರು ರಾಜ್ಯದ ಮುಖ್ಯಮಂತ್ರಿಯಾಗಿ ಹಾಗೂ ಪ್ರಸ್ತುತ ಕೇಂದ್ರ ಸಚಿವರಾಗಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿದರು.

> ನಾಡಪ್ರಭು ಕೆಂಪೇಗೌಡರ ಪರಂಪರೆಯನ್ನು ಮುಂದುವರಿಸಿಕೊಂಡು ಬಂದ ಕುಟುಂಬದ ಕುಡಿಯಾಗಿ, ಕರ್ನಾಟಕವನ್ನು ಎರಡು ಬಾರಿ ಮುಖ್ಯಮಂತ್ರಿಯಾಗಿ ಮುನ್ನಡೆಸಿದ ಹಾಗೂ ಪ್ರಸ್ತುತ ಕೇಂದ್ರ ಸಚಿವರಾಗಿ ಸೇವೆ ಸಲ್ಲಿಸುತ್ತಿರುವ ಎಚ್.ಡಿ. ಕುಮಾರಸ್ವಾಮಿ ಅವರು ಈ ಮಹತ್ವದ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರತಿಮೆ ಅನಾವರಣ ಮಾಡಿರುವುದು ವಿಶೇಷವಾಗಿದೆ ಎಂದು ಶ್ರೀಗಳು ಹೇಳಿದರು.

ಆಂಧ್ರ ಪ್ರದೇಶದ ವಿ.ಕೋಟೆಯಲ್ಲಿ ಕೆಂಪೇಗೌಡರ ಪ್ರತಿಮೆ ಪ್ರತಿಷ್ಠಾಪಿಸಿರುವುದು ಕನ್ನಡಿಗರು ಹಾಗೂ ತೆಲುಗು ಜನರ ನಡುವಿನ ಸಾಂಸ್ಕೃತಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸಿದೆ. ಕನ್ನಡ ಭಾಷೆ, ಸಂಸ್ಕೃತಿ ಹಾಗೂ ಕೆಂಪೇಗೌಡರ ಆದರ್ಶಗಳಿಗೆ ಗಡಿ ಮೀರಿ ಗೌರವ ದೊರೆಯುತ್ತಿರುವುದಕ್ಕೆ ಈ ಕಾರ್ಯಕ್ರಮ ಸಾಕ್ಷಿಯಾಗಿದೆ.

ಕೆಂಪೇಗೌಡರು ಜಾತಿ, ಧರ್ಮದ ಭೇದವಿಲ್ಲದೆ ಎಲ್ಲ ವರ್ಗದ ಜನರ ಅಭಿವೃದ್ಧಿಗೆ ಶ್ರಮಿಸಿದ್ದರು. ಅವರ ಆದರ್ಶಗಳನ್ನು ಕೇವಲ ಸ್ಮರಿಸುವುದಲ್ಲದೆ, ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಕರೆ ನೀಡಿದರು.

ಕೆಂಪೇಗೌಡರ ಹೆಸರಿನಲ್ಲಿ ಕಾರ್ಯನಿರ್ವಹಿಸುವ ಸಂಸ್ಥೆಗಳು ಹಾಗೂ ಅವರ ಅನುಯಾಯಿಗಳು ಸಮಾಜಮುಖಿ ಚಿಂತನೆ, ಶಿಸ್ತು ಮತ್ತು ಉತ್ತಮ ನಡವಳಿಕೆಯನ್ನು ಬೆಳೆಸಿಕೊಳ್ಳಬೇಕು. ಕೆಂಪೇಗೌಡರ ಹೆಸರಿಗೆ ಗೌರವ ತರುವ ರೀತಿಯಲ್ಲಿ ನಡೆದುಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಗಡಿ ಭಾಗದಲ್ಲಿ ಶಿಕ್ಷಣ ಮತ್ತು ಸಾಮಾಜಿಕ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಸ್ಥಳೀಯವಾಗಿ ಅಗತ್ಯ ಜಾಗ ದೊರೆತರೆ ಶಿಕ್ಷಣ ಸಂಸ್ಥೆಗಳು ಹಾಗೂ ಸಮಾಜಮುಖಿ ಯೋಜನೆಗಳನ್ನು ಸ್ಥಾಪಿಸಿ ಕೆಂಪೇಗೌಡರ ಹೆಸರನ್ನು ಶಾಶ್ವತಗೊಳಿಸಲು ಆದಿಚುಂಚನಗಿರಿ ಮಠ ಸಿದ್ಧವಿದೆ ಎಂದು ಶ್ರೀಗಳು ತಿಳಿಸಿದರು. ಬೆಂಗಳೂರಿನ ಅಭಿವೃದ್ಧಿಗೆ ಕೆಂಪೇಗೌಡರ ದೂರದೃಷ್ಟಿಯೇ ಮೂಲ ಕಾರಣವಾಗಿದೆ. ಇಡೀ ದೇಶದಲ್ಲೇ ವಿಶಿಷ್ಟವಾದ ವಿಧಾನಸೌಧ ಸೇರಿದಂತೆ ಬೆಂಗಳೂರಿನ ಅನೇಕ ವೈಭವಗಳು ಅವರ ಪರಂಪರೆಯನ್ನು ಪ್ರತಿಬಿಂಬಿಸುತ್ತಿವೆ. ಪ್ರತಿಯೊಬ್ಬರೂ ಕೆಂಪೇಗೌಡರಂತೆ ದೂರದೃಷ್ಟಿ, ಕ್ರಿಯಾಶೀಲತೆ ಹಾಗೂ ಸರ್ವರನ್ನೂ ಪ್ರೀತಿಸುವ ಗುಣ ಬೆಳೆಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ನಾಡಪ್ರಭು ಕೆಂಪೇಗೌಡರ ಆಶಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ

# 10 ದಿನದಲ್ಲಿ ವರದಿ ಸಲ್ಲಿಸಲು ಸೂಚನೆ

ಬೆಂಗಳೂರು



ಗ್ರಾಮೀಣ ಪ್ರದೇಶದ ಜನರು ಇ-ಸ್ವತ್ತು ಪಡೆಯಲು ಗ್ರಾಮ ಪಂಚಾಯಿತಿ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ತಪ್ಪಿಸುವ ಉದ್ದೇಶದಿಂದ ಮನೆಬಾಗಿಲಿಗೇ ಇ-ಸ್ವತ್ತು ಸೇವೆ ಒದಗಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಮುಂದಾಗಿದ್ದಾರೆ. ಇ-ಸ್ವತ್ತು ಪ್ರಕ್ರಿಯೆಯಲ್ಲಿರುವ ತೊಡಕುಗಳನ್ನು ನಿವಾರಿಸಲು ಪಂಚ ಸದಸ್ಯರ ಸಮಿತಿ ರಚಿಸುವಂತೆ ಅವರು ಇಲಾಖೆಯ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ.

ಈ ಕುರಿತು ಲಿಖಿತ ನಿರ್ದೇಶನ ನೀಡಿರುವ ಸಚಿವರು, ತಂತ್ರಾಂಶ ಮತ್ತು ಸರ್ವರ್ ಸಮಸ್ಯೆಯಿಂದ ಸಾವಿರಾರು ಇ-ಸ್ವತ್ತು ಅರ್ಜಿಗಳು ಬಾಕಿ ಉಳಿದಿರುವ ಹಿನ್ನೆಲೆಯಲ್ಲಿ ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಡಿ. ರಂದೀಪ್ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರು, ಮಂಗಳೂರು, ಕಲಬುರಗಿ ಹಾಗೂ ಬೆಳಗಾವಿ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳನ್ನು ಒಳಗೊಂಡ ಐದು ಸದಸ್ಯರ ಸಮಿತಿಯನ್ನು ರಚಿಸಲು ಸೂಚಿಸಿದ್ದಾರೆ.

ಸಮಿತಿಯು ಇ-ಸ್ವತ್ತು ಪ್ರಕ್ರಿಯೆಯಲ್ಲಿ ಅಗತ್ಯವಿರುವ ನಿಯಮಗಳ ಬದಲಾವಣೆಗಳ ಕುರಿತು ಅಧ್ಯಯನ ನಡೆಸಿ, 10 ದಿನಗಳೊಳಗೆ ಸಮಗ್ರ ವರದಿ ಸಲ್ಲಿಸಬೇಕು ಎಂದು ಸಚಿವರು ನಿರ್ದೇಶಿಸಿದ್ದಾರೆ.

ಗ್ರಾಮಠಾಣಾ ಪ್ರದೇಶಗಳಲ್ಲಿ ಹಲವು ದಶಕಗಳಿಂದ ವಾಸಿಸುತ್ತಿರುವ ಅನೇಕ ಕುಟುಂಬಗಳ ಬಳಿ ಸ್ವತ್ತಿನ ದಾಖಲೆಗಳಿಲ್ಲದ ಕಾರಣ ಅವರಿಗೆ ಇ-ಸ್ವತ್ತು ಪಡೆಯಲು ಸಾಧ್ಯವಾಗುತ್ತಿಲ್ಲ. ಇದರ ಪರಿಣಾಮವಾಗಿ ಬ್ಯಾಂಕ್ ಸಾಲ, ಮನೆ ದುರಸ್ತಿ, ಪುನರ್‌ನಿರ್ಮಾಣ, ಕಟ್ಟಡ ನಕ್ಷೆ ಅನುಮೋದನೆ ಹಾಗೂ ಸ್ವತ್ತು ಮಾರಾಟದಂತಹ ಅಗತ್ಯ ಕಾರ್ಯಗಳಿಗೆ ತೊಂದರೆಯಾಗುತ್ತಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಮನೆಗಳ ಸಮೀಕ್ಷೆ ನಡೆಸಿ ಸೂಕ್ತ ಮಾರ್ಗೋಪಾಯಗಳನ್ನು ಸೂಚಿಸುವಂತೆ ಖಂಡ್ರೆ ತಿಳಿಸಿದ್ದಾರೆ.

ಗ್ರಾಮಠಾಣಾ ವ್ಯಾಪ್ತಿಯ ಹೊರಗೆ ಭೂಪರಿವರ್ತಿತ ಹಾಗೂ ಭೂಪರಿವರ್ತನೆ ಆಗದ ಕಂದಾಯ ಭೂಮಿಗಳಲ್ಲಿ ನಿರ್ಮಾಣವಾಗಿರುವ ಬಡಾವಣೆಗಳು, ಬಿ-ಖರಾಬು ಮತ್ತು ಗೋಮಾಳ ಸೇರಿದಂತೆ ಸರ್ಕಾರಿ ಭೂಮಿಯನ್ನು ಒಳಗೊಂಡಿರುವ ಪ್ರದೇಶಗಳಲ್ಲಿ ನಮೂನೆ 11ಬಿ ನೀಡುವಲ್ಲಿಯೂ ಸಮಸ್ಯೆಗಳಿವೆ ಎಂದು ಸಚಿವರು ಹೇಳಿದ್ದಾರೆ.

ಇಂತಹ ಪ್ರದೇಶಗಳಿಗೆ ಗ್ರಾಮ ಪಂಚಾಯಿತಿಗಳು ರಸ್ತೆ, ಕುಡಿಯುವ ನೀರು, ಚರಂಡಿ ಹಾಗೂ ಬೀದಿ ದೀಪ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸುತ್ತಿದ್ದರೂ ತೆರಿಗೆ ಸಂಗ್ರಹಿಸಲು ಸಾಧ್ಯವಾಗುತ್ತಿಲ್ಲ. ಈ ಎಲ್ಲ ಸಮಸ್ಯೆಗಳನ್ನು ಸಮಗ್ರವಾಗಿ ಪರಿಶೀಲಿಸಿ, ರಾಜ್ಯದ ಎಲ್ಲ ಗ್ರಾಮೀಣ ಸ್ವತ್ತುಗಳಿಗೆ ಸುಗಮವಾಗಿ ಇ-ಸ್ವತ್ತು ನೀಡುವ ವ್ಯವಸ್ಥೆ ರೂಪಿಸುವ ಕುರಿತು ವರದಿ ಸಲ್ಲಿಸುವಂತೆ ಸಚಿವ ಈಶ್ವರ ಬಿ. ಖಂಡ್ರೆ ಸಮಿತಿಗೆ ಸೂಚನೆ ನೀಡಿದ್ದಾರೆ.

# ಮಾವು ಬೆಳೆಗೆ ಹವಾಮಾನ ಆಧಾರಿತ ವಿಮೆ ನೋಂದಣಿಗೆ ಆಗಸ್ಟ್ 31 ಕೊನೆಯ ದಿನ

ರಾಮನಗರ

2026-27ನೇ ಸಾಲಿನ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ರಾಮನಗರ ತಾಲ್ಲೂಕಿನ ಮಾವು ಬೆಳೆಗಾರರು ಆಗಸ್ಟ್ 31ರೊಳಗೆ ಬೆಳೆ ವಿಮೆಗೆ ನೋಂದಣಿ ಮಾಡಿಸಿಕೊಳ್ಳುವಂತೆ ತೋಟಗಾರಿಕೆ ಇಲಾಖೆ ಮನವಿ ಮಾಡಿದೆ.

ಈ ಯೋಜನೆಯಡಿ ಅಧಿಸೂಚಿತ ಬೆಳೆಗಳಿಗೆ ಬೆಳೆಸಾಲ ಪಡೆದಿರುವ ಅಥವಾ ಪಡೆಯುವ ರೈತರಿಗೆ ಬೆಳೆ ವಿಮೆ ಕಡ್ಡಾಯವಾಗಿದ್ದು, ಬೆಳೆಸಾಲ ಪಡೆಯದ ರೈತರಿಗೆ ಐಚ್ಛಿಕವಾಗಿ ವಿಮೆಗೆ ನೋಂದಾಯಿಸಿಕೊಳ್ಳುವ ಅವಕಾಶವಿದೆ.

ವಿಮೆ ಮಾಡಿಸಿಕೊಳ್ಳುವ ರೈತರು ಪ್ರಸಕ್ತ ಸಾಲಿನ ಪಹಣಿ, ಬ್ಯಾಂಕ್ ಖಾತೆ ಪುಸ್ತಕ ಹಾಗೂ ಆಧಾರ್ ಪ್ರತಿಯೊಂದಿಗೆ ತಮ್ಮ ತಾಲ್ಲೂಕಿನ ರಾಷ್ಟ್ರೀಕೃತ ಬ್ಯಾಂಕ್‌ಗಳು ಅಥವಾ ಗ್ರಾಮ ಒನ್ ಹಾಗೂ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದು.

ಮುಂಗಾರು ಹಾಗೂ ಹಿಂಗಾರು ಹಂಗಾಮಿನಲ್ಲಿ ಆಲಿಕಲ್ಲು ಮಳೆ ಮತ್ತು ಮೇಘಸ್ಫೋಟದಂತಹ ಸ್ಥಳೀಯ ಪ್ರಕೃತಿ ವಿಕೋಪಗಳಿಂದ ಬೆಳೆ ಹಾನಿಯಾದಲ್ಲಿ, ವಿಮೆ ಮಾಡಿಸಿರುವ ರೈತರು 72 ಗಂಟೆಗಳೊಳಗೆ ಸಂಬಂಧಿತ ಬ್ಯಾಂಕ್ ಅಥವಾ ವಿಮಾ ಸಂಸ್ಥೆಗೆ ಮಾಹಿತಿ ನೀಡಬೇಕು. ಹಾನಿಯ ವಿವರ, ವ್ಯಾಪ್ತಿ ಹಾಗೂ ಕಾರಣಗಳನ್ನು ನಿಗದಿತ ಅವಧಿಯಲ್ಲಿ ಸಲ್ಲಿಸಿದರೆ ಮಾತ್ರ ಪರಿಹಾರಕ್ಕೆ ಅರ್ಹರಾಗಲಿದ್ದಾರೆ. ಯೋಜನೆಯನ್ನು ಎಚ್‌ಡಿಎಫ್‌ಸಿ ಇಆರ್‌ಜಿಒ ಜನರಲ್ ಇನ್ಸೂರೆನ್ಸ್ ಕಂಪನಿ ಅನುಷ್ಠಾನಗೊಳಿಸುತ್ತಿದ್ದು, ಟೋಲ್‌ಫ್ರೀ ಸಂಖ್ಯೆ 7065514447ಗೆ ಸಂಪರ್ಕಿಸಬಹುದಾಗಿದೆ.

ಬೆಳೆಸಾಲ ಪಡೆದಿರುವ ರೈತರು ವಿಮೆಗೆ ಒಳಪಡಲು ಇಚ್ಛಿಸದಿದ್ದರೆ ನೋಂದಣಿಯ ಅಂತಿಮ ದಿನಾಂಕಕ್ಕೆ ಕನಿಷ್ಠ ಏಳು ದಿನಗಳ ಮುಂಚಿತವಾಗಿ ಸಂಬಂಧಿತ ಬ್ಯಾಂಕ್ ಶಾಖೆಯ ವ್ಯವಸ್ಥಾಪಕರಿಗೆ ಲಿಖಿತ ಮುಚ್ಚಳಿಕೆ ಪತ್ರ ಸಲ್ಲಿಸಬೇಕು ಎಂದು ಇಲಾಖೆ ತಿಳಿಸಿದೆ.

ಬೆಳೆ ನೋಂದಣಿ ವೇಳೆ ಹಿಂದಿನ ವರ್ಷದ ಬೆಳೆ ಸಮೀಕ್ಷೆಯಲ್ಲಿ ಅದೇ ಬೆಳೆ ದಾಖಲಾಗಿದ್ದರೆ ಮಾತ್ರ ನೋಂದಣಿಗೆ ಅವಕಾಶವಿದ್ದು, ಇಲ್ಲದಿದ್ದರೆ ಅರ್ಜಿ ಪರಿಗಣಿಸಲಾಗುವುದಿಲ್ಲ.

ಮಾವು ಬೆಳೆಗೆ ಪ್ರತಿ ಹೆಕ್ಟೇರ್‌ಗೆ ರೂ.80,000 ವಿಮಾ ಮೊತ್ತ ನಿಗದಿಪಡಿಸಲಾಗಿದ್ದು, ರೈತರು ಶೇ.5ರಂತೆ ರೂ.4,000 ವಿಮಾ ಕಂತು ಪಾವತಿಸಬೇಕು. ಆಗಸ್ಟ್ 31, 2026 ಬೆಳೆ ವಿಮೆ ನೋಂದಣಿಗೆ ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ಸಂಬಂಧಿತ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳು ಅಥವಾ ರಾಮನಗರ ಜಿಲ್ಲಾ ಪಂಚಾಯಿತಿಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ವಿದ್ಯುತ್ ವ್ಯತ್ಯಯ

ಕೋಲಾರ

ಕೋಲಾರ ಮತ್ತು ಚಿಂತಾಮಣಿ ಕ.ವಿ.ಪ್ರ.ನಿ.ನಿ ಕಾರ್ಯಾಚರಣೆ ವಿಭಾಗದವರು ಜುಲೈ 19 ರಂದು ಬೆಳಿಗ್ಗೆ 9.00 ರಿಂದ ಸಂಜೆ 5.00 ಗಂಟೆಯವರೆಗೂ 220ಕೆವಿ ಸ್ವೀಕರಣಾ ಕೇಂದ್ರ, ಚಿಂತಾಮಣಿ ಮತ್ತು ಶ್ರೀನಿವಾಸಪುರ ಹಾಗೂ ಅಲ್ಲಿಂದ ಸರಬರಾಜಾಗುವ ಎಲ್ಲಾ 66/11ಕೆವಿ ವಿದ್ಯುತ್ ಉಪಕೇಂದ್ರಗಳಲ್ಲಿ ಪ್ರಥಮ ತ್ರೈಮಾಸಿಕ ನಿರ್ವಹಣಾ ಕಾಮಗಾರಿಗಳನ್ನು ಹಮ್ಮಿಕೊಂಡಿರುತ್ತಾರೆ.

ಈ ಸ್ವೀಕರಣಾ ಕೇಂದ್ರಗಳಿಂದ ಸರಬರಾಜಾಗುವ ಶ್ರೀನಿವಾಸಪುರ 220ಕೆವಿ ಸ್ವೀಕರಣಾ ಕೇಂದ್ರ ಮತ್ತು 66/11ಕೆವಿ ಉಪಕೇಂದ್ರ, ತಾಡಿಗೊಳ್ ಕ್ರಾಸ್, ಲಕ್ಷ್ಮೀಪುರ, ಅಡ್ಡಗಲ್, ಸೋಮಯಾಜಲಹಳ್ಳಿ, ದಳಸನೂರು, ಮಲ್ಲಸಂದ್ರ, ಶೆಟ್ಟಿಮಾದಮಂಗಲ, ತಳಗವಾರ, ಗೌನಿಪಲ್ಲಿ, ರಾಯಲಪಾಡು, ಸೋಮಯಾಜಲಹಳ್ಳಿ ಸೋಲಾರ್ ಪ್ಲಾಂಟ್, ಯಲ್ದೂರು, ಅಡ್ಡಗಲ್ ಕುಸುಮ್-ಸಿ ಸೋಲಾರ್ ಪ್ಲಾಂಟ್, ಕ್ಯಾಲನೂರು, ಪಿಜಿಸಿಐಎಲ್ ಪವರ್‌ಗ್ರಿಡ್ ೦ಣಥುಟುಚಿಡಿಥಿ, ಸುಗಟೂರು ಹಾಗೂ ಸುತ್ತಮುತ್ತ ಗ್ರಾಮಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಗ್ರಾಹಕರು ಬೆ.ವಿ.ಕಂ ಜೊತೆ ಸಹಕರಿಸಬೇಕೆಂದು ಕೋಲಾರ ಬೆಸ್ಕಾಂ ವಾಣಿಜ್ಯ, ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

18/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ರಾಜ್ಯದ ಬರ ರಾಷ್ಟ್ರೀಯ ವಿಪತ್ತು ಘೋಷಣೆಗೆ ಕೇಂದ್ರಕ್ಕೆ ಪತ್ರ: ಡಾ.ಜಿ.ಪರಮೇಶ್ವರ್

ತುಮಕೂರು

ರಾಜ್ಯದಲ್ಲಿ ತಲೆದೋರಿರುವ ಬರಪರಿಸ್ಥಿತಿಯನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿರುವುದಾಗಿ ಉಪ ಮುಖ್ಯಮಂತ್ರಿ, ಕಂದಾಯ, ಯುವಸಬಲೀಕರಣ ಮತ್ತು ಕ್ರೀಡಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ತಿಳಿಸಿದ್ದಾರೆ.

ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲೆಯ ಬರಪರಿಸ್ಥಿತಿ ಕುರಿತು ವಿಶೇಷ ಪರಿಶೀಲನಾ ಸಭೆಯ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ರಾಜ್ಯದಲ್ಲಿ ಹಿಂದೆಂದೂ ಕಂಡರಿಯದ ಬರಪರಿಸ್ಥಿತಿ ಎದುರಾಗಿದ್ದು, ಈ ಸಂಬಂಧ ಮುಖ್ಯಮಂತ್ರಿ ಹಾಗೂ ತಾವು ವಿಭಾಗಾವಾರು ಪರಿಶೀಲನಾ ಸಭೆ ನಡೆಸಿದ್ದೇವೆ. ಅಂತೆಯೇ ರಾಜ್ಯದಲ್ಲಿ ತಲೆದೋರಿರುವ ಬರಪರಿಸ್ಥಿತಿಯನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸಿ ಪರಿಹಾರ ನೀಡುವಂತೆ ಪ್ರಧಾನಮಂತ್ರಿ, ಕೇಂದ್ರ ಗೃಹ ಸಚಿವರು ಹಾಗೂ ಕೃಷಿ ಸಚಿವರಿಗೆ ಪತ್ರ ಬರೆದಿರುವುದಾಗಿ ಅವರು ತಿಳಿಸಿದರು.

ಬರ ಘೋಷಿಸಲು ಕೇಂದ್ರ ಸರ್ಕಾರ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ ನಿಯಮಗಳನ್ನು ಸಡಿಲಗೊಳಿಸುವಂತೆ ಹಾಗೂ ಬರ ನಿರ್ವಹಣೆಗಾಗಿ ಪರಿಹಾರವನ್ನು ನೀಡುವಂತೆ ಮುಖ್ಯಮಂತ್ರಿ ಅವರು ಹಾಗೂ ತಾವು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿರುವುದಾಗಿ ಅವರು ತಿಳಿಸಿದರು.

ಕೇಂದ್ರ ಸರ್ಕಾರ ತೀವ್ರ ಬರಪರಿಸ್ಥಿತಿಯ ಹಿನ್ನೆಲೆಯಲ್ಲಿ ನಿರ್ವಹಣೆಗಾಗಿ ಮುಂಗಡವಾಗಿ ಪರಿಹಾರವನ್ನು ವಿತರಿಸಲು ಅವಕಾಶವಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಕೋರಲಾಗಿದೆ. ಆದರೂ ರಾಜ್ಯ ಸರ್ಕಾರ ಸುಮ್ಮನೆ ಕೂರುವುದಿಲ್ಲ. ರಾಜ್ಯದ ಬರಪರಿಸ್ಥಿತಿ ನಿರ್ವಹಣೆಗೆ ಸೂಕ್ತ ಕ್ರಮವಹಿಸುತ್ತಿದೆ. ಈಗಾಗಲೇ ರಾಜ್ಯಾದ್ಯಂತ ವಿಭಾಗ ಮಟ್ಟದ ಸಭೆಗಳನ್ನು ನಡೆಸಿ ಪರಿಸ್ಥಿತಿಯನ್ನು ಅವಲೋಕಿಸಲಾಗಿದೆ. ಕುಡಿಯುವ ನೀರು ಹಾಗೂ ಇತ್ಯಾದಿ ಕ್ರಮಗಳಿಗಾಗಿ ರಾಜ್ಯ ಸರ್ಕಾರ ಅಗತ್ಯ ಅನುದಾನವನ್ನು ಬಿಡುಗಡೆ ಮಾಡಿದೆ ಎಂದು ಅವರು ತಿಳಿಸಿದರು.

ತುಮಕೂರು ಜಿಲ್ಲೆಯಲ್ಲಿ ಕೇವಲ ಶೇ.9.34ರಷ್ಟು ಬಿತ್ತನೆಯಾಗಿದೆ. ಪಾವಗಡ ತಾಲ್ಲೂಕು ಹೊರತುಪಡಿಸಿ ಮಳೆ ಪ್ರಮಾಣ ಕಡಿಮೆಯಾಗಿರುವ ಉಳಿದ ತಾಲ್ಲೂಕುಗಳು ಬರಪೀಡಿತ ತಾಲ್ಲೂಕುಗಳಾಗುವ ಸಾಧ್ಯತೆಯಿದೆ. ಜಾನುವಾರು ಮೇವಿನ ಸಮಸ್ಯೆ, ಕೂಲಿ ಕೆಲಸದ ಸಮಸ್ಯೆಗಳಿಂದ ಜನ-ಜಾನುವಾರುಗಳು ಗುಳೆ ಹೋಗುವ ಪರಿಸ್ಥಿತಿ ಸೃಷ್ಟಿಯಾಗುತ್ತಿದೆ. ಜಾನುವಾರುಗಳ ಮೇವಿಗಾಗಿ ರೈತರಿಗೆ ಮೇವಿನ ಕಿಟ್‌ಗಳನ್ನು ವಿತರಿಸಲಾಗುವುದು. ಜಿಲ್ಲೆಯಲ್ಲಿರುವ ಕೊಳವೆ ಬಾವಿ, ಕೆರೆ-ಕಟ್ಟೆಗಳು ನೀರಿಲ್ಲದೆ ಬತ್ತಿಹೋಗುತ್ತಿರುವುದರಿಂದ ಗಂಭೀರ ಪರಿಸ್ಥಿತಿ ಉಂಟಾಗಿದೆ. ಸರ್ಕಾರದಿಂದ ಕುಡಿಯುವ ನೀರಿನ ಕಾಮಗಾರಿಗಳಿಗೆ ಪ್ರತಿ ಜಿಲ್ಲೆಗೆ 5 ಕೋಟಿ ರೂ. ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ 3.50ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ. ತುರ್ತು ಪರಿಸ್ಥಿತಿಗಳಲ್ಲಿ ಈ ಅನುದಾನವನ್ನು ಬಳಸಿಕೊಳ್ಳಬೇಕೆಂದು ಸೂಚನೆ ನೀಡಲಾಗಿದೆ ಎಂದರು.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿಯೂ ವಾರಕ್ಕೊಮ್ಮೆ ಟಾಸ್ಕ್‌ಫೋರ್ಸ್ ಸಭೆ ನಡೆಸಿ ಕೈಗೊಂಡ ನಿರ್ಣಯಗಳ ಸಭಾ ನಡಾವಳಿಯನ್ನು ಜಿಲ್ಲಾ ಟಾಸ್ಕ್‌ಫೋರ್ಸ್‌ಗೆ ಶಿಫಾರಸ್ಸು ಮಾಡಬೇಕು. ಜಿಲ್ಲಾಧಿಕಾರಿಗಳು ಅದನ್ನು ಪರಿಶೀಲಿಸಿ ಸರ್ಕಾರಕ್ಕೆ ಕಳುಹಿಸುವಂತೆ ಸೂಚಿಸಲಾಗಿದೆ. ಟಾಸ್ಕ್‌ಫೋರ್ಸ್‌ನಲ್ಲಿ ಕೈಗೊಂಡ ನಿರ್ಣಯದಂತೆ ಅದರ ಶಿಫಾರಸ್ಸಿನ ಅನ್ವಯ ಸರ್ಕಾರ ಕ್ರಮವಹಿಸಲಿದೆ ಎಂದು ಅವರು ತಿಳಿಸಿದರು.

ನೆರೆಯ ಆಂಧ್ರಪ್ರದೇಶ ರಾಜ್ಯ ಅನಂತಪುರ ಜಿಲ್ಲೆಯಲ್ಲಿ ಕೋವಿಡ್ ಸೋಂಕಿನಿಂದ ಈಗಾಗಲೇ ಇಬ್ಬರು ಮೃತಪಟ್ಟಿರುವ ವರದಿಯಾಗಿದ್ದು, ಮುಂಜಾಗ್ರತಾ ಕ್ರಮವಾಗಿ ಗಡಿ ಭಾಗಗಳಲ್ಲಿ ಜಿಲ್ಲೆಗೆ ಪ್ರವೇಶಿಸದಂತೆ ಚೆಕ್‌ಪೋಸ್ಟ್‌ಗಳನ್ನು ತೆರೆಯಲಾಗಿದೆ. ಕೋವಿಡ್ ಪ್ರಕರಣಗಳು ವರದಿಯಾದರೆ ಸೋಂಕಿತರನ್ನು ಕ್ವಾರಂಟೈನ್ ಮಾಡಲು ಈಗಾಗಲೇ ಆರೋಗ್ಯ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದರು.

ಬರಪರಿಸ್ಥಿತಿಯ ನೆರವಿಗಾಗಿ ರೈತರಿಗೆ ಸಹಾಯಧನ ನೀಡುವುದು ಸೇರಿದಂತೆ ಜಿಲ್ಲೆಯ ಶಾಸಕರು ಕೆಲವು ಸಲಹೆಗಳನ್ನು ನೀಡಿದ್ದಾರೆ. ಬರನಿರ್ವಹಣೆ ಕುರಿತು ಬೆಳಗಾವಿ ವಿಭಾಗದಲ್ಲಿ ಈಗಾಗಲೇ ಮುಖ್ಯಮಂತ್ರಿಗಳು ಪರಿಶೀಲನಾ ಸಭೆ ನಡೆಸಿದ್ದು, ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗದಲ್ಲಿ ಜುಲೈ 25ರಂದು ಪರಿಶೀಲನಾ ಸಭೆ ನಡೆಸಲಿದ್ದಾರೆ. ನಂತರ ಮೈಸೂರಿನಲ್ಲಿ ಪರಿಶೀಲನಾ ಸಭೆ ನಡೆಸುವರು ಎಂದರು.

ಇದಕ್ಕೂ ಮುನ್ನ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಪ್ರಕೃತಿ ವಿಕೋಪದಿಂದ ಜಿಲ್ಲೆಯಲ್ಲಿ ಎದುರಾಗಿರುವ ಬರಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಫೆಸಿಫಿಕ್ ಮೇಲ್ಮೈ ಉಷ್ಣತೆಯಲ್ಲಿ ವ್ಯತ್ಯಾಸ, ಸೂಪರ್ ಎಲ್ನಿನೋ ಪರಿಣಾಮದಿಂದ ಪ್ರಕೃತಿ ವಿಕೋಪ ಉಂಟಾಗಿ ಭಾರತದಲ್ಲಿ ಭೀಕರ ಪರಿಸ್ಥಿತಿ ಎದುರಾಗಿದೆಯಲ್ಲದೆ, ಮಳೆ ಪ್ರಮಾಣ ಕಡಿಮೆಯಾಗಿದೆ. 150 ವರ್ಷಗಳ ಹಿಂದೆ 1876ರಲ್ಲಿ ಪ್ರಕೃತಿ ವಿಕೋಪ ಎಲ್ನಿನೋ ಉಂಟಾಗಿತ್ತು. ಈ ಪರಿಸ್ಥಿತಿಯನ್ನು ಪರಾಮರ್ಶೆ ನಡೆಸಿರುವ ಅಂತಾರಾಷ್ಟ್ರೀಯ ಮಟ್ಟದ ತಜ್ಞರು ಇದನ್ನು ಸೂಪರ್ ಎಲ್ನಿನೋ ಎಂದು ಹೇಳಿದ್ದಾರೆ. ಪ್ರಕೃತಿ ವಿಕೋಪದಿಂದ ಇಡೀ ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ ಎಂದರು.

ಮಳೆಯ ಕೊರತೆಯಿಂದ ರಾಜ್ಯದ ಎಲ್ಲ ಜಲಾಶಯಗಳಲ್ಲಿ ನೀರಿನ ಮಟ್ಟ ಕಡಿಮೆಯಾಗಿದೆ. ಕರಾವಳಿ ಪ್ರದೇಶದಲ್ಲಿ ಸ್ವಲ್ಪ ಮಳೆಯಾಗಿದ್ದರಿಂದ ರಾಜ್ಯದ ಕೆಲವು ಜಲಾಶಯಗಳಿಗೆ ನೀರು ಸಂಗ್ರಹವಾಗಿದ್ದರೂ ಕೃಷಿ ಚಟುವಟಿಕೆ ಹಾಗೂ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಸರ್ಕಾರವು ಬರ ಪರಿಸ್ಥಿತಿಯನ್ನು ಅವಲೋಕಿಸಿ ಕೇಂದ್ರಕ್ಕೆ ವರದಿ ಸಲ್ಲಿಸಲು ರಾಜ್ಯದಾದ್ಯಂತ ಪರಿಶೀಲನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿರುವ ಒಟ್ಟು 341 ಮಳೆ ಮಾಪನ ಕೇಂದ್ರಗಳ ಪೈಕಿ 110 ಕೇಂದ್ರಗಳು ಕೆಟ್ಟು ಹೋಗಿವೆ. ದುರಸ್ತಿಯಲ್ಲಿರುವ ಮಳೆ ಮಾಪನ ಕೇಂದ್ರಗಳ ದತ್ತಾಂಶವನ್ನು ನಂಬಲಾಗದು. ಈ ನಿಟ್ಟಿನಲ್ಲಿ ಕೆಟ್ಟು ಹೋಗಿರುವ ಮಳೆ ಮಾಪನ ಕೇಂದ್ರಗಳನ್ನು ಮೊದಲು ದುರಸ್ತಿಗೊಳಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಯಾವುದೇ ಅಧಿಕಾರಿಗಳು ಹೊಸದಾಗಿ ಜಿಲ್ಲೆಗೆ ಬಂದಾಗ ಕಡ್ಡಾಯವಾಗಿ ಜಿಲ್ಲೆಯ ಎಲ್ಲ ಪ್ರತಿನಿಧಿಗಳನ್ನು ಸಂಪರ್ಕಿಸಿ ಪರಿಚಯ ಮಾಡಿಕೊಳ್ಳಬೇಕು. ತಾಲೂಕುಗಳ ಅಧಿಕಾರಿಗಳು ಆಯಾ ತಾಲೂಕು ಶಾಸಕರನ್ನು ಭೇಟಿ ಮಾಡಿ ಪರಿಚಯಿಸಿಕೊಳ್ಳುವಂತೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ವೇದಿಕೆಯಲ್ಲಿ ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಹೇಶ್, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ದೀಪಾ ಚೋಳನ್, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್ ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಎಸ್.ಆರ್. ಶ್ರೀನಿವಾಸ್, ಶಾಸಕರಾದ ಸುರೇಶ್ ಬಾಬು, ರಮೇಶ್ ಬಾಬು, ಡಿ.ಟಿ. ಶ್ರೀನಿವಾಸ್, ಡಾ: ರಂಗನಾಥ್, ಬಿಎಂಟಿಸಿ ಉಪಾಧ್ಯಕ್ಷ ನಿಖೇತ್ ರಾಜ್ ಎಂ, ಗ್ಯಾರಂಟಿ ಸಮಿತಿ ಜಿಲ್ಲಾ ಅಧ್ಯಕ್ಷ ಚಂದ್ರಶೇಖರ್ ಗೌಡ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.



## ಗ್ರಾಹಕರ ಸಂವಾದ ಸಭೆ

ತುಮಕೂರು

ಬೆಸ್ಕಾಂ ಗ್ರಾಮೀಣ ಉಪವಿಭಾಗ-1 ಮತ್ತು 2 ಹಾಗೂ ನಗರ ಉಪವಿಭಾಗ-2ರ ಗ್ರಾಹಕರಿಗಾಗಿ ಜುಲೈ 18ರಂದು ಮಧ್ಯಾಹ್ನ 3 ರಿಂದ 5:30 ಗಂಟೆವರೆಗೆ ಗ್ರಾಹಕ ಸಂವಾದ ಸಭೆಯನ್ನು ಏರ್ಪಡಿಸಲಾಗಿದೆ.

ಗ್ರಾಮೀಣ ಉಪವಿಭಾಗ-1ರ ಗ್ರಾಹಕರಿಗಾಗಿ ಹೊರಪೇಟೆ ವೃತ್ತ ಕೋತಿತೋಪು ಗ್ರಾಮೀಣ ಉಪವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಕಚೇರಿಯಲ್ಲಿ ಸಭೆ ನಡೆಯಲಿದ್ದು, ಕೋರಾ, ಸಿಟಿ ಕೆರೆ ಮತ್ತು ಬೆಳ್ಳಾವಿ ಶಾಖಾ ವ್ಯಾಪ್ತಿಗೆ ಬರುವ ಗ್ರಾಹಕರು, ಗ್ರಾಮೀಣ ಉಪವಿಭಾಗ-2ರ ಗ್ರಾಹಕರಿಗಾಗಿ ಹೊರಪೇಟೆಯಲ್ಲಿರುವ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಕಚೇರಿಯಲ್ಲಿ ಗ್ರಾಹಕ ಸಂವಾದ ಸಭೆಯನ್ನು ಏರ್ಪಡಿಸಲಾಗಿದ್ದು, ಭೀಮಸಂದ್ರ ನಗರ ಹಾಗೂ ಹೆಗ್ಗೆರೆ, ಮಲ್ಲಸಂದ್ರ, ದೊಡ್ಡನಾರವಂಗಲ, ಗೂಳೂರು, ಹೆತ್ತೇನಹಳ್ಳಿ, ಹೊಳಕಲ್, ನಾಗವಲ್ಲಿ, ಕಣಕುಪ್ಪೆ, ಗಂಗೋನಹಳ್ಳಿ, ಅರಿಯೂರು, ಹೆಬ್ಬೂರು, ಗಳಿಗೇನಹಳ್ಳಿ, ಬಳ್ಳಗೆರೆ, ನಿಡುವಳಲು, ಸಿರಿವರ ಗ್ರಾಮ ಪಂಚಾಯತಿಗಳ ಹೆಚ್.ಟಿ. ಮತ್ತು ಎಲ್.ಟಿ. ಗ್ರಾಹಕರು ಹಾಗೂ ನಗರ ಉಪವಿಭಾಗ-2ರ ಗ್ರಾಹಕರಿಗಾಗಿ ಜಯನಗರದ ನಗರ ಉಪವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಕಚೇರಿಯಲ್ಲಿ ಗ್ರಾಹಕ ಸಂವಾದ ಸಭೆ ನಡೆಯಲಿದ್ದು, ಎಸ್.ಎಸ್.ಪುರಂ, ಸರಸ್ವತಿಪುರಂ ಮತ್ತು ಜಯನಗರದ ಸುತ್ತಮುತ್ತಲಿನ ಗ್ರಾಹಕರು ಸಭೆಗೆ ಹಾಜರಾಗಿ ತಮ್ಮ ಸೂಕ್ತ ಸಲಹೆ ಹಾಗೂ ದೂರುಗಳನ್ನು ಸಲ್ಲಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಆಯಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

## 22ರಂದು ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರ

ತುಮಕೂರು

ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವವರಿಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್), ಜಿಲ್ಲಾ ಕೈಗಾರಿಕಾ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಜುಲೈ 22ರಂದು ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಬಳಿಯಿರುವ ಸಿಡಾಕ್ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸ ಬಯಸುವ ಆಸಕ್ತರಿಗೆ ಉದ್ಯಮಶೀಲತೆ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಯೋಜನೆಗಳ ಆಯ್ಕೆ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ಮತ್ತು ಮುಂದೆ ಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಬಗ್ಗೆ ಮಾಹಿತಿ ನೀಡಲಾಗುವುದು. ಸ್ವಂತ ಉದ್ಯಮ ಸ್ಥಾಪಿಸಲು ಆಸಕ್ತಿ ಇರುವ ತುಮಕೂರು ಜಲ್ಲೆಯ ವಿದ್ಯಾವಂತ ನಿರುದ್ಯೋಗಿ ಮಹಿಳೆಯರು/ಯುವತಿಯರು ಈ ಶಿಬಿರದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಬಹುದಾಗಿದೆ.

ಕನಿಷ್ಠ 18 ವರ್ಷ ಮೇಲ್ಪಟ್ಟ ಹಾಗೂ ಕನಿಷ್ಠ 10ನೇ ತರಗತಿ ವ್ಯಾಸಂಗ ಮಾಡಿರುವ ಆಸಕ್ತರು ಜುಲೈ 20ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ, 1ನೇ ಮಹಡಿ, ಕೈಗಾರಿಕಾ ಎಸ್ಟೇಟ್, ರಿಸರ್ವ್ ಪೋಲೀಸ್ ಮೈದಾನದ ಎದುರು, ಎಸ್.ಐ.ಟಿ., ತುಮಕೂರು ಅಥವಾ ದೂರವಾಣಿ ಸಂಖ್ಯೆ 7022746755/ 7760145784ನ್ನು ಸಂಪರ್ಕಿಸಬೇಕೆಂದು ಪ್ರಕಟಣೆ ತಿಳಿಸಿದೆ.

## ಕರಾವಳಿ, ಮಲೆನಾಡಿನಲ್ಲಿ ಭಾರಿ ಮಳೆ ಸಾಧ್ಯತೆ

ಬೆಂಗಳೂರು

ರಾಜ್ಯದಲ್ಲಿ ಮುಂಗಾರು ಮಳೆ ಕ್ಷೀಣಿಸಿರುವ ಹಿನ್ನೆಲೆಯಲ್ಲಿ ತಾಪಮಾನ ಏರಿಕೆ ಮುಂದುವರಿದಿದ್ದು, ಕೆಲ ಪ್ರದೇಶಗಳಲ್ಲಿ ಸಾಮಾನ್ಯಕ್ಕಿಂತ 3ರಿಂದ 5 ಡಿಗ್ರಿ ಸೆಲ್ಸಿಯಸ್‌ವರೆಗೆ ಅಧಿಕ ತಾಪಮಾನ ದಾಖಲಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಆದರೆ ಜುಲೈ 17 ಮತ್ತು 18ರಂದು ಕರಾವಳಿ ಹಾಗೂ ಮಲೆನಾಡಿನ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಉತ್ತರ ಒಳನಾಡಿನ ಬೀದರ್, ಯಾದಗಿರಿ, ಕಲಬುರಗಿ, ರಾಯಚೂರು, ಬೆಳಗಾವಿ ಹಾಗೂ ಧಾರವಾಡ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಬಿರುಗಾಳಿ ಸಹಿತ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಬಾಗಲಕೋಟೆ, ಗದಗ, ಹಾವೇರಿ, ಕೊಪ್ಪಳ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಗಂಟೆಗೆ 30ರಿಂದ 40 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ.

ಜುಲೈ 18ರಂದು ಬೆಳಗಾವಿ, ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ಕೆಲವೆಡೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಇದೇ ವೇಳೆ ಹಾಸನ, ಕೊಡಗು, ದಾವಣಗೆರೆ, ಚಿತ್ರದುರ್ಗ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲೂ ಮಳೆಯಾಗುವ ನಿರೀಕ್ಷೆಯಿದೆ. ಬಳ್ಳಾರಿ, ಚಾಮರಾಜನಗರ, ಕೋಲಾರ, ಮಂಡ್ಯ, ಮೈಸೂರು, ತುಮಕೂರು ಹಾಗೂ ವಿಜಯನಗರ ಜಿಲ್ಲೆಗಳಲ್ಲಿ 30ರಿಂದ 40 ಕಿಲೋಮೀಟರ್ ವೇಗದ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿದೆ.

## ಶಾಲೆ ಎದುರು ಕಸದ ರಾಶಿ: ತಕ್ಷಣ ಕ್ರಮಕ್ಕೆ ಸ್ಥಳೀಯರ ಆಗ್ರಹ

ದೊಡ್ಡಬಳ್ಳಾಪುರ

ಕೊಡಿಗೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಾಲನಜೋಗಿಹಳ್ಳಿ ಗ್ರಾಮದಲ್ಲಿ ಸರ್ಕಾರಿ ಶಾಲೆ, ಅಂಗನವಾಡಿ, ದೇವಸ್ಥಾನ, ಅಂಗಡಿಗಳು ಹಾಗೂ ವಸತಿ ಪ್ರದೇಶದ ಸಮೀಪವೇ ಕಸವನ್ನು ಅಕ್ರಮವಾಗಿ ಸುರಿಯಲಾಗುತ್ತಿದ್ದು, ದುರ್ವಾಸನೆ ಮತ್ತು ಅಸ್ವಚ್ಛತೆಯಿಂದ ಸಾರ್ವಜನಿಕರು ಹಾಗೂ ಶಾಲಾ ಮಕ್ಕಳು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ.

ಶಾಲೆಯ ಮುಂಭಾಗದಲ್ಲೇ ತ್ಯಾಜ್ಯದ ರಾಶಿ ಸೇರುತ್ತಿರುವುದರಿಂದ ವಿದ್ಯಾರ್ಥಿಗಳು ಪ್ರತಿದಿನ ದುರ್ವಾಸನೆಯ ನಡುವೆಯೇ ಶಾಲೆಗೆ ತೆರಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಸದ ರಾಶಿಯಿಂದ ಹರಡುವ ನೊಣ, ಸೊಳ್ಳೆಗಳ ಕಾಟ ಹೆಚ್ಚಾಗಿದ್ದು, ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದೆ ಎಂದು ಸ್ಥಳೀಯ ನಿವಾಸಿಗಳು ಆತಂಕ ವ್ಯಕ್ತಪಡಿಸಿದ್ದಾರೆ.


ಸ್ಥಳೀಯ ನಿವಾಸಿ ಮಂಜುನಾಥ್ ಮಾತನಾಡಿ, ಕಸದ ದುರ್ವಾಸನೆ, ನೊಣ ಹಾಗೂ ಸೊಳ್ಳೆಗಳ ಹಾವಳಿಯಿಂದ ಮಕ್ಕಳು ಮತ್ತು ಸಾರ್ವಜನಿಕರ ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದ್ದರೂ ಶಾಶ್ವತ ಪರಿಹಾರ ದೊರೆಯುತ್ತಿಲ್ಲ ಎಂದು ದೂರಿದರು.

ಪಾಲನಜೋಗಿಹಳ್ಳಿ ಮುಖ್ಯರಸ್ತೆಯಲ್ಲಿರುವ ಮಾಂಸದ ಅಂಗಡಿಗಳು, ಕೋಳಿ ಅಂಗಡಿಗಳು ಹಾಗೂ ಹೋಟೆಲ್‌ಗಳಿಂದ ಹೊರಬರುವ ಆಹಾರ ಮತ್ತು ಮಾಂಸದ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಸುರಿಯುತ್ತಿರುವುದರಿಂದ ಬೀದಿ ನಾಯಿಗಳ ಕಾಟವೂ ಹೆಚ್ಚಾಗಿದೆ. ಕಸದ ರಾಶಿಯ ಸುತ್ತ ನಾಯಿಗಳು ಗುಂಪುಗೂಡುತ್ತಿರುವುದರಿಂದ ಮಕ್ಕಳು ಹಾಗೂ ಸಾರ್ವಜನಿಕರು ಭಯಭೀತರಾಗಿ ಸಂಚರಿಸುವಂತಾಗಿದೆ.

ಗ್ರಾಮ ಪಂಚಾಯಿತಿ ಮಾಜಿ ಸದಸ್ಯೆ ಗಾಯತ್ರಿ ಮಂಜುನಾಥ್ ಮಾತನಾಡಿ, ಕಸದ ಸಮಸ್ಯೆ ನಿವಾರಣೆಗೆ ಹಲವು ಬಾರಿ ಗ್ರಾಮ ಪಂಚಾಯಿತಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಶಾಶ್ವತ ಕ್ರಮ ಕೈಗೊಂಡಿಲ್ಲ. ಕಸ ಎಸೆಯುವವರನ್ನು ಪತ್ತೆಹಚ್ಚಲು ಸಿಸಿಟಿವಿ ಅಳವಡಿಸಿ ದಂಡ ವಿಧಿಸುವಂತೆ ಮನವಿ ಮಾಡಿದ್ದರೂ ಸ್ಪಂದನೆ ದೊರೆತಿಲ್ಲ ಎಂದು ಆರೋಪಿಸಿದರು.

ಪಂಚಾಯಿತಿ ಸಿಬ್ಬಂದಿ ಪ್ರತಿದಿನ ಮನೆಮನೆಗೆ ತೆರಳಿ ಕಸ ಸಂಗ್ರಹಿಸಬೇಕಾದರೆ, ವಾರಕ್ಕೊಮ್ಮೆ ಮಾತ್ರ ಟ್ರ್ಯಾಕ್ಟರ್ ಮೂಲಕ ಕಸ ಸಂಗ್ರಹಿಸಲಾಗುತ್ತಿದೆ. ಇದರಿಂದ ಜನರು ದೈನಂದಿನ ತ್ಯಾಜ್ಯವನ್ನು ರಸ್ತೆ ಬದಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಎಸೆಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಹೇಳಿದರು.

ಕಸದ ಸಮಸ್ಯೆಯಿಂದಾಗಿ ಹಲವು ಚರಂಡಿಗಳು ಮುಚ್ಚಿಹೋಗಿದ್ದು, ಪರಿಸರ ಮಾಲಿನ್ಯವೂ ಹೆಚ್ಚಾಗಿದೆ. ಕಸವನ್ನು ಬೇಕಾಬಿಟ್ಟಿಯಾಗಿ ಎಸೆಯುವವರ ವಿರುದ್ಧ ದಂಡಾತ್ಮಕ ಕ್ರಮ ಜರುಗಿಸುವುದರ ಜೊತೆಗೆ ಪ್ರತಿದಿನ ಕಸ ಸಂಗ್ರಹಣೆ ವ್ಯವಸ್ಥೆ ಕಲ್ಪಿಸಬೇಕು. ಅಲ್ಲದೆ ತ್ಯಾಜ್ಯ ವಿಲೇವಾರಿಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕೆಲಸವನ್ನೂ ಗ್ರಾಮ ಪಂಚಾಯಿತಿ ಕೈಗೊಳ್ಳಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.



## ಕೃಷಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಕೋಲಾರ

ಕೃಷಿ ಉತ್ಪಾದನೆ ಗಣನೀಯ ಪ್ರಮಾಣದಲ್ಲಿ ಹೆಚ್ಚಳವಾಗಲು ರೈತರ ಶ್ರಮ ಮತ್ತು ಕೃಷಿಯಲ್ಲಿ ಸಕ್ರಿಯ ಪಾಲುಗಾರಿಕೆ ಕಾರಣವಾಗಿರುತ್ತದೆ. ಇಂತಹ ರೈತರ ಪರಿಶ್ರಮವನ್ನು ಗುರುತಿಸಲು ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟಗಳಲ್ಲಿ ಕೃಷಿ ಪ್ರಶಸ್ತಿ ಬಹುಮಾನಗಳನ್ನು ಇಲಾಖೆಯಿಂದ ನೀಡಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ಖುಷ್ಕಿ ಬಿತ್ತನೆ ಕಾರ್ಯ ಪ್ರಗತಿಯಲ್ಲಿರುತ್ತದೆ. ಜಿಲ್ಲೆಯಲ್ಲಿ ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆ ಹೆಚ್ಚಿಸಲು ರೈತರಲ್ಲಿ ಸ್ಪರ್ಧಾತ್ಮಕ ಮನೋಭಾವನೆಯನ್ನು ಬೆಳೆಸುವುದೇ ಕೃಷಿ ಪ್ರಶಸ್ತಿ ನೀಡುವ ಕಾರ್ಯಕ್ರಮ ಉದ್ದೇಶವಾಗಿರುತ್ತದೆ. ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕಿನಲ್ಲಿ ಹೆಚ್ಚಾಗಿ ಬೆಳೆಯುವ ಮಳೆಯಾಶ್ರಿತ ಪ್ರದೇಶದ ರಾಗಿಯನ್ನು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಬೆಳೆ ಸ್ಪರ್ಧೆಗೆ ಪರಿಗಣಿಸಿದೆ. ಆಯ್ಕೆ ಮಾಡಿರುವ ಬೆಳೆಯಲ್ಲಿ ಜಿಲ್ಲಾದ್ಯಂತ ಅತಿ ಹೆಚ್ಚು ಇಳುವರಿ ಹೊಂದಿರುವ ಮೊದಲ 3 ರೈತರನ್ನು ಜಿಲ್ಲಾ ಮಟ್ಟಕ್ಕೆ ಪರಿಗಣಿಸಲಾಗುವುದು. ತದನಂತರ ತಾಲ್ಲೂಕು ಮಟ್ಟಕ್ಕೆ ಪರಿಗಣಿಸಲಾಗುವುದು. ಹೆಚ್ಚಿನ ರೈತರು ಕೃಷಿ ಪ್ರಶಸ್ತಿ ಯೋಜನೆಯ ಪ್ರಯೋಜನೆ ಪಡೆದುಕೊಳ್ಳಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕೃಷಿ ಇಲಾಖೆಯಕೆ-ಕಿಸಾನ್ ಪೋರ್ಟಲ್‌ನಲ್ಲಿ ನೂತನವಾಗಿ ಕೃಷಿ ಪ್ರಶಸ್ತಿಗೆ ಅರ್ಜಿ ನಮೂನೆಯನ್ನು ಅಳವಡಿಸಲಾಗಿರುತ್ತದೆ. ಅರ್ಜಿಗಳನ್ನು ಆಗಸ್ಟ್ 31 ರೊಳಗೆ ಸಲ್ಲಿಸಬಹುದು. ಪ್ರಸಕ್ತ ಸಾಲಿನಿಂದ ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಅರ್ಜಿ ಶುಲ್ಕವನ್ನು ರದ್ದು ಪಡಿಸಲಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2 ವರ್ಷದ ಮಗು ಅನುಮಾನಾಸ್ಪದ ಸಾವು

ಬೆಂಗಳೂರು

ನಗರದ ಬಾಣಸವಾಡಿಯ ಇಂದಿರಾ ಸ್ಟ್ರೀಟ್‌ನಲ್ಲಿ 2 ವರ್ಷದ ಮಗು ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಬೆಳಕಿಗೆ ಬಂದಿದೆ. ಮಗುವಿನ ಸಾವಿನ ಹಿನ್ನೆಲೆಯಲ್ಲಿ ಲಿವ್-ಇನ್ ಸಂಬಂಧದಲ್ಲಿದ್ದ ತಂದೆ ಜೇಸನ್ ಆಂಥೋನಿ ಮತ್ತು ತಾಯಿ ರೋಸ್ಲಿನ್ ಮೇಲೆ ಅನುಮಾನ ವ್ಯಕ್ತವಾಗಿದೆ.

ಮೃತ ಮಗುವನ್ನು ಕಾರ್ಲೆಟ್ ಡೈಸಿ ಎಂದು ಗುರುತಿಸಲಾಗಿದೆ. ಎರಡು ದಿನಗಳ ಹಿಂದೆ ಮಗುವಿಗೆ ಇದ್ದಕ್ಕಿದ್ದಂತೆ ಉಸಿರಾಟದ ತೊಂದರೆ ಕಾಣಿಸಿಕೊಂಡಿದ್ದು, ಆಸ್ಪತ್ರೆಗೆ ಕರೆದೊಯ್ಯುವಷ್ಟರಲ್ಲಿ ಮೃತಪಟ್ಟಿದೆ ಎಂದು ಪೋಷಕರು ತಿಳಿಸಿದ್ದಾರೆ.

ಆದರೆ, ಮಗುವಿನ ತಾಯಿಯ ಸ್ನೇಹಿತೆ ಬಾಣಸವಾಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದು, ತಾಯಿ ಮಗುವಿಗೆ ಹಲ್ಲೆ ನಡೆಸುವುದನ್ನು ತಾನು ನೋಡಿದ್ದೇನೆ ಎಂದು ಆರೋಪಿಸಿದ್ದಾರೆ. ಅಲ್ಲದೆ, ಮಗುವಿನ ದೇಹದ ಮೇಲೆ ಗಾಯದ ಗುರುತುಗಳು ಕಂಡುಬಂದಿರುವುದರಿಂದ ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದಾರೆ.

ದೂರಿನ ಆಧಾರದ ಮೇಲೆ ಪೊಲೀಸರು ಬಿಎನ್‌ಎಸ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು, ಮರಣೋತ್ತರ ಪರೀಕ್ಷೆ ವರದಿ ಬಂದ ಬಳಿಕ ಸಾವಿಗೆ ನಿಖರ ಕಾರಣ ತಿಳಿಯಲಿದೆ. ಪ್ರಕರಣದ ಕುರಿತು ಬಾಣಸವಾಡಿ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ವಿದ್ಯಾರ್ಥಿಗಳಿಗೆ ಉಚಿತ ನೋಟ್, ಪಠ್ಯಪುಸ್ತಕ ವಿತರಣೆ



ದೊಡ್ಡಬಳ್ಳಾಪುರ

ತಾಲೂಕಿನ ಬಾಶೆಟ್ಟಿಹಳ್ಳಿಯಲ್ಲಿ ನೂತನವಾಗಿ ಆರಂಭಗೊಂಡಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಜೂಬಿಲೆಂಟ್ ವುಡ್ ವರ್ಕ್ಸ್ ಕಂಪನಿ ವತಿಯಿಂದ ಉಚಿತ ನೋಟ್ ಪುಸ್ತಕ ಹಾಗೂ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು.

ಕಾರ್ಯಕ್ರಮವನ್ನು ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಪ್ರೇಮ್ ಕುಮಾರ್ ಉದ್ಘಾಟಿಸಿ ಮಾತನಾಡಿ, ಶಿಕ್ಷಣ, ಆರೋಗ್ಯ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸರ್ಕಾರದ ಜೊತೆಗೆ ಖಾಸಗಿ ಕಂಪನಿಗಳು ಮತ್ತು ಸ್ವಯಂಸೇವಾ ಸಂಸ್ಥೆಗಳು ಕೈಜೋಡಿಸಿದರೆ ಉತ್ತಮ ಶಿಕ್ಷಣ ಹಾಗೂ ಆರೋಗ್ಯ ಸೌಲಭ್ಯಗಳನ್ನು ಒದಗಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಜೂಬಿಲೆಂಟ್ ವುಡ್ ವರ್ಕ್ಸ್ ಕಂಪನಿಯ ಕಾರ್ಪೊರೇಟ್ ವ್ಯವಹಾರಗಳ ಮುಖ್ಯಸ್ಥ ರಘುರಾಮ್ ವರಕಾಲ ಮಾತನಾಡಿ, ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ವಿತರಿಸುವ ಕಾರ್ಯ ನಮ್ಮ ಸಂಸ್ಥೆಗೆ ಸಂತಸ ತಂದಿದೆ. ಸಮಾಜಮುಖಿ ಕಾರ್ಯಗಳಿಗೆ ಸಂಸ್ಥೆ ಸದಾ ಸಹಕಾರ ನೀಡುತ್ತಿದ್ದು, ಅದರಲ್ಲೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ನೆರವು ನೀಡುವುದು ನಮ್ಮ ಪ್ರಮುಖ ಆದ್ಯತೆಯಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಶಿಕ್ಷಣ ಪಡೆದು ಭವಿಷ್ಯದಲ್ಲಿ ಉನ್ನತ ಸಾಧನೆ ಮಾಡಬೇಕು ಎಂದು ಅವರು ಹಾರೈಸಿದರು.

ಕಾರ್ಯಕ್ರಮದಲ್ಲಿ ಜೀವನ ನಂದನ್, ಮುನಿಯಪ್ಪ, ಮುನಿಚಂದ್ರ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಟಿ.ಆರ್. ಶ್ರೀರಾಮೇಗೌಡ ಸೇರಿದಂತೆ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## 'ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳಿ'

ಗುಡಿಬಂಡೆ

ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡಾಗ ಮಾತ್ರ ಉತ್ತಮ ಭವಿಷ್ಯ ನಿರ್ಮಾಣ ಸಾಧ್ಯ ಎಂದು ಗುಡಿಬಂಡೆ ತಾಲೂಕಿನ ಜೆಪಿ ನಗರದ ಸರ್ಕಾರಿ ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕಿ ಕೃಷ್ಣಕುಮಾರಿ ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ 10ನೇ ತರಗತಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ 'ಸ್ವಾಸ್ಥ್ಯ ಸಂಕಲ್ಪ' ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಾಲಾ ಹಂತದಲ್ಲಿಯೇ ಆರೋಗ್ಯ ಹಾಗೂ ಉತ್ತಮ ಮೌಲ್ಯಗಳ ಬಗ್ಗೆ ಅರಿವು ಮೂಡಿಸುವುದು ಅತ್ಯಗತ್ಯವಾಗಿದೆ ಎಂದು ತಿಳಿಸಿದರು.



ವಿದ್ಯಾರ್ಥಿಗಳು ತಮ್ಮ ದಿನಚರಿಯಲ್ಲಿ ಪೌಷ್ಟಿಕ ಆಹಾರ ಸೇವನೆ, ನಿಯಮಿತ ವ್ಯಾಯಾಮ ಹಾಗೂ ಸಕಾರಾತ್ಮಕ ಚಿಂತನೆಗಳನ್ನು ಅಳವಡಿಸಿಕೊಂಡರೆ ಜೀವನದಲ್ಲಿ ಯಶಸ್ಸು ಸಾಧಿಸಬಹುದು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಈ ಕಾರ್ಯಕ್ರಮ ವಿದ್ಯಾರ್ಥಿಗಳಲ್ಲಿ ಆರೋಗ್ಯದ ಮಹತ್ವವನ್ನು ಅರಿವಿಗೆ ತಂದು, ದುಶ್ಚಟಗಳಿಂದ ದೂರವಿರಲು ಪ್ರೇರಣೆ ನೀಡುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿ ಡಿ.ಎಲ್. ಪರಿಮಳ ಮಾತನಾಡಿ, ಇಂದಿನ ಯುವಜನತೆ ದುಶ್ಚಟಗಳತ್ತ ಆಕರ್ಷಿತರಾಗುತ್ತಿರುವುದು ಕಳವಳಕಾರಿ ಬೆಳವಣಿಗೆಯಾಗಿದೆ ಎಂದರು. ಸ್ವಾಸ್ಥ್ಯ ಎಂದರೆ ಕೇವಲ ದೈಹಿಕ ಆರೋಗ್ಯವಲ್ಲ, ಮಾನಸಿಕ ಮತ್ತು ಸಾಮಾಜಿಕ ನೆಮ್ಮದಿಯೂ ಆಗಿದೆ.

ಜಂಕ್ ಫುಡ್ ಹಾಗೂ ಅನಾರೋಗ್ಯಕರ ಆಹಾರ ಪದ್ಧತಿಗಳಿಂದ ದೂರವಿದ್ದು, ಉತ್ತಮ ಆಹಾರ, ಉತ್ತಮ ಅಭ್ಯಾಸ ಹಾಗೂ ಶಿಸ್ತುಬದ್ಧ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ದುಶ್ಚಟಗಳಿಗೆ ಬಲಿಯಾದ ವ್ಯಕ್ತಿಯನ್ನು ಸಮಾಜ ಹೇಗೆ ಕಡೆಗಣಿಸುತ್ತದೆ ಎಂಬುದರ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದ ಅವರು, ಉತ್ತಮ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಮದ್ದರೆಡ್ಡಿ ಮಾತನಾಡಿ, ಇಂತಹ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ದೇವೇಂದ್ರ, ಮೇಲ್ವಿಚಾರಕಿ ಮಂಜುಳಾ, ಸೇವಾಪ್ರತಿನಿಧಿಗಳಾದ ಉಷಾ ಮತ್ತು ಅನ್ವರ್ ಭಾಷಾ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ವಿಶ್ವ ಯೋಗ ದಿನಾಚರಣೆ

ತಿಪಟೂರು

ಖಾಯಿಲೆಗಳು ಬಂದ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ ಅವು ಬಾರದಂತೆ ಮುನ್ನೆಚ್ಚರಿಕೆ ವಹಿಸುವುದು ಅತ್ಯಂತ ಮುಖ್ಯ. ವಿಶೇಷವಾಗಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ನಿಯಮಿತ ಆರೋಗ್ಯ ತಪಾಸಣೆ, ಅಗತ್ಯ ಲಸಿಕೆ ಹಾಗೂ ಮಿತ ಆಹಾರ ಸೇವನೆಯ ಮೂಲಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಿದ್ದೇಶ್ವರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸಂತೋಷ್ ಹೇಳಿದರು.

ನಗರದ ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ಸಭಾಂಗಣದಲ್ಲಿ ಆಯೋಜಿಸಿದ್ದ ನಾಡಪ್ರಭು ಕೆಂಪೇಗೌಡರ ಜಯಂತಿ, ವಿಶ್ವ ಯೋಗ ದಿನಾಚರಣೆ ಹಾಗೂ ಮಾಸಿಕ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉಪನ್ಯಾಸಕ ಮಧುಸೂದನ್ ಮಾತನಾಡಿ, ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕುರಿತು ಮಾಹಿತಿ ನೀಡಿ, ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಹಾಗೂ ಅನರ್ಹರು ಸೇರ್ಪಡೆಯಾಗದಂತೆ ಎಲ್ಲರೂ ಜಾಗರೂಕರಾಗಬೇಕು ಎಂದು ಹೇಳಿದರು. ನಮೂನೆಗಳನ್ನು ಭರ್ತಿ ಮಾಡುವ ವೇಳೆ ಯಾವುದೇ ಸಮಸ್ಯೆ ಎದುರಾದರೆ ತಮ್ಮನ್ನು ಸಂಪರ್ಕಿಸುವಂತೆ ತಿಳಿಸಿದರು.

ಸಿ.ಆರ್.ಪಿ. ದಿವಾಕರ್ ಮಾತನಾಡಿ, ಬೆಂಗಳೂರಿಗೆ ಇಂದು ಜಾಗತಿಕ ಮಟ್ಟದಲ್ಲಿ ದೊರೆತಿರುವ "ಸಿಲಿಕಾನ್ ಸಿಟಿ" ಎಂಬ ಹೆಗ್ಗಳಿಕೆಗೆ ನಾಡಪ್ರಭು ಕೆಂಪೇಗೌಡರ ದೂರದೃಷ್ಟಿಯೇ ಕಾರಣವಾಗಿದೆ. ರಾಜ್ಯದ ಆರ್ಥಿಕ ಅಭಿವೃದ್ಧಿಯಲ್ಲಿ ಬೆಂಗಳೂರಿನ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ಯೋಗ ಗುರು ಬಸವರಾಜು ಮಾತನಾಡಿ, ಯೋಗಾಭ್ಯಾಸವು ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡುವ ಅತ್ಯುತ್ತಮ ಸಾಧನವಾಗಿದೆ. ಯೋಗಕ್ಕೆ ಜಾತಿ, ಮತ, ಧರ್ಮ ಅಥವಾ ಲಿಂಗದ ಯಾವುದೇ ಭೇದವಿಲ್ಲ. ಪ್ರತಿಯೊಬ್ಬರೂ ನಿತ್ಯ ಯೋಗಾಭ್ಯಾಸ ಮಾಡುವ ಮೂಲಕ ಆರೋಗ್ಯಕರ ಜೀವನ ನಡೆಸಬಹುದು ಎಂದು ಸಲಹೆ ನೀಡಿದರು.

ನಿವೃತ್ತ ನೌಕರರ ಸಂಘದ ತಾಲೂಕು ಅಧ್ಯಕ್ಷ ಕೆ.ಎಂ. ರಾಜಣ್ಣ ಮಾತನಾಡಿ, ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಯೋಗವನ್ನು ಜೀವನದ ಭಾಗವಾಗಿಸಿಕೊಳ್ಳಬೇಕು. ಜೊತೆಗೆ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ವೇಳೆ ನಮೂನೆಗಳನ್ನು ಎಚ್ಚರಿಕೆಯಿಂದ ಭರ್ತಿ ಮಾಡಿ, ಮತದಾನ ಎಂಬ ಹಕ್ಕು ಮತ್ತು ಕರ್ತವ್ಯವನ್ನು ಪ್ರತಿಯೊಬ್ಬರೂ ಪಾಲಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಪಿ.ಆರ್. ಗುರುಸ್ವಾಮಿ, ಖಜಾಂಚಿ ಕುಮಾರ್, ಸಹಕಾರ ಸಂಘದ ಅಧ್ಯಕ್ಷ ವಿ.ಎನ್. ಮಹದೇವಯ್ಯ, ನಿವೃತ್ತ ಪ್ರಾಂಶುಪಾಲ ಡಿ.ಎಸ್. ಮರುಳಪ್ಪ, ಪದಾಧಿಕಾರಿಗಳಾದ ಬಸವರಾಜು, ಮಂಜಪ್ಪ, ಗಂಗಾಧರ್, ವಿಶ್ವನಾಥಯ್ಯ, ನರಸಿಂಹಮೂರ್ತಿ, ಅಂಬಿಕಮ್ಮ ಸೇರಿದಂತೆ ಸಂಘದ ಪದಾಧಿಕಾರಿಗಳು, ನಿರ್ದೇಶಕರು ಹಾಗೂ ಸದಸ್ಯರು ಭಾಗವಹಿಸಿದ್ದರು.

# ರಂಗನಾಥ್‌ಗೆ ಸಚಿವ ಸ್ಥಾನ ನೀಡುವಂತೆ ಮನವಿ

ಕುಣಿಗಲ್

ಕುಣಿಗಲ್ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಹೆಚ್.ಡಿ. ರಂಗನಾಥ್ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ಕಲ್ಪಿಸುವಂತೆ ಕುಣಿಗಲ್ ತಾಲೂಕು ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಶಂಕರ್ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸತತ ಎರಡು ಬಾರಿ ಕುಣಿಗಲ್ ಕ್ಷೇತ್ರದಿಂದ ಗೆಲುವು ಸಾಧಿಸಿರುವ ಡಾ. ರಂಗನಾಥ್ ಅವರು ರೈತರು, ಬಡವರು ಹಾಗೂ ಸಾಮಾನ್ಯ ಜನರ ಸಮಸ್ಯೆಗಳ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದು, ಅಭಿವೃದ್ಧಿ ಪರ ಚಿಂತನೆಯೊಂದಿಗೆ ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

ಇಂತಹ ಯುವ ಹಾಗೂ ಉತ್ಸಾಹಿ ಶಾಸಕರಿಗೆ ಸಚಿವ ಸಂಪುಟದಲ್ಲಿ ಅವಕಾಶ ನೀಡಿದರೆ ಕಾಂಗ್ರೆಸ್ ಪಕ್ಷದ ಬಲವರ್ಧನೆಗೆ ನೆರವಾಗುವುದರ ಜೊತೆಗೆ ಅಭಿವೃದ್ಧಿ ಕಾಮಗಾರಿಗಳಿಗೆ ಮತ್ತಷ್ಟು ವೇಗ ಸಿಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಪಕ್ಷದ ಹಿರಿಯ ನಾಯಕ ರಾಹುಲ್ ಗಾಂಧಿ ಅವರು ಈ ಬಾರಿಯ ಸಚಿವ ಸಂಪುಟ ವಿಸ್ತರಣೆಯಲ್ಲಿ ಯುವ ಶಾಸಕರಿಗೆ ಆದ್ಯತೆ ನೀಡಬೇಕು ಎಂದು ಸೂಚಿಸಿರುವ ಹಿನ್ನೆಲೆಯಲ್ಲಿ ಡಾ. ರಂಗನಾಥ್ ಅವರಿಗೆ ಅವಕಾಶ ದೊರೆಯುವ ವಿಶ್ವಾಸವಿದೆ ಎಂದು ಶಂಕರ್ ತಿಳಿಸಿದ್ದಾರೆ.

ತುಮಕೂರು ಜಿಲ್ಲೆಯ ನೀರಾವರಿ, ಕೃಷಿ, ವೈದ್ಯಕೀಯ ಹಾಗೂ ಶಿಕ್ಷಣ ಕ್ಷೇತ್ರಗಳ ಅಭಿವೃದ್ಧಿಗೆ ಡಾ. ರಂಗನಾಥ್ ಅವರ ಸೇವೆ ಮತ್ತಷ್ಟು ಪರಿಣಾಮಕಾರಿಯಾಗಲಿದ್ದು, ರಾಜ್ಯದ ಯುವಜನರ ಪರವಾಗಿ ಧ್ವನಿ ಎತ್ತಲು ಹಾಗೂ ಉದ್ಯೋಗ ಸೃಷ್ಟಿಗೆ ಕೊಡುಗೆ ನೀಡಲು ಸಚಿವ ಸ್ಥಾನ ನೆರವಾಗಲಿದೆ ಎಂದು ಅವರು ಹೇಳಿದ್ದಾರೆ.

ಹೀಗಾಗಿ ಕುಣಿಗಲ್ ಕ್ಷೇತ್ರದ ಶಾಸಕ ಡಾ. ಹೆಚ್.ಡಿ. ರಂಗನಾಥ್ ಅವರಿಗೆ ಸಚಿವ ಸ್ಥಾನ ನೀಡಿ ನ್ಯಾಯ ಒದಗಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಶಂಕರ್ ಆಗ್ರಹಿಸಿದ್ದಾರೆ.

# ಪುನರಾಭಿವೃದ್ಧಿಗೊಂಡ ಬಾದಾಮಿ ರೈಲು ನಿಲ್ದಾಣ ಲೋಕಾರ್ಪಣೆ



ಬಾದಾಮಿ

ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ಪುನರಾಭಿವೃದ್ಧಿಗೊಂಡ ಬಾದಾಮಿ ರೈಲು ನಿಲ್ದಾಣವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಶುಕ್ರವಾರ ವಿಡಿಯೊ ಕಾನ್ಫರೆನ್ಸ್ ಮೂಲಕ ರಾಷ್ಟ್ರಕ್ಕೆ ಸಮರ್ಪಿಸಿದರು. ಇದೇ ಸಂದರ್ಭದಲ್ಲಿ ನೈಋತ್ಯ ರೈಲ್ವೆಯ ಹುಬ್ಬಳ್ಳಿ ವಿಭಾಗದ ಅಳ್ನಾವರ ಹಾಗೂ ಕೊಪ್ಪಳ ರೈಲು ನಿಲ್ದಾಣಗಳನ್ನೂ ಉದ್ಘಾಟಿಸಲಾಯಿತು.

ಬಾದಾಮಿ ರೈಲು ನಿಲ್ದಾಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿ, ಪುನರಾಭಿವೃದ್ಧಿಗೊಂಡ ಬಾದಾಮಿ ರೈಲು ನಿಲ್ದಾಣವು ಆಧುನಿಕ ಭಾರತೀಯ ರೈಲ್ವೆಯ ಹೊಸ ಪರಿಕಲ್ಪನೆಯನ್ನು ಪ್ರತಿಬಿಂಬಿಸುವಂತಿದ್ದು, ಅತ್ಯಾಧುನಿಕ ಸೌಲಭ್ಯಗಳೊಂದಿಗೆ ನಿರ್ಮಿಸಲಾಗಿದೆ ಎಂದು ಹೇಳಿದರು.

ನಿಲ್ದಾಣದಲ್ಲಿ ವಿಶಾಲ ಹಾಗೂ ಸುಸಜ್ಜಿತ ನಿರೀಕ್ಷಣಾ ಕೊಠಡಿಗಳು, ದಿವ್ಯಾಂಗ ಸ್ನೇಹಿ ಶೌಚಾಲಯಗಳು, ಆಕರ್ಷಕ ಕಟ್ಟಡ ಮುಂಭಾಗ, ಉತ್ತಮ ಬೆಳಕಿನ ವ್ಯವಸ್ಥೆ, ಸುಧಾರಿತ ಪ್ರಯಾಣಿಕರ ಸೌಲಭ್ಯಗಳು ಹಾಗೂ ಗುಣಮಟ್ಟದ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದರು.

# ಬಂಗಾರಪೇಟೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಡೆಗೆ ಕ್ರಮ



ಬಂಗಾರಪೇಟೆ

ತಾಲೂಕಿನಲ್ಲಿ ಮಳೆ ಕೊರತೆಯಿಂದ ಸುಮಾರು 60 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿರುವ ಹಿನ್ನೆಲೆಯಲ್ಲಿ, ರೈತರ ತೋಟಗಳಲ್ಲಿರುವ ಬೋರ್‌ವೆಲ್‌ಗಳಿಂದ ಬಾಡಿಗೆ ಆಧಾರದ ಮೇಲೆ ನೀರು ಪಡೆದು ಗ್ರಾಮಗಳಿಗೆ ಪೂರೈಕೆ ಮಾಡುವ ಕ್ರಮ ಕೈಗೊಳ್ಳಲಾಗಿದೆ ಎಂದು ಶಾಸಕ ಎಸ್.ಎನ್.ನಾರಾಯಣಸ್ವಾಮಿ ತಿಳಿಸಿದ್ದಾರೆ.

ತಾಲೂಕು ಆಡಳಿತ ಕಚೇರಿ ಸಭಾಂಗಣದಲ್ಲಿ ನಡೆದ ಕುಡಿಯುವ ನೀರಿನ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಬಳಿಕ ಮಾತನಾಡಿದ ಅವರು, ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಹೇಳಿದರು.

ಅಗತ್ಯವಿರುವ ಗ್ರಾಮಗಳಲ್ಲಿ ಹೊಸ ಕೊಳವೆಬಾವಿಗಳನ್ನು ಕೊರೆದು ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದು. ಜೊತೆಗೆ ಸುಮಾರು 80 ಹೊಸ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗುತ್ತಿದ್ದು, ಈಗಿರುವ ಕೆಲವು ಹಳೆಯ ಘಟಕಗಳನ್ನು ದುರಸ್ತಿಪಡಿಸಲಾಗಿದೆ. ಉಳಿದ ಘಟಕಗಳನ್ನೂ ಶೀಘ್ರದಲ್ಲೇ ದುರಸ್ತಿಗೊಳಿಸಿ ಗ್ರಾಮೀಣ ಜನತೆಗೆ ಶುದ್ಧ ಕುಡಿಯುವ ನೀರು ಒದಗಿಸಲಾಗುವುದು ಎಂದು ತಿಳಿಸಿದರು.

ನಗರ ವ್ಯಾಪ್ತಿಯ 52 ಕೊಳವೆಬಾವಿಗಳು ಬತ್ತಿಹೋಗಿದ್ದು, ಯರಗೋಳ ಯೋಜನೆಯಿಂದ ಬರುತ್ತಿದ್ದ ನೀರಿನ ಪ್ರಮಾಣವೂ ಕಡಿಮೆಯಾಗಿದೆ. ಈ ಹಿನ್ನೆಲೆಯಲ್ಲಿ ಅತ್ತಗಿರಿ ಕೊಪ್ಪ ಕೆರೆಯ ಪಂಪ್‌ಹೌಸ್‌ನಿಂದ ನಗರಕ್ಕೆ ನೀರು ಪೂರೈಸುವ ವ್ಯವಸ್ಥೆ ಕಲ್ಪಿಸಲು ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಹೇಳಿದರು.

ಮಳೆ ಅಭಾವದಿಂದ ತಾಲೂಕಿನಲ್ಲಿ ರಾಗಿ, ಶೇಂಗಾ, ಅವರೆ ಹಾಗೂ ತೊಗರಿ ಬೆಳೆಗಳ ಬಿತ್ತನೆ ಕೇವಲ ಶೇ.5ರಷ್ಟು ಮಾತ್ರ ನಡೆದಿದ್ದು, ಉಳಿದ ಶೇ.95ರಷ್ಟು ಪ್ರದೇಶದಲ್ಲಿ ಇನ್ನೂ ಬಿತ್ತನೆ ಸಾಧ್ಯವಾಗಿಲ್ಲ. ಈ ಕುರಿತು ಸರ್ಕಾರದ ಗಮನ ಸೆಳೆಯಲಾಗುವುದು ಎಂದು ಶಾಸಕರು ಹೇಳಿದರು.

ತೋಟಗಾರಿಕೆ ಮತ್ತು ಕೃಷಿ ಇಲಾಖೆಯಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆಯಿಲ್ಲ. ಟಿಎಪಿಎಂಎಸ್ ಗೋದಾಮುಗಳಲ್ಲಿಯೂ ಅಗತ್ಯ ಪ್ರಮಾಣದ ದಾಸ್ತಾನು ಲಭ್ಯವಿದ್ದು, ಮಳೆ ಆರಂಭವಾದ ಕೂಡಲೇ ರೈತರಿಗೆ ಬೇಕಾದ ಬೀಜ ಮತ್ತು ರಸಗೊಬ್ಬರಗಳನ್ನು ವಿತರಿಸಲಾಗುವುದು ಎಂದು ತಿಳಿಸಿದರು.

ತಾಲೂಕಿನ ಜಾನುವಾರುಗಳಿಗೆ ಸುಮಾರು 18 ತಿಂಗಳಿಗೆ ಸಾಕಾಗುವಷ್ಟು ಮೇವು ದಾಸ್ತಾನು ಮಾಡಲಾಗಿದೆ. ಅಗತ್ಯವಿದ್ದರೆ ಮೇವು ಬ್ಯಾಂಕ್‌ಗಳನ್ನು ಆರಂಭಿಸಿ ಜಾನುವಾರುಗಳಿಗೆ ಮೇವು ಪೂರೈಸಲು ತಾಲೂಕು ಆಡಳಿತ ಸಿದ್ಧವಿದೆ ಎಂದು ಹೇಳಿದರು.

ರೈತರಿಗೆ ಕಳೆದ 15 ದಿನಗಳಿಂದ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುತ್ತಿರುವ ಬಗ್ಗೆ ರೈತರು ಧರಣಿ ನಡೆಸಿ ಗಮನ ಸೆಳೆದಿದ್ದಾರೆ. ಈ ಸಂಬಂಧ ಬೆಸ್ಕಾಂ ಅಧಿಕಾರಿಗಳೊಂದಿಗೆ ಸಭೆ ಹಾಗೂ ದೂರವಾಣಿ ಮೂಲಕ ಚರ್ಚೆ ನಡೆಸಲಾಗಿದ್ದು, ಇನ್ನೆರಡು ದಿನಗಳಲ್ಲಿ ಸಮಸ್ಯೆ ಬಗೆಹರಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ. ರೈತರ ಪರವಾಗಿ ನಿಂತು ಅವರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲಾಗುವುದು ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ಹೇಳಿದರು.

ಸಭೆಯಲ್ಲಿ ತಹಶೀಲ್ದಾರ್ ಸುಜಾತ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್, ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿ ಆನಂದ್, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಶಿವಕುಮಾರಿ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು

# ಶಾಲೆಗೆ ಕುರ್ಚಿ, ಲೇಖನಿ ಸಾಮಗ್ರಿಗಳ ವಿತರಣೆ



ಕೋಲಾರ

ಬಂಗಾರಪೇಟೆ ತಾಲೂಕಿನ ದೊಡ್ಡಚಿನ್ನಹಳ್ಳಿಯ ಸರ್ಕಾರಿ ಕನ್ನಡ–ಆಂಗ್ಲ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬಿಇಎಂಎಲ್ ಸಂಸ್ಥೆಯ ಸಾಮಾಜಿಕ ಹೊಣೆಗಾರಿಕೆ ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಗೆ 25 ಕುರ್ಚಿಗಳು ಹಾಗೂ ಲೇಖನಿ ಸಾಮಗ್ರಿಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಬಿಇಎಂಎಲ್ ಉಪ ಮಹಾಪ್ರಬಂಧಕ ಶಿವಕುಮಾರ್ ಮಾತನಾಡಿ, ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಬಿಇಎಂಎಲ್ ಸಂಸ್ಥೆ ಸದಾ ಬದ್ಧವಾಗಿದೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಭವಿಷ್ಯದಲ್ಲಿ ಉನ್ನತ ಸ್ಥಾನಗಳನ್ನು ಅಲಂಕರಿಸಿ ಸಮಾಜಕ್ಕೆ ಕೊಡುಗೆ ನೀಡಬೇಕು. ಸಂಸ್ಥೆಯಿಂದ ನೀಡಲಾಗುತ್ತಿರುವ ಈ ನೆರವು ಅವರ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಲಿ ಎಂದು ಆಶಿಸಿದರು.

ಅತಿಥಿಯಾಗಿ ಭಾಗವಹಿಸಿದ್ದ ಬಿಇಎಂಎಲ್ ಹಿರಿಯ ವ್ಯವಸ್ಥಾಪಕ ತುಳಸಿ ಮೋಹನ್ ಮಾತನಾಡಿ, ವಿದ್ಯಾರ್ಥಿಗಳಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದು ಸಮಾಜದ ಜವಾಬ್ದಾರಿಯಾಗಿದೆ. ಮಕ್ಕಳು ಕೇವಲ ಅಂಕಗಳಿಗಾಗಿ ಅಲ್ಲ, ಜ್ಞಾನ ಸಂಪಾದನೆಗಾಗಿ ಶಿಕ್ಷಣ ಪಡೆಯಬೇಕು. ಬಿಇಎಂಎಲ್ ಸಂಸ್ಥೆ ಇಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಇಎಂಎಲ್ ಲೇಡೀಸ್ ಕ್ಲಬ್‌ನ ಗೀತಾ ಮೋಹನ್ ಅವರು ವಿದ್ಯಾರ್ಥಿಗಳಿಗೆ ಪೆನ್ಸಿಲ್ ಕಿಟ್‌ಗಳನ್ನು ವಿತರಿಸಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಬಿಇಎಂಎಲ್ ರಕ್ಷಣಾ ವಿಭಾಗದ ಉಪ ಮಹಾಪ್ರಬಂಧಕ ಸುರೇಶ್ ಬಾಬು, ಉದ್ಯಮಿ ವೆಂಕಟೇಶ್, ಶಾಲೆಯ ಶಿಕ್ಷಕರು, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಿದ್ಯುತ್ ಸಮಸ್ಯೆ, ಬೆಸ್ಕಾಂ ಕಚೇರಿ ಮುಚ್ಚಿ ರೈತರ ಪ್ರತಿಭಟನೆ: ಆಕ್ರೋಶ



ಬಂಗಾರಪೇಟೆ

ನಿರಂತರ ವಿದ್ಯುತ್ ವ್ಯತ್ಯಯ ಖಂಡಿಸಿ ರೈತರು ಬೆಸ್ಕಾಂ ಕಚೇರಿಯ ಬಾಗಿಲು ಬಂದ್ ಮಾಡಿ ಪ್ರತಿಭಟನೆ ನಡೆಸಿದ ಪರಿಣಾಮ, ಕಚೇರಿಯ ಆಡಳಿತಾತ್ಮಕ ಕಾರ್ಯಗಳು ಕೆಲಕಾಲ ಸ್ಥಗಿತಗೊಂಡ ಘಟನೆ ಶುಕ್ರವಾರ ನಡೆದಿದೆ.

ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನಡೆದ ಪ್ರತಿಭಟನೆಯಿಂದ ವಿವಿಧ ಶಾಖೆಗಳ ಕಿರಿಯ ಎಂಜಿನಿಯರ್‌ಗಳು (ಜೆಇ) ಹಾಗೂ ಸಿಬ್ಬಂದಿಗೆ ಕಚೇರಿಯೊಳಗೆ ಪ್ರವೇಶಿಸಿ ಕೆಲಸ ನಿರ್ವಹಿಸಲು ಸಾಧ್ಯವಾಗಲಿಲ್ಲ. ಪರಿಣಾಮ ಅವರು ಕಚೇರಿಯ ಹೊರಭಾಗದಲ್ಲಿರುವ ಜಗಲಿಯ ಮೇಲೆ ಕುಳಿತು ಸಮಯ ಕಳೆಯಬೇಕಾಯಿತು.

ರೈತರು ವಿದ್ಯುತ್ ಸಮಸ್ಯೆಯನ್ನು ತಕ್ಷಣ ಪರಿಹರಿಸುವಂತೆ ಆಗ್ರಹಿಸಿ ಬೆಸ್ಕಾಂ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಕೃಷಿ ಚಟುವಟಿಕೆಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆಯಾಗದ ಕಾರಣ ತೀವ್ರ ಸಂಕಷ್ಟ ಎದುರಿಸುತ್ತಿದ್ದೇವೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಪ್ರತಿಭಟನೆಯ ವೇಳೆ ಕಾರಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ತಿಮ್ಮಾಪುರ ಕೃಷ್ಣಮೂರ್ತಿ ಮಾತನಾಡಿ, "ವಿದ್ಯುತ್ ಸಮಸ್ಯೆ ಬಗೆಹರಿಯದಿದ್ದರೆ ಸೋಮವಾರದಿಂದ ಹಳ್ಳಿ–ಹಳ್ಳಿಗೆ ತೆರಳಿ ಮನೆಮನೆಗೆ ಪ್ರಚಾರ ನಡೆಸಿ, ಬೆಸ್ಕಾಂ ಕಚೇರಿ ಎದುರು ಉಗ್ರ ಹೋರಾಟ ಆರಂಭಿಸಲಾಗುವುದು. ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವವರೆಗೆ ಹೋರಾಟ ಮುಂದುವರಿಯಲಿದೆ" ಎಂದು ಎಚ್ಚರಿಕೆ ನೀಡಿದರು. ಪ್ರತಿಭಟನೆಯಿಂದ ಕೆಲಕಾಲ ಬೆಸ್ಕಾಂ ಕಚೇರಿಯ ಕಾರ್ಯಚಟುವಟಿಕೆಗಳಿಗೆ ಅಡಚಣೆ ಉಂಟಾದರೂ, ಬಳಿಕ ಪರಿಸ್ಥಿತಿ ಸಹಜಗೊಂಡಿತು.

# ಕೆರೆ ನೀರನ್ನು ಅಕ್ರಮವಾಗಿ ತೋಟಗಳಿಗೆ ಹರಿಸುತ್ತಿದ್ದವರ ವಿರುದ್ಧ ಕ್ರಮ



ಮಾಲೂರು

ತಾಲೂಕಿನ ತರ್ನಹಳ್ಳಿ ಗ್ರಾಮದ ಕೆರೆಯಲ್ಲಿ ಖಾಸಗಿ ವ್ಯಕ್ತಿಗಳು ಅಕ್ರಮವಾಗಿ ಪಂಪ್ ಮೋಟಾರ್ ಅಳವಡಿಸಿ ತೋಟಗಳಿಗೆ ನೀರು ಹರಿಸುತ್ತಿದ್ದ ಪ್ರಕರಣ ಬೆಳಕಿಗೆ ಬಂದಿದ್ದು, ಗ್ರಾಮ ಪಂಚಾಯಿತಿ ಅಧಿಕಾರಿಗಳು ದಾಳಿ ನಡೆಸಿ ಪಂಪ್ ಮೋಟಾರ್, ಕೇಬಲ್ ವೈರ್ ಹಾಗೂ ಪೈಪುಗಳನ್ನು ವಶಕ್ಕೆ ಪಡೆದಿದ್ದಾರೆ.

ತರ್ನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಯಲ್ಲಿ ಕೆಲವರು ಕೆರೆಯ ನೀರನ್ನು ಕೃಷಿ ತೋಟಗಳಿಗೆ ಬಳಸಿಕೊಳ್ಳುತ್ತಿರುವ ಬಗ್ಗೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಆರ್. ಗೌಡ ಅವರಿಗೆ ಮಾಹಿತಿ ದೊರೆತಿತ್ತು. ಈ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಅಕ್ರಮವಾಗಿ ಅಳವಡಿಸಲಾಗಿದ್ದ ಪಂಪ್ ಮೋಟಾರ್, ಕೇಬಲ್ ವೈರ್ ಹಾಗೂ ನೀರು ಹರಿಸುವ ಪೈಪುಗಳನ್ನು ವಶಪಡಿಸಿಕೊಂಡರು.

ತಾಲೂಕಿನಲ್ಲಿ ಪ್ರಸಕ್ತ ವರ್ಷ ಮಳೆಯ ಕೊರತೆಯಿಂದಾಗಿ ಕೆರೆಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದ್ದು, ಇರುವ ನೀರನ್ನು ಜಾನುವಾರುಗಳ ಕುಡಿಯುವ ಅಗತ್ಯಕ್ಕಾಗಿ ಸಂರಕ್ಷಿಸಬೇಕಾಗಿದೆ. ಹೀಗಾಗಿ ಯಾವುದೇ ವ್ಯಕ್ತಿಗಳು ಕೆರೆ ನೀರನ್ನು ಅಕ್ರಮವಾಗಿ ಬಳಕೆ ಮಾಡಿಕೊಳ್ಳಬಾರದು ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಮಾತನಾಡಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಆರ್. ಗೌಡ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಳೆ ಕೊರತೆಯಿಂದ ನೀರಿನ ಸಮಸ್ಯೆ ಎದುರಾಗಿರುವ ಹಿನ್ನೆಲೆಯಲ್ಲಿ ಕೆರೆಗಳಲ್ಲಿನ ನೀರನ್ನು ಯಾರೂ ಖಾಸಗಿ ಉದ್ದೇಶಕ್ಕೆ ಬಳಸಿಕೊಳ್ಳಬಾರದು. ಜಾನುವಾರುಗಳ ಕುಡಿಯುವ ನೀರಿನ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ಕೆರೆ ನೀರನ್ನು ಸಂರಕ್ಷಿಸಬೇಕಾಗಿದೆ ಎಂದು ಹೇಳಿದರು.

ಯಾರೇ ಆಗಲಿ ಅಕ್ರಮವಾಗಿ ಕೆರೆ ನೀರನ್ನು ಪಂಪ್ ಮೂಲಕ ಬಳಸಿಕೊಂಡಿರುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಎಸ್‌ಡಿಎ ನಾಗರಾಜು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಪ್ರತಿ ತಾಲ್ಲೂಕಿನಲ್ಲಿಯೂ ಭವನ ನಿರ್ಮಾಣಕ್ಕೆ ಸಮಿತಿ ಸದಸ್ಯರ ಒಕ್ಕೊರಲ ಮನವಿ

ತುಮಕೂರು

ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿಯೂ ಸಂವಿಧಾನ ಶಿಲ್ಪಿ ಡಾ: ಬಿ.ಆರ್. ಅಂಬೇಡ್ಕರ್ ಹಾಗೂ ಹಸಿರುಕ್ರಾಂತಿ ಹರಿಕಾರ ಡಾ: ಬಾಬು ಜಗಜೀವನ ರಾಂ ಭವನ ನಿರ್ಮಿಸಲು 10 ಗುಂಟೆ ಜಾಗ ಮಂಜೂರು ಮಾಡಬೇಕೆಂದು ಜಿಲ್ಲಾ ಜಾಗೃತಿ ಉಸ್ತುವಾರಿ ಸಮಿತಿ ಸದಸ್ಯರು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಅನುಸೂಚಿತ ಜಾತಿ ಮತ್ತು ಬುಡಕಟ್ಟಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಜಿಲ್ಲಾ ಮಟ್ಟದ ಜಿಲ್ಲಾ ಜಾಗೃತಿ ಉಸ್ತುವಾರಿ ಸಮಿತಿ ಸಭೆಯಲ್ಲಿ ಈ ಮನವಿ ಮಾಡಲಾಯಿತು.

ಸಭೆಯ ಅಧ್ಯಕ್ಷತೆವಹಿಸಿದ್ದ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡುತ್ತಾ, ಆಷಾಡ ಮಾಸ ಪ್ರಯುಕ್ತ ಜಿಲ್ಲೆಯಲ್ಲಿ ಜರುಗುವ ವಿಶೇಷ ಜಾತ್ರೆ ಸಂದರ್ಭಗಳಲ್ಲಿ ಕೋಣಗಳ ಬಲಿ ಕೊಡುವುದನ್ನು ನಿರ್ಬಂಧಿಸಲು ಕ್ರಮಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಶಿಷ್ಠ ಜಾತಿ ಮತ್ತು ಪಂಗಡದ ಜನಾಂಗದವರು ದೇವಾಲಯ ಪ್ರವೇಶಕ್ಕೆ ಸಂಬಂಧಿಸಿದಂತೆ ಯಾವುದೇ ದೂರು ಬರದಂತೆ ಕ್ರಮವಹಿಸಬೇಕೆಂದು ನಿರ್ದೇಶನ ನೀಡಿದರು.

ಜಿಲ್ಲೆಯ ಉಪವಿಭಾಗ ಮಟ್ಟದಲ್ಲಿ ಕಡ್ಡಾಯವಾಗಿ ಜಾಗೃತಿ ಉಸ್ತುವಾರಿ ಸಮಿತಿ ಸಭೆಗಳನ್ನು ನಡೆಸಬೇಕು ಎಂದು ಉಪವಿಭಾಗಾಧಿಕಾರಿಗಳಿಗೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ವರ್ಗದ ಕುಂದುಕೊರತೆಗಳ ಸಭೆ ನಡೆಸಿ ತಮ್ಮ ಹಂತದಲ್ಲಿಯೇ ಪರಿಶೀಲಿಸಿ ಸಮಸ್ಯೆಯನ್ನು ಬಗೆಹರಿಸಬೇಕೆಂದು ಎಲ್ಲಾ ತಹಶೀಲ್ದಾರರಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್ ಮಾತನಾಡಿ, ಸಮಿತಿಯ ಮುಂದಿರುವ ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಾಕ್ಷಿದಾರರಿಗೆ ಯಾವುದೇ ಭಯ, ಆಮಿಷಗಳಿಗೆ ಒಳಗಾಗದಂತೆ ಸಾಕ್ಷಿ ನುಡಿಯಲು ಧೈರ್ಯ ತುಂಬಿ ಕ್ರಮವಹಿಸುವಂತೆ ಈಗಾಗಲೇ ಜಿಲ್ಲೆಯ ಎಲ್ಲಾ ಉಪಾಧೀಕ್ಷಕರುಗಳಿಗೆ ಸೂಚನೆ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಪಾಲಿಕೆ ಆಯುಕ್ತೆ ಬಿ.ಶುಭ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಘುಚಂದ್ರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ॥ ಬಿ.ಎಂ. ಚಂದ್ರಶೇಖರ್, ಉಪವಿಭಾಗಾಧಿಕಾರಿ ನಾಹಿದಾ ಜ಼ಂ ಜ಼ಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಯೋಗಾನಂದ, ತಹಶೀಲ್ದಾರ್ ರಾಜೇಶ್ವರಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕಿ ಶಾರದಮ್ಮ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಸೋನಿಯಾ ವರ್ಣೇಕರ್, ವಿವಿಧ ತಾಲ್ಲೂಕಿನ ತಹಶೀಲ್ದಾರರು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಸ್‌ಐಆರ್ ಪ್ರಕ್ರಿಯೆ ವೇಗಗೊಳಿಸಲು ಸೂಚನೆ

ಶಿಡ್ಲಘಟ್ಟ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್) ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಹಶೀಲ್ದಾರ್ ಗಗನಸಿಂಧು ಅವರು ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟ್‌ಗಳಿಗೆ (ಬಿ.ಎಲ್.ಎ–2) ಸೂಚಿಸಿದರು.

ನಗರಸಭೆ ಸಭಾಂಗಣದಲ್ಲಿ ಶುಕ್ರವಾರ ನಡೆದ ಎಸ್.ಐ.ಆರ್ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮತದಾರರಿಗೆ ಈಗಾಗಲೇ ವಿತರಿಸಿರುವ ಅರ್ಜಿಗಳನ್ನು ಶೀಘ್ರವಾಗಿ ವಾಪಸ್ ಪಡೆದು, ಯಾವುದೇ ವಿಳಂಬವಿಲ್ಲದೆ ಡಿಜಿಟಲೀಕರಣ ಪ್ರಕ್ರಿಯೆಗೆ ಸಲ್ಲಿಸಬೇಕು ಎಂದು ತಿಳಿಸಿದರು.

ಯಾವುದೇ ಬೂತ್‌ಗಳಲ್ಲಿ ಬಾಕಿ ಉಳಿದಿರುವ ಅರ್ಜಿಗಳನ್ನು ಆದ್ಯತೆ ಮೇರೆಗೆ ಸಂಗ್ರಹಿಸಿ ಚುನಾವಣಾ ಅಧಿಕಾರಿಗಳಿಗೆ ಹಸ್ತಾಂತರಿಸಬೇಕು. ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದಲ್ಲಿ ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ವಿವಿಧ ವಾರ್ಡ್‌ಗಳ ಬೂತ್‌ವಾರು ಎಸ್.ಐ.ಆರ್ ಪ್ರಗತಿ ಪರಿಶೀಲಿಸಲಾಯಿತು. 12ನೇ ವಾರ್ಡ್‌ನ ಬೂತ್ ಸಂಖ್ಯೆ 143ರಲ್ಲಿ ಒಟ್ಟು 1,488 ಮತದಾರರಿದ್ದು, ಇದುವರೆಗೆ 822 ಅರ್ಜಿಗಳು ಮಾತ್ರ ವಾಪಸ್ ಬಂದಿವೆ. ಇನ್ನೂ 666 ಅರ್ಜಿಗಳು ಬಾಕಿ ಉಳಿದಿದ್ದು, ಅವುಗಳನ್ನು ತ್ವರಿತವಾಗಿ ಸಂಗ್ರಹಿಸುವಂತೆ ಸಂಬಂಧಿಸಿದ ಬಿ.ಎಲ್.ಎ–2ಗಳಿಗೆ ಸೂಚಿಸಿದರು.

ಅದೇ ರೀತಿ 2ನೇ ವಾರ್ಡ್‌ನ ಬೂತ್ ಸಂಖ್ಯೆ 129ರಲ್ಲಿ ಒಟ್ಟು 858 ಮತದಾರರಿದ್ದು, 663 ಅರ್ಜಿಗಳು ವಾಪಸ್ ಬಂದಿವೆ. ಉಳಿದ 195 ಅರ್ಜಿಗಳನ್ನು ಶೀಘ್ರವಾಗಿ ಪಡೆದು ಡಿಜಿಟಲೀಕರಣಕ್ಕೆ ಕಳುಹಿಸುವಂತೆ ತಿಳಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯ ಯಶಸ್ವಿಯಾಗಲು ರಾಜಕೀಯ ಪಕ್ಷಗಳ ಸಹಕಾರ ಅತ್ಯಂತ ಮುಖ್ಯವಾಗಿದೆ. ಬಿ.ಎಲ್.ಎ–2ಗಳು ಮನೆ ಮನೆಗೆ ತೆರಳಿ ಮತದಾರರನ್ನು ಸಂಪರ್ಕಿಸಿ ಬಾಕಿ ಇರುವ ಅರ್ಜಿಗಳನ್ನು ಸಂಗ್ರಹಿಸಬೇಕು. ನಿಗದಿತ ಕಾಲಮಿತಿಯೊಳಗೆ ಕಾರ್ಯ ಪೂರ್ಣಗೊಳಿಸುವ ಮೂಲಕ ಮತದಾರರ ಪಟ್ಟಿಯ ಶುದ್ಧತೆ ಹಾಗೂ ಪಾರದರ್ಶಕತೆ ಕಾಪಾಡಬೇಕು ಎಂದು ತಹಶೀಲ್ದಾರ್ ಗಗನಸಿಂಧು ಮನವಿ ಮಾಡಿದರು. ಸಭೆಯಲ್ಲಿ ಪೌರಾಯುಕ್ತೆ ಅಮೃತ, ಕೆಪಿಸಿಸಿ ಸದಸ್ಯ ಹಾಗೂ ಬಿ.ಎಲ್.ಎ–2 ಎಲ್. ಮಧು, ವಿವಿಧ ರಾಜಕೀಯ ಪಕ್ಷಗಳ ಬಿ.ಎಲ್.ಎ–2ಗಳು ಹಾಗೂ ಚುನಾವಣಾ ಸಿಬ್ಬಂದಿ ಉಪಸ್ಥಿತರಿದ್ದರು.

# ‘ಚೆನ್ನಮ್ಮ ಅವರ ಆರೋಗ್ಯ ಸ್ಥಿರ’

ಬೆಂಗಳೂರು

ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಪತ್ನಿ ಚೆನ್ನಮ್ಮ ಅವರ ಆರೋಗ್ಯ ಸ್ಥಿರವಾಗಿದೆ ಎಂದು ಎಂದು ಸಂಸದ ಡಾ.ಮಂಜುನಾಥ್ ಹೇಳಿದ್ದಾರೆ.

ನಗರದ ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿ ಚೆನ್ನಮ್ಮ ಅವರ ಆರೋಗ್ಯವನ್ನು ಅವರು ವಿಚಾರಿಸಿದರು. ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಈ ವೇಳೆ, ಚೆನ್ನಮ್ಮನವರ ಆರೋಗ್ಯದಲ್ಲಿ ಚೇತರಿಕೆ ಕಂಡಿದೆ. ವೈದ್ಯರು ಸಹ ಆರೋಗ್ಯ ಸುಧಾರಣೆ ಕಾಣುತ್ತಿದೆ ಎಂದು ತಿಳಿಸಿದ್ದಾರೆ ಎಂದರು.

ತೀವ್ರ ಉಸಿರಾಟದ ತೊಂದರೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಗುರುವಾರ ರಾತ್ರಿ ಚೆನ್ನಮ್ಮ ಅವರನ್ನ ತುರ್ತು ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ತಜ್ಞ ವೈದ್ಯರ ನಿಗಾದಲ್ಲಿ ಅವರಿಗೆ ಚಿಕಿತ್ಸೆ ಮುಂದುವರಿದಿದ್ದು, ಅಗತ್ಯ ವೈದ್ಯಕೀಯ ಪರೀಕ್ಷೆಗಳನ್ನೂ ನಡೆಸಲಾಗುತ್ತಿದೆ.

ವೈದ್ಯಕೀಯ ಮೂಲಗಳ ಮಾಹಿತಿ ಪ್ರಕಾರ, ಚೆನ್ನಮ್ಮ ಅವರ ಆರೋಗ್ಯ ಸದ್ಯ ಸ್ಥಿರವಾಗಿದ್ದು, ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ. ಚಿಕಿತ್ಸೆಗೆ ಉತ್ತಮವಾಗಿ ಸ್ಪಂದಿಸುತ್ತಿದ್ದು, ವೈದ್ಯರು ನಿರಂತರವಾಗಿ ಆರೋಗ್ಯದ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಅವರನ್ನು ಆಸ್ಪತ್ರೆಯಲ್ಲೇ ಇರಿಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿದುಬಂದಿದೆ.

18/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ‘ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಬಿಜೆಪಿ ಡ್ರಾಮಾ ಮಾಡುತ್ತಿದೆ’

ಬೆಂಗಳೂರು

ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಬಿಜೆಪಿ ನಾಯಕರು ರೈತರ ಹೆಸರಿನಲ್ಲಿ ರಾಜಕೀಯ ಮಾಡುತ್ತಿದ್ದು, ಅಧಿಕಾರದಲ್ಲಿದ್ದಾಗ ಭೂಸ್ವಾಧೀನಕ್ಕೆ ಮುಂದಾಗಿ, ಈಗ ವಿರೋಧ ಪಕ್ಷದಲ್ಲಿದ್ದು ಮೊಸಳೆ ಕಣ್ಣೀರು ಸುರಿಸುತ್ತಿದ್ದಾರೆ ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪ್ರತಿಕ್ರಿಯಿಸಿರುವ ಅವರು, 2006ರಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿ ಸರ್ಕಾರ ಅಧಿಕಾರದಲ್ಲಿದ್ದಾಗ ಅಂದಿನ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಹಾಗೂ ಉಪಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನೇತೃತ್ವದಲ್ಲೇ ಬಿಡದಿ ಸೇರಿದಂತೆ ಐದು ಸಮಗ್ರ ಟೌನ್‌ಶಿಪ್‌ಗಳ ಅಭಿವೃದ್ಧಿಗೆ ತೀರ್ಮಾನ ಕೈಗೊಳ್ಳಲಾಗಿತ್ತು ಎಂದು ನೆನಪಿಸಿದರು.

ಬಿಡದಿ ಟೌನ್‌ಶಿಪ್ ಯೋಜನೆಗೆ 2006ರಲ್ಲೇ ಅಧಿಸೂಚನೆ ಹೊರಡಿಸಲಾಗಿದ್ದು, ಆ ಸಂದರ್ಭದಲ್ಲಿ ಆರ್. ಅಶೋಕ್ ಅವರು ಸಚಿವರಾಗಿದ್ದರು. ಬಳಿಕ 2010ರಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಟೌನ್‌ಶಿಪ್ ಅನುಷ್ಠಾನಕ್ಕಾಗಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿತ್ತು ಎಂದು ಅವರು ತಿಳಿಸಿದರು.

2020ರಲ್ಲಿ ಬಿಜೆಪಿ ಸರ್ಕಾರದ ಆಡಳಿತದಲ್ಲಿಯೇ ಸುಮಾರು 9 ಸಾವಿರ ಎಕರೆ ಪ್ರದೇಶದಲ್ಲಿ ಸಮಗ್ರ ಟೌನ್‌ಶಿಪ್ ಅಭಿವೃದ್ಧಿಪಡಿಸುವ ಕುರಿತು ಸಭೆ ನಡೆಸಿ ನಿರ್ಧಾರ ಕೈಗೊಳ್ಳಲಾಗಿತ್ತು. ಆ ಸಂದರ್ಭದಲ್ಲೂ ಆರ್. ಅಶೋಕ್ ಸಚಿವರಾಗಿದ್ದರು ಎಂದು ಸಚಿವರು ಹೇಳಿದರು.

ನಂತರ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರವು 2022–23ರ ಬಜೆಟ್‌ನಲ್ಲಿ ಸಮಗ್ರ ಟೌನ್‌ಶಿಪ್ ಯೋಜನೆಯನ್ನು ಘೋಷಿಸಿ, ಅದರ ಅನುಷ್ಠಾನಕ್ಕಾಗಿ ಮತ್ತೊಂದು ಉನ್ನತ ಮಟ್ಟದ ಸಮಿತಿಯನ್ನು ರಚಿಸಿತ್ತು ಎಂದು ರಾಮಲಿಂಗಾರೆಡ್ಡಿ ಉಲ್ಲೇಖಿಸಿದರು.

ರೈತರ ಬಗ್ಗೆ ನಿಜವಾಗಿಯೂ ಕಾಳಜಿ ಇದ್ದಿದ್ದರೆ ಬಿಜೆಪಿ ಅಧಿಕಾರದಲ್ಲಿದ್ದಾಗಲೇ ಅಧಿಸೂಚನೆಯನ್ನು ರದ್ದುಪಡಿಸಬೇಕಿತ್ತು. ಅಂದು ಯಾವುದೇ ಕ್ರಮ ಕೈಗೊಳ್ಳದವರು ಇಂದು ರೈತರ ಪರವೆಂದು ಹೇಳಿಕೊಳ್ಳುವುದು ಕೇವಲ ರಾಜಕೀಯ ನಾಟಕ ಎಂದು ಅವರು ಟೀಕಿಸಿದರು.

ಅಧಿಕಾರದಲ್ಲಿದ್ದಾಗ ಬಿಡದಿ ಟೌನ್‌ಶಿಪ್ ಅಭಿವೃದ್ಧಿಯ ಯೋಜನೆ ಎಂದು ಬಣ್ಣಿಸಿದ್ದ ಬಿಜೆಪಿ, ಇಂದು ಅದೇ ಯೋಜನೆಯ ಕಾನೂನುಬದ್ಧ ಪ್ರಕ್ರಿಯೆಗಳು ಮುಂದುವರಿದಾಗ ಅದನ್ನು ರೈತ ವಿರೋಧಿ ಎಂದು ಹೇಳುತ್ತಿರುವುದು ದ್ವಂದ್ವ ನೀತಿಯಾಗಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ಆರೋಪಿಸಿದರು.

# ಐಟಿ ಮತ್ತು ಇಂಪ್ಲಿಟೇಶನ್ ಸಲಹೆಗಾರರಾಗಿ ಬೇಳೂರು ಸುದರ್ಶನ್

ಬೆಂಗಳೂರು



ಕೇಂದ್ರ ಸರ್ಕಾರದ ಮಾಹಿತಿ ತಂತ್ರಜ್ಞಾನ ಮತ್ತು ಜಾರಿ ಭಾರತೀಯ ಭಾಷಾ ಸಮಿತಿಯ ಸಲಹೆಗಾರರಾಗಿ ರಾಜ್ಯದ ಬೇಳೂರು ಸುದರ್ಶನ್ ನಿಯೋಜನೆಗೊಂಡಿದ್ದಾರೆ.

ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಭಾರತೀಯ ಭಾಷೆಗಳ ಕಲರವವನ್ನು ಸಕಲ ರಂಗಗಳಲ್ಲಿ ಮೂಡಿಸಬೇಕು ಮತ್ತು ಡಿಜಿಟಲ್ ಅದಿಯಾಗಿ ಎಲ್ಲ ವೇದಿಕೆಗಳಲ್ಲೂ ಬೆಳೆಯಬೇಕು ಎಂಬ ಹಿನ್ನೆಲೆಯಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು 2021ರಲ್ಲಿ ಪದ್ಮಶ್ರೀ ಪುರಸ್ಕೃತ ಚ.ಮೂ.ಕೃಷ್ಣಶಾಸ್ತ್ರಿಯವರ ಅಧ್ಯಕ್ಷತೆಯಲ್ಲಿ ಕೇಂದ್ರ ಶಿಕ್ಷಣ ಸಚಿವಾಲಯದಲ್ಲಿ ರಚಿಸಿದ, ಉನ್ನತಾಧಿಕಾರದ ಭಾರತೀಯ ಭಾಷಾ ಸಮಿತಿಯ ಸಲಹೆಗಾರನಾಗಿರುವುದು ನನಗೆ ಒದಗಿದ ಅವಕಾಶ ಭಾಗ್ಯವೆಂದೇ ಭಾವಿಸಿದ್ದೇನೆ ಎಂದು ಅವರು ಹರ್ಷವ್ಯಕ್ತಪಡಿಸಿದ್ದಾರೆ.

ಕಣಜ, ಭಾರತವಾಣಿ ಜಾಲತಾಣಗಳ ಅಭಿವೃದ್ಧಿ, ರಾಜ್ಯ ಸರ್ಕಾರದ ಜಾಲತಾಣಗಳ ಏಕರೂಪತೆ ವರದಿ ಮತ್ತು ಜಾರಿ, ಹಿಂದಿನ ರಾಜ್ಯ ಸರ್ಕಾರದ ಮುಖ್ಯಮಂತ್ರಿಯವರ ಇ–ಆಡಳಿತ ಸಲಹೆಗಾರ ಹೊಣೆಗಾರಿಕೆಗಳಿಂದ ಮತ್ತು ತಮ್ಮದೇ ಕಲಿಕೆಯಿಂದ ಹೊಂದಿದ ಅನುಭವಗಳ ಹಿನ್ನೆಲೆಯಲ್ಲಿ ಈ ಹೊಸ ಜವಾಬ್ದಾರಿಯಲ್ಲೂ ತಾವು ತಮ್ಮಿಂದಾದ ಗುಣಮಟ್ಟದ ಸೇವೆ ನೀಡುವ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದ್ದಾರೆ.

# ಸರ್ಕಾರಿ ಕಾಲೇಜು ಅಧ್ಯಾಪಕರ ವರ್ಗಾವಣೆಯಲ್ಲಿ ಅಕ್ರಮ ಆರೋಪ

ಬೆಂಗಳೂರು

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಧ್ಯಾಪಕರ ವರ್ಗಾವಣೆ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪ ಕೇಳಿಬಂದಿದ್ದು, ಕಾಲೇಜು ಶಿಕ್ಷಣ ಇಲಾಖೆಯ ಉನ್ನತ ಅಧಿಕಾರಿಗಳ ವಿರುದ್ಧ ಅಧ್ಯಾಪಕರ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ವರ್ಗಾವಣೆ ಪ್ರಕ್ರಿಯೆ ಹೈಕೋರ್ಟ್ ಆದೇಶಗಳಿಗೆ ವಿರುದ್ಧವಾಗಿ ನಡೆಸಲಾಗಿದೆ ಎಂದು ಆರೋಪಿಸಿರುವ ಅಧ್ಯಾಪಕರು, ಸರ್ಕಾರದ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ದೂರಿದ್ದಾರೆ.

ನ್ಯಾಯಾಲಯದ ಆದೇಶಗಳನ್ನು ಪಾಲಿಸದೆ ಅಧಿಕಾರಿಗಳು ಏಕಪಕ್ಷೀಯವಾಗಿ ವರ್ಗಾವಣೆ ಪ್ರಕ್ರಿಯೆ ನಡೆಸಿದ್ದಾರೆ ಎಂದು ಆರೋಪಿಸಿರುವ ಅವರು, ಈ ಕುರಿತು ಮುಖ್ಯಮಂತ್ರಿ, ಲೋಕಾಯುಕ್ತ ಹಾಗೂ ರಾಜ್ಯಪಾಲರಿಗೆ ದೂರು ಸಲ್ಲಿಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ನಿರ್ಧಾರ ಮಾಡಿದ್ದಾರೆ.

ಹಿಂದಿನ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಅವರ ಅವಧಿಯಲ್ಲಿ ಹೈಕೋರ್ಟ್ ನಿರ್ದೇಶನದಂತೆ ಪಾರದರ್ಶಕ ವರ್ಗಾವಣೆ ಪ್ರಕ್ರಿಯೆ ಆರಂಭಿಸಲಾಗಿತ್ತು. ಸಂಬಂಧಿತ ಅಧ್ಯಾಪಕರನ್ನು ವರ್ಗಾವಣೆ ಪಟ್ಟಿಯಲ್ಲಿ ಸೇರಿಸಿ, ಕಾನೂನು ರಕ್ಷಣೆಗಾಗಿ ‘ಕೇವಿಯಟ್’ ಸಲ್ಲಿಸಲಾಗಿತ್ತು. ಆದರೆ ಇತ್ತೀಚಿನ ಆಡಳಿತಾತ್ಮಕ ಬದಲಾವಣೆಗಳ ಬಳಿಕ ವರ್ಗಾವಣೆ ಪ್ರಕ್ರಿಯೆಯಲ್ಲಿ ಏಕಾಏಕಿ ಬದಲಾವಣೆ ಮಾಡಲಾಗಿದೆ ಎಂದು ಅಧ್ಯಾಪಕರು ಆರೋಪಿಸಿದ್ದಾರೆ.

ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ನೃಪತುಂಗ ವಿಶ್ವವಿದ್ಯಾಲಯ ಹಾಗೂ ಮಂಡ್ಯ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದ ಅಧ್ಯಾಪಕರನ್ನು ಯಾವುದೇ ಸ್ಪಷ್ಟ ಕಾರಣವಿಲ್ಲದೆ ವರ್ಗಾವಣೆ ಪಟ್ಟಿಯಿಂದ ಕೈಬಿಡಲಾಗಿದೆ. ಈ ನಿರ್ಧಾರ ಯಾವ ಕಾನೂನು ಆಧಾರದ ಮೇಲೆ ಕೈಗೊಳ್ಳಲಾಗಿದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ವಿಶ್ವವಿದ್ಯಾಲಯಗಳ ಹುದ್ದೆಗಳ ವಿಲೀನ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಅಲ್ಲಿನ ಅಧ್ಯಾಪಕರು ಸರ್ಕಾರದ ನಿಯೋಜನೆಯಲ್ಲಿರುವ ಅಧಿಕಾರಿಗಳಾಗಿರುತ್ತಾರೆ ಎಂಬ ನ್ಯಾಯಾಲಯದ ಅಭಿಪ್ರಾಯವಿದ್ದರೂ, ಅವರನ್ನು ವರ್ಗಾವಣೆ ಪ್ರಕ್ರಿಯೆಯಿಂದ ಹೊರಗಿಡಲಾಗಿದೆ ಎಂದು ಅಧ್ಯಾಪಕರು ಪ್ರಶ್ನಿಸಿದ್ದಾರೆ.

ವರ್ಗಾವಣೆ ಪ್ರಕ್ರಿಯೆಯಲ್ಲಿ ’ಎ’ ವಲಯದ 56 ಹುದ್ದೆಗಳನ್ನು ಪರಿಗಣಿಸದೇ ಇರುವುದೂ ಅನುಮಾನಕ್ಕೆ ಕಾರಣವಾಗಿದೆ ಎಂದು ಅವರು ತಿಳಿಸಿದ್ದಾರೆ. ವರ್ಗಾವಣೆ ಪಟ್ಟಿಯಲ್ಲಿ 56 ಮಂದಿಯ ಹೆಸರುಗಳಿದ್ದರೂ, 37 ಅಧ್ಯಾಪಕರನ್ನು ಕೈಬಿಟ್ಟು ಕೇವಲ 19 ಮಂದಿಯನ್ನು ಮಾತ್ರ ಸೇರಿಸಿರುವುದು ಹೈಕೋರ್ಟ್ ಆದೇಶದ ಉಲ್ಲಂಘನೆಯಾಗಿದೆ ಎಂದು ಆರೋಪಿಸಲಾಗಿದೆ.

# ಕೆಆರ್‌ಇಡಿಎಲ್ ನೂತನ ವ್ಯವಸ್ಥಾಪಕ ನಿರ್ದೇಶಕಿಯಾಗಿ ದಿವ್ಯ ಪ್ರಭು ಅಧಿಕಾರ ಸ್ವೀಕಾರ

ಬೆಂಗಳೂರು



ಹಿರಿಯ ಐಎಎಸ್ ಅಧಿಕಾರಿ ದಿವ್ಯ ಪ್ರಭು ಜಿ.ಆರ್.ಜೆ ಅವರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ (ಕೆಆರ್‌ಇಡಿಎಲ್) ಸಂಸ್ಥೆಯ ನೂತನ ವ್ಯವಸ್ಥಾಪಕ ನಿರ್ದೇಶಕಿಯಾಗಿ ಶುಕ್ರವಾರ ಅಧಿಕೃತವಾಗಿ ಅಧಿಕಾರ ಸ್ವೀಕರಿಸಿದರು.

ರಾಜ್ಯ ಸರ್ಕಾರದ ಆದೇಶದಂತೆ ಕೆಆರ್‌ಇಡಿಎಲ್‌ನ ವ್ಯವಸ್ಥಾಪಕ ನಿರ್ದೇಶಕಿಯಾಗಿ ನೇಮಕಗೊಂಡಿರುವ ದಿವ್ಯ ಪ್ರಭು ಅವರು ಸಂಸ್ಥೆಯ ಕಚೇರಿಯಲ್ಲಿ ಅಧಿಕಾರ ವಹಿಸಿಕೊಂಡರು.

ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ರಾಜ್ಯದ ಮಹತ್ವಾಕಾಂಕ್ಷಿ ಯೋಜನೆಗಳ ಅನುಷ್ಠಾನ, ಸೌರ, ಪವನ ಹಾಗೂ ಇತರ ಹಸಿರು ಇಂಧನ ಯೋಜನೆಗಳಿಗೆ ವೇಗ ನೀಡುವುದು ಮತ್ತು ಹೂಡಿಕೆಗಳನ್ನು ಆಕರ್ಷಿಸುವ ನಿಟ್ಟಿನಲ್ಲಿ ಕೆಆರ್‌ಇಡಿಎಲ್ ಪ್ರಮುಖ ಪಾತ್ರವಹಿಸುತ್ತಿದ್ದು, ಸಂಸ್ಥೆಯ ಮುಂದಿನ ಕಾರ್ಯಚಟುವಟಿಕೆಗಳಿಗೆ ದಿವ್ಯ ಪ್ರಭು ಅವರ ನೇತೃತ್ವ ಮಹತ್ವ ಪಡೆದುಕೊಂಡಿದೆ.

ಅಧಿಕಾರ ಸ್ವೀಕಾರದ ವೇಳೆ ಕೆಆರ್‌ಇಡಿಎಲ್‌ನ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದು, ನೂತನ ವ್ಯವಸ್ಥಾಪಕ ನಿರ್ದೇಶಕಿಗೆ ಶುಭಾಶಯ ಕೋರಿದರು.

# ‘ಸಚಿವ ಸಂಪುಟ ವಿಸ್ತರಣೆಗೆ ವರಿಷ್ಠರ ಮಾರ್ಗದರ್ಶನ’

ನವದೆಹಲಿ

ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷದ ವರಿಷ್ಠರೊಂದಿಗೆ ಚರ್ಚೆ ನಡೆಸಿದ್ದು, ಅವರ ಮಾರ್ಗದರ್ಶನದಂತೆ ಮುಂದಿನ ಸಿದ್ಧತೆಗಳನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.



ನವದೆಹಲಿಯಲ್ಲಿ ಕಾಂಗ್ರೆಸ್ ಪಕ್ಷದ ಹಳೆಯ ಕೇಂದ್ರ ಕಚೇರಿ ಬಳಿ ಶುಕ್ರವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಶುಕ್ರವಾರ ಭೇಟಿ ಮಾಡಲು ಸಾಧ್ಯವಾಗಿಲ್ಲ. ಶನಿವಾರ ಅವರನ್ನು ಭೇಟಿ ಮಾಡಿ ಸಚಿವ ಸಂಪುಟ ವಿಸ್ತರಣೆ ಕುರಿತು ಅಂತಿಮ ಮಾರ್ಗದರ್ಶನ ಪಡೆಯಲಾಗುವುದು ಎಂದು ಹೇಳಿದರು. ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ಮಹಾನಗರ ಪಾಲಿಕೆಗಳ ಚುನಾವಣೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಡಿಸೆಂಬರ್ 31ರವರೆಗೆ ಕಾಲಾವಕಾಶ ನೀಡಿರುವುದಾಗಿ ತಿಳಿಸಿದ ಅವರು, ಜಿಬಿಎ ಚುನಾವಣೆಗಳನ್ನು ಡಿಸೆಂಬರ್ ಅಂತ್ಯದೊಳಗೆ ನಡೆಸಲಾಗುವುದು ಎಂದು ಹೇಳಿದರು.

ಇದರ ಜೊತೆಗೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ನಗರಸಭೆ ಹಾಗೂ ಪುರಸಭೆ ಸೇರಿದಂತೆ ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು 2027ರ ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಈ ಬಾರಿಯ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಯುವಕರು ಮತ್ತು ಹೊಸ ಮುಖಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದ ಸಿಎಂ, ಗ್ರಾಮ ಪಂಚಾಯಿತಿಯಿಂದ ನಗರ ಪಾಲಿಕೆಗಳವರೆಗೆ ಹೊಸ ನಾಯಕತ್ವವನ್ನು ಬೆಳೆಸುವ ಉದ್ದೇಶ ಸರ್ಕಾರಕ್ಕಿದೆ ಎಂದರು.

ಸ್ಥಳೀಯ ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಸಂವಿಧಾನದ 73ನೇ ಹಾಗೂ 74ನೇ ತಿದ್ದುಪಡಿಗಳ ಆಶಯಕ್ಕೆ ಅನುಗುಣವಾಗಿ ಅಧಿಕಾರ ವಿಕೇಂದ್ರೀಕರಣಕ್ಕೆ ಸರ್ಕಾರ ಆದ್ಯತೆ ನೀಡಲಿದೆ ಎಂದು ಹೇಳಿದರು.

ಸಚಿವ ಸಂಪುಟ ವಿಸ್ತರಣೆ, ಸ್ಥಳೀಯ ಸಂಸ್ಥೆಗಳ ಚುನಾವಣೆ ಹಾಗೂ ಪಕ್ಷದ ಸಂಘಟನೆಗೆ ಸಂಬಂಧಿಸಿದಂತೆ ಮುಂದಿನ ದಿನಗಳಲ್ಲಿ ವರಿಷ್ಠರ ನಿರ್ದೇಶನದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.



ಮಂತ್ರಾಲಯದ ಶ್ರೀ ಶ್ರೀ ಸುಬುಧೇಂದ್ರ ತೀರ್ಥರು ಶ್ರೀ ಮಂತ್ರಾಲಯ ಮಠದ ಗುರು ಪರಂಪರೆಯ ಶ್ರೀ ಸುಶೀಲೇಂದ್ರ ತೀರ್ಥರ 100ನೇ ಆರಾಧನೆ ಪ್ರಯುಕ್ತ ಹಾವೇರಿ ಜಿಲ್ಲೆಯ ಹೊಸರಿತ್ತಿಯಲ್ಲಿರುವ ವೃಂದಾವನಕ್ಕೆ ನೂತನ ಸುವರ್ಣ ಕವಚ ಸಮರ್ಪಣೆ ಮಾಡಿದರು.

# ರೈತ ವಿರೋಧಿ ಧೋರಣೆ ವಿರುದ್ಧ ರಾಜ್ಯಾದ್ಯಂತ ಹೋರಾಟ

ಬೆಂಗಳೂರು

ರಾಜ್ಯ ಸರ್ಕಾರ ರೈತರ ಹಿತಾಸಕ್ತಿಯನ್ನು ನಿರ್ಲಕ್ಷಿಸಿ ಅಧಿಕಾರದ ದುರುಪಯೋಗ ಮಾಡುತ್ತಿದೆ ಎಂದು ಆರೋಪಿಸಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ರೈತರ ಫಲವತ್ತಾದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ನಿರ್ಧಾರವನ್ನು ತಕ್ಷಣ ಹಿಂಪಡೆಯುವಂತೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಭೀಕರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದರೂ ಜನರ ಸಂಕಷ್ಟಗಳಿಗೆ ಸ್ಪಂದಿಸುವ ಬದಲು ಸರ್ಕಾರ ಅಧಿಕಾರದ ಮದದಲ್ಲಿ ತೊಡಗಿದೆ ಎಂದು ಟೀಕಿಸಿದರು.

ಬಿಡದಿ ಭಾಗದಲ್ಲಿ ರೈತರ ಫಲವತ್ತಾದ ಜಮೀನನ್ನು ಸ್ವಾಧೀನಪಡಿಸಿಕೊಂಡು ಟೌನ್‌ಶಿಪ್ ನಿರ್ಮಿಸಲು ಸರ್ಕಾರ ಮುಂದಾಗಿರುವುದನ್ನು ತೀವ್ರವಾಗಿ ವಿರೋಧಿಸಿದ ಯಡಿಯೂರಪ್ಪ, ಸರ್ಕಾರಿ ಜಮೀನುಗಳು ಲಭ್ಯವಿದ್ದರೂ ರೈತರ ಭೂಮಿಯನ್ನೇ ಗುರಿಯಾಗಿಸಿರುವುದು ರಿಯಲ್ ಎಸ್ಟೇಟ್ ಹಿತಾಸಕ್ತಿ ಹಾಗೂ ರಾಜಕೀಯ ಉದ್ದೇಶಗಳಿಗಾಗಿ ಎಂದು ಆರೋಪಿಸಿದರು. ಈ ಯೋಜನೆಯನ್ನು ಕೂಡಲೇ ಕೈಬಿಡಬೇಕು ಎಂದು ಆಗ್ರಹಿಸಿದರು.

ಎರಡನೇ ವಿಮಾನ ನಿಲ್ದಾಣದ ಸ್ಥಳ ಆಯ್ಕೆ ವಿಚಾರದಲ್ಲೂ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ರಾಜ್ಯದ ಪೂರ್ವ ಭಾಗದಲ್ಲಿ ವಿಮಾನ ನಿಲ್ದಾಣ ನಿರ್ಮಿಸಿದರೆ ಮಧ್ಯ ಹಾಗೂ ಉತ್ತರ ಕರ್ನಾಟಕದ ಜನರಿಗೆ ಅನುಕೂಲವಾಗುತ್ತದೆ. ಅಲ್ಲಿಯೇ ಸರ್ಕಾರಿ





ಜಮೀನು ಲಭ್ಯವಿದ್ದರೂ ರಿಯಲ್ ಎಸ್ಟೇಟ್ ಲಾಭಕ್ಕಾಗಿ ಯೋಜನೆಯನ್ನು ಕನಕಪುರ ಭಾಗದತ್ತ ಕೊಂಡೊಯ್ಯುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಜಲಾಶಯಗಳು ಬತ್ತಿ ಹೋಗಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದರೂ ಮುಖ್ಯಮಂತ್ರಿ ಹಾಗೂ ಸಚಿವರು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಮಂತ್ರಿಮಂಡಲ ವಿಸ್ತರಣೆಯ ವಿಚಾರವಾಗಿ ದೆಹಲಿಗೆ ಓಡಾಡುತ್ತಿದ್ದಾರೆ ಎಂದು ಟೀಕಿಸಿದರು.

ಪ್ರತಿಭಟನೆ ನಡೆಸಿದ ರೈತರು ಹಾಗೂ ಮಹಿಳೆಯರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ಮುಂದಿನ 24 ಗಂಟೆಗಳೊಳಗೆ ಹಿಂಪಡೆಯಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಭಾರತೀಯ ಜನತಾ ಪಕ್ಷ ಹಾಗೂ ಜನತಾ ದಳ (ಜಾತ್ಯತೀತ) ಒಟ್ಟಾಗಿ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ನಡೆಸಲಿದ್ದು, ಈ ಪ್ರತಿಭಟನೆ ಬೆಂಗಳೂರಿಗೆ ಮಾತ್ರ ಸೀಮಿತವಾಗದೆ ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದು ಎಂದು ಯಡಿಯೂರಪ್ಪ ತಿಳಿಸಿದರು.

ಕೇಂದ್ರದ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಆಡಳಿತವನ್ನು ಶ್ಲಾಘಿಸಿದ ಅವರು, ರಾಜ್ಯ ಸರ್ಕಾರ ಜನರ ಹಿತಾಸಕ್ತಿಯನ್ನು ಮರೆತು ಆಡಳಿತ ನಡೆಸುತ್ತಿದೆ ಎಂದು ಆರೋಪಿಸಿ, ಸರ್ಕಾರಕ್ಕೆ ಸಾರ್ವಜನಿಕರು ತಕ್ಕ ಉತ್ತರ ನೀಡಲಿದ್ದಾರೆ ಎಂದು ಹೇಳಿದರು.

# ‘ಜಿಬಿಎ ಚುನಾವಣೆ ಮುಂದೂಡುವಿಕೆಯಲ್ಲಿ ರಾಜ್ಯ ಸರ್ಕಾರದ ಷಡ್ಯಂತ್ರವಿದೆ’

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಚುನಾವಣೆಯನ್ನು ಮುಂದೂಡಿರುವುದರ ಹಿಂದೆ ರಾಜ್ಯ ಸರ್ಕಾರದ ಷಡ್ಯಂತ್ರ ಮತ್ತು ಕುತಂತ್ರ ಅಡಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

ನಗರದಲ್ಲಿ ಶುಕ್ರವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಮುಖ್ಯಮಂತ್ರಿಯವರೇ ಬೆಂಗಳೂರಿನ ಉಸ್ತುವಾರಿ ಸಚಿವರಾಗಿದ್ದರು. ಆದರೆ ನಗರ ಅಭಿವೃದ್ಧಿಯಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದ್ದು, ರಸ್ತೆಗಳ ಗುಂಡಿಗಳನ್ನು ಮುಚ್ಚುವ ಕೆಲಸವನ್ನೂ ಸಮರ್ಪಕವಾಗಿ ಮಾಡಿಲ್ಲ ಎಂದು ಟೀಕಿಸಿದರು.

ಇಂತಹ ಪರಿಸ್ಥಿತಿಯಲ್ಲಿ ಜಿಬಿಎ ಚುನಾವಣೆ ನಡೆದರೆ ಐದೂ ನಗರ ಪಾಲಿಕೆಗಳಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂಬ ಭಯದಿಂದ ರಾಜ್ಯ ಸರ್ಕಾರ ಚುನಾವಣಾ ಆಯೋಗದ ಮೂಲಕ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿ ಚುನಾವಣೆ ಮುಂದೂಡುವ ಪ್ರಯತ್ನ ನಡೆಸಿದೆ ಎಂದು ಆರೋಪಿಸಿದರು.

ಸುಪ್ರೀಂ ಕೋರ್ಟ್ ಡಿಸೆಂಬರ್‌ವರೆಗೆ ಕಾಲಾವಕಾಶ ನೀಡಿರುವುದರ ಹಿಂದೆ ರಾಜ್ಯ ಸರ್ಕಾರದ ರಾಜಕೀಯ ಉದ್ದೇಶವಿದ್ದು, ಇದು ಚುನಾವಣೆಯನ್ನು ಮುಂದೂಡುವ ಸಂಚಿನ ಭಾಗವಾಗಿದೆ ಎಂದು ವಿಜಯೇಂದ್ರ ಹೇಳಿದರು.

ಕಾಂಗ್ರೆಸ್ ಸರ್ಕಾರಕ್ಕೆ ಚುನಾವಣೆ ನಡೆಸುವ ಇಚ್ಛಾಶಕ್ತಿಯೂ ಇಲ್ಲ, ಬೆಂಗಳೂರಿನ ಅಭಿವೃದ್ಧಿ ಮಾಡುವ ಬದ್ಧತೆಯೂ ಇಲ್ಲ. ಅಭಿವೃದ್ಧಿ ವಿಚಾರದಲ್ಲಿ ವಿಫಲವಾಗಿರುವ ಕಾರಣದಿಂದಲೇ ಚುನಾವಣೆಯನ್ನು ಮುಂದೂಡುವ ತಂತ್ರ ಅನುಸರಿಸಲಾಗುತ್ತಿದೆ ಎಂದು ಅವರು ವಾಗ್ದಾಳಿ ನಡೆಸಿದರು.

# ‘ರಾಜ್ಯದಲ್ಲಿ ಸರಕು ರಫ್ತು ಹೆಚ್ಚಳಕ್ಕೆ ಸರ್ಕಾರದ ದೃಢ ಸಂಕಲ್ಪ’

ಬೆಂಗಳೂರು

> ದೇಶದ 120 ಆದ್ಯತೆಯ ಜಿಲ್ಲೆಗಳನ್ನು ಒಳಗೊಂಡಿರುವ ‘ಜಿಲ್ಲೆಯನ್ನು ರಫ್ತು ಕೇಂದ್ರವಾಗಿ ಅಭಿವೃದ್ಧಿಪಡಿಸುವ’ ಯೋಜನೆಯಡಿ ಕರ್ನಾಟಕದ ಬೆಂಗಳೂರು ನಗರ, ಬೆಳಗಾವಿ, ಹಾಸನ, ಕೋಲಾರ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳನ್ನು ಮೊದಲ ಹಂತದಲ್ಲಿ ಆಯ್ಕೆ ಮಾಡಲಾಗಿದೆ. ಬೆಂಗಳೂರು ಹೊರತುಪಡಿಸಿ ರಾಜ್ಯದ ಇತರ ಜಿಲ್ಲೆಗಳಲ್ಲಿ ಜವಳಿ, ಉಡುಪು, ರೇಷ್ಮೆ, ಚರ್ಮದ ಉತ್ಪನ್ನಗಳು, ಕೃಷಿ ಮತ್ತು ಸಂಸ್ಕರಿತ ಆಹಾರ ಉತ್ಪನ್ನಗಳ ರಫ್ತಿಗೆ ಹೆಚ್ಚಿನ ಅವಕಾಶಗಳಿವೆ...

ರಾಜ್ಯದ ಸರಕು ರಫ್ತನ್ನು ಮತ್ತಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರ ಹಲವು ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ. ರಾಜ್ಯದ ರಫ್ತು ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳುವ ಉದ್ದೇಶದಿಂದ ರಾಜ್ಯ ಮಟ್ಟದ ರಫ್ತು ಉತ್ತೇಜನಾ ಸಮಿತಿ ಸಭೆ ವಿಧಾನಸೌಧದಲ್ಲಿ ನಡೆಯಿತು.

ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ರಾಜ್ಯದ ರಫ್ತು ವಲಯದ ಬೆಳವಣಿಗೆ, ಹೊಸ ಅವಕಾಶಗಳು ಹಾಗೂ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಕುರಿತು ಚರ್ಚಿಸಲಾಯಿತು.

ದೇಶದ ಒಟ್ಟು ತಂತ್ರಾಂಶ ರಫ್ತಿನಲ್ಲಿ ಕರ್ನಾಟಕವು ಶೇ.41ರಷ್ಟು ಪಾಲು ಹೊಂದುವ ಮೂಲಕ ಮೊದಲ ಸ್ಥಾನದಲ್ಲಿದೆ. ಅಲ್ಲದೆ, ದೇಶದ ಒಟ್ಟಾರೆ ರಫ್ತು ವಲಯದಲ್ಲಿ ಶೇ.24ರಷ್ಟು ಪಾಲು ಹೊಂದಿ ಮುಂಚೂಣಿಯಲ್ಲಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಲಾಯಿತು.

ಸರಕು ರಫ್ತಿನ ಕ್ಷೇತ್ರದಲ್ಲಿ ಕರ್ನಾಟಕವು ಶೇ.7.78ರಷ್ಟು ಪಾಲು ಹೊಂದಿದ್ದು, ಗುಜರಾತ್, ಮಹಾರಾಷ್ಟ್ರ ಮತ್ತು ತಮಿಳುನಾಡಿನ ನಂತರ ನಾಲ್ಕನೇ ಸ್ಥಾನದಲ್ಲಿದೆ. ಈ ಕ್ಷೇತ್ರದಲ್ಲಿ ಇನ್ನಷ್ಟು ಪ್ರಗತಿ ಸಾಧಿಸಲು ಸರ್ಕಾರ ವಿಶೇಷ ಯೋಜನೆಗಳನ್ನು ರೂಪಿಸುತ್ತಿದೆ.

ಸಭೆಯಲ್ಲಿ ಭಾಗವಹಿಸಿದ್ದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ



ದರ್ಪಣ್ ಜೈನ್ ಅವರು, ರಫ್ತು ಉತ್ತೇಜನಾ ಮಿಷನ್ ಮೂಲಕ ಕೇಂದ್ರ ಸರ್ಕಾರವು ರಾಜ್ಯಗಳಿಗೆ ನೀಡುತ್ತಿರುವ ನೆರವು ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ದೇಶದ 120 ಆದ್ಯತೆಯ ಜಿಲ್ಲೆಗಳನ್ನು ಒಳಗೊಂಡಿರುವ ‘ಜಿಲ್ಲೆಯನ್ನು ರಫ್ತು ಕೇಂದ್ರವಾಗಿ ಅಭಿವೃದ್ಧಿಪಡಿಸುವ’ ಯೋಜನೆಯಡಿ ಕರ್ನಾಟಕದ ಬೆಂಗಳೂರು ನಗರ, ಬೆಳಗಾವಿ, ಹಾಸನ, ಕೋಲಾರ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳನ್ನು ಮೊದಲ ಹಂತದಲ್ಲಿ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು. ಬೆಂಗಳೂರು ಹೊರತುಪಡಿಸಿ ರಾಜ್ಯದ ಇತರ ಜಿಲ್ಲೆಗಳಲ್ಲಿ ಜವಳಿ, ಉಡುಪು, ರೇಷ್ಮೆ, ಚರ್ಮದ ಉತ್ಪನ್ನಗಳು, ಕೃಷಿ ಮತ್ತು ಸಂಸ್ಕರಿತ ಆಹಾರ ಉತ್ಪನ್ನಗಳ ರಫ್ತಿಗೆ ಹೆಚ್ಚಿನ ಅವಕಾಶಗಳಿವೆ ಎಂದು ದರ್ಪಣ್ ಜೈನ್ ಹೇಳಿದರು.

ಜಾಗತಿಕ ಮಟ್ಟದಲ್ಲಿ ಯಶಸ್ವಿಯಾಗಿರುವ ಮಾದರಿಗಳನ್ನು ಉಲ್ಲೇಖಿಸಿದ ಅವರು, ಪ್ರಮುಖ ಕಂಪನಿಗಳು ಹಾಗೂ ಬಹುರಾಷ್ಟ್ರೀಯ ಸಂಸ್ಥೆಗಳು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹೂಡಿಕೆ ಮತ್ತು ರಫ್ತು ಸಹಭಾಗಿತ್ವ ವಿಸ್ತರಿಸಲು ಆಸಕ್ತಿ ಹೊಂದಿವೆ ಎಂದು ತಿಳಿಸಿದರು.

ರಫ್ತು ಉತ್ತೇಜನಾ ಮಿಷನ್ ಅಡಿಯಲ್ಲಿ ಬ್ಯಾಂಕ್‌ಗಳಿಗೆ ಭದ್ರತಾ ನೆರವು, ಇ–ವಾಣಿಜ್ಯ ವೇದಿಕೆಗಳಿಗೆ ಆವರ್ತಕ ನಿಧಿ, ವಿಮಾನ ನಿಲ್ದಾಣಗಳಲ್ಲಿನ ಗೋದಾಮು ಸೌಲಭ್ಯ ಬಳಕೆಗೆ ಆರ್ಥಿಕ ನೆರವು ಹಾಗೂ ಬೆಂಗಳೂರಿನ ಹೊರಗಿನ ಜಿಲ್ಲೆಗಳ ರಫ್ತುದಾರರಿಗೆ ಸರಕು ಸಾಗಣೆ ವೆಚ್ಚದಲ್ಲಿ ಸಹಾಯಧನ ನೀಡುವ ಅವಕಾಶಗಳಿವೆ ಎಂದು ಮಾಹಿತಿ ನೀಡಲಾಯಿತು.

ರಾಜ್ಯದ ರಫ್ತು ಸಾಮರ್ಥ್ಯವನ್ನು ಹೆಚ್ಚಿಸಲು ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರವು ಹೆಚ್ಚಿನ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮಗಳು ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೂಚಿಸಿದರು.

ಉದಯೋನ್ಮುಖ ರಫ್ತುದಾರರು, ಕೈಗಾರಿಕೆಗಳು ಮತ್ತು ವ್ಯಾಪಾರಿಗಳಿಗೆ ಪ್ರಾಯೋಗಿಕ ತರಬೇತಿ ನೀಡುವ ಮೂಲಕ ರಫ್ತು ಚಟುವಟಿಕೆಗಳನ್ನು ಮತ್ತಷ್ಟು ವೇಗಗೊಳಿಸುವಂತೆ ಅವರು ನಿರ್ದೇಶನ ನೀಡಿದರು.

ಇತ್ತೀಚೆಗೆ ಭಾರತ ಮತ್ತು ಬ್ರಿಟನ್ ನಡುವೆ ನಡೆದ ಮುಕ್ತ ವ್ಯಾಪಾರ ಒಪ್ಪಂದ ಸೇರಿದಂತೆ ವಿವಿಧ ಅಂತಾರಾಷ್ಟ್ರೀಯ ವ್ಯಾಪಾರ ಒಪ್ಪಂದಗಳ ಅವಕಾಶಗಳನ್ನು ಬಳಸಿಕೊಂಡು ಎಲೆಕ್ಟ್ರಾನಿಕ್ಸ್, ಕೃಷಿ ಉತ್ಪನ್ನಗಳು, ಆಹಾರ ಸಂಸ್ಕರಣೆ, ಎಂಜಿನಿಯರಿಂಗ್, ಜವಳಿ, ಔಷಧ ಮತ್ತು ರೇಷ್ಮೆ ಉತ್ಪನ್ನಗಳ ರಫ್ತನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಸರ್ಕಾರದ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರದ ಪ್ರತಿನಿಧಿಗಳು, ಕೇಂದ್ರ ಸರ್ಕಾರದ ವಿದೇಶಿ ವ್ಯಾಪಾರ ಮಹಾನಿರ್ದೇಶನಾಲಯದ ಅಧಿಕಾರಿಗಳು, ಕೈಗಾರಿಕಾ ಸಂಸ್ಥೆಗಳು, ವಾಣಿಜ್ಯ ಮಂಡಳಿಗಳು ಹಾಗೂ ರಫ್ತು ಉತ್ತೇಜನಾ ಮಂಡಳಿಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy